ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೨೫

**ಪಟ್ಟಿ – ೧೦**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತೆರಡನೆಯ ಅಧಿವೇಶನ**

**ಶುಕ್ರವಾರ, ದಿನಾಂಕ: ೦೨ನೇ ಡಿಸೆಂಬರ್, ೨೦೧೬**

---

## ಸಮೂಹ – V

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು.

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

೩. ಉನ್ನತ ಶಿಕ್ಷಣ ಸಚಿವರು.

೪. ವಸತಿ ಸಚಿವರು.

೫. ಸಣ್ಣ ಕೈಗಾರಿಕೆ ಸಚಿವರು.

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು.

೭. ಸಾರಿಗೆ ಸಚಿವರು.

೮. ಗಣಿ ಮತ್ತು ಭೂವಿಜ್ಞಾನ ಸಚಿವರು.

---

## ಕಾಲ್ಪನಿಕ ವೇತನ ಜಾರಿ ಕುರಿತು ಶ್ರೀ ಬಸವರಾಜ ಹೊರಟ್ಟಿ ಶಿಫಾರಸ್ಸಿನ ವರದಿ ಕುರಿತು

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) –**

೯೭೪ (೧೨೫೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾಲ್ಪನಿಕ ವೇತನ ಜಾರಿ ಮಾಡುವ ನಿಟ್ಟಿನಲ್ಲಿ ಶ್ರೀ ಬಸವರಾಜ ಹೊರಟ್ಟಿ, ವಿಧಾನ ಪರಿಷತ್ ಸದಸ್ಯರ ಸಮಿತಿ ನೇಮಕ ಮಾಡಿ ಈ ಸಮಿತಿಯಿಂದ ಶಿಫಾರಸ್ಸು ವರದಿ ನೀಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದ್ದಲ್ಲಿ, ಸಮಿತಿ ರಚನೆ ಮಾಡಲು ಕಾರಣಗಳೇನು ;

(ಆ) ಸದರಿ ಸಮಿತಿ ನೀಡಿರುವ ಶಿಫಾರಸ್ಸಿನ ಮುಖ್ಯ ಅಂಶಗಳೇನು ; (ವಿವರ ನೀಡುವುದು)

(ಇ) ಸರ್ಕಾರಕ್ಕೆ ಸದರಿ ಸಮಿತಿ ನೀಡಿರುವ ವರದಿ ಜಾರಿ ಮಾಡಲು ಇರುವ ತೊಂದರೆಗಳೇನು ; (ವಿವರ ನೀಡುವುದು)

(ಈ) ಸರ್ಕಾರಕ್ಕೆ ಈ ನಿಟ್ಟಿನಲ್ಲಿ ಆರ್ಥಿಕವಾಗಿ ಹೆಚ್ಚಾಗುವ ಮೊತ್ತವೆಷ್ಟು ; ಸೇವೆಗೆ ನೇಮಕಾತಿ ಆದ ದಿನಾಂಕದಿಂದ ಆಗಿರುವ ಮೊತ್ತವೆಷ್ಟು ; ಹಾಗೂ ಅನುದಾನಕ್ಕೆ ಒಳಪಟ್ಟ ದಿನಾಂಕದಿಂದ ಮೊತ್ತದ ಪ್ರಮಾಣವೆಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## KMERC ಗಣಿಗಾರಿಕೆಯ ಭಾಧ್ಯತೆಗೆ ಒಳಗಾಗಿರುವ ಹೊಸಪೇಟೆ ನಗರ ಅಭಿವೃದ್ಧಿ ಕುರಿತು

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) –**

೯೭೫ (೧೨೫೫) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) KMERC (Karnataka Mining Environment Restoration Corporation) ವತಿಯಿಂದ, ಗಣಿಗಾರಿಕೆಯಿಂದ ಭಾಧ್ಯತೆಗೆ ಒಳಗಾದ ಹೊಸಪೇಟೆ ನಗರದಲ್ಲಿ ಸರ್ಕಾರವು ಕೈಗೊಂಡಿರುವ ತುರ್ತು ಅಭಿವೃದ್ಧಿ ಕಾರ್ಯಗಳೇನು ; (ಮಾಹಿತಿ ನೀಡುವುದು)

(ಆ) ಈಗಾಗಲೇ ಗಣಿಗಾರಿಕೆಯಿಂದ ಬಾಧ್ಯತೆಗೊಳಗಾದ ಪ್ರದೇಶಗಳ ಅಭಿವೃದ್ಧಿಗಾಗಿ ಕ್ರಿಯಾ ಯೋಜನೆ ತಯಾರಿಸಲಾಗಿದೆಯೇ ; ಹಾಗಾದರೆ, ಕ್ರಿಯಾ ಯೋಜನೆಯಲ್ಲಿ ಕೈಗೊಳ್ಳುವ ಯೋಜನೆಗಳಾವುವು ; (ಸಂಪೂರ್ಣ ವಿವರ ನೀಡುವುದು)

(ಇ) ಗಣಿಗಾರಿಕೆಯಿಂದಾಗಿ ಬಳ್ಳಾರಿ ಸಂಪರ್ಕ ಹೊಂದುವ ಕಚ್ಚಾ ಬೈಪಾಸ್ ರಸ್ತೆ ಸಂಪೂರ್ಣವಾಗಿ ಹಾಳಾಗಿದ್ದು, ಸರಕು ಸಾಗಾಣಿಕೆ ಮತ್ತು ಇನ್ನಿತರೆ ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಳ್ಳುವ ಕ್ರಮವೇನು ? (ಮಾಹಿತಿ ನೀಡುವುದು)

## ಸರ್ಕಾರಿ ಶಾಲೆ ಹಾಗೂ ಕಾಲೇಜುಗಳಿಗೆ ಮೂಲಭೂತ ಸೌಕರ್ಯಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) –**

೯೭೬ (೧೨೫೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್–ಕರ್ನಾಟಕದ ೬ ಜಿಲ್ಲೆಗಳಲ್ಲಿ ೧೯೯೫ರ ನಂತರ ಪ್ರಾರಂಭವಾದ ಖಾಸಗಿ ಶಾಲೆ ಹಾಗೂ ಕಾಲೇಜುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಶೈಕ್ಷಣಿಕವಾಗಿ ಹಿಂದುಳಿದ ಜಿಲ್ಲೆಗಳಲ್ಲಿ ಪ್ರಾರಂಭಗೊಂಡ ಖಾಸಗಿ ಶಾಲೆ ಹಾಗೂ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲು ಸರ್ಕಾರ ಮುಂದಾಗುವುದೇ ; ಇದ್ದಲ್ಲಿ, ಸರ್ಕಾರದ ಮುಂದಿರುವ ಕ್ರಮಗಳೇನು ;

(ಇ) ಹೈದ್ರಾಬಾದ್–ಕರ್ನಾಟಕದ ಪ್ರದೇಶದಲ್ಲಿ ೧೯೮೭ ರಿಂದ ೧೯೯೫ ರವರೆಗೆ ಪ್ರಾರಂಭಿಸಲಾದ ಖಾಸಗಿ ಶಾಲೆ ಹಾಗೂ ಕಾಲೇಜುಗಳೆಷ್ಟು ; ಅನುದಾನಕ್ಕೆ ಒಳಪಟ್ಟಂತಹ ಶಾಲೆ ಹಾಗೂ ಕಾಲೇಜುಗಳೆಷ್ಟು ; ಬಾಕಿ ಇರುವ ಶಾಲೆ ಹಾಗೂ ಕಾಲೇಜುಗಳೆಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## "ಗ್ರಾಮ ಸ್ವರಾಜ್" ಯೋಜನೆಯಡಿ ಕಂಪ್ಯೂಟರ್ ಖರೀದಿ ಹಗರಣದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) –**

೯೭೭ (೧೨೨೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಶ್ವ ಬ್ಯಾಂಕ್ ಧನ ಸಹಾಯದೊಂದಿಗೆ "ಗ್ರಾಮ ಸ್ವರಾಜ್" ಯೋಜನೆಯಡಿ ಕಂಪ್ಯೂಟರ್ ಹಾಗೂ ಪರಿಕರ ಖರೀದಿಸಲಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದಯೇ ; ಬಂದಿದ್ದರೆ, ಯೋಜನೆಯ ಸಂಪೂರ್ಣ ಮಾಹಿತಿ ನೀಡುವುದು ;

(ಆ) ಸದರಿ ಕಂಪ್ಯೂಟರ್ ಖರೀದಿಯ ಹಗರಣ ನಡೆದಿರುವ ವಿಷಯ ಸರ್ಕಾರದ ಗಮನಕ್ಕಿದೆಯೇ ; ಇದ್ದಲ್ಲಿ, ಮಾಹಿತಿ ನೀಡುವುದು ;

(ಇ) ಸದರಿ ಕಂಪ್ಯೂಟರ್ ಖರೀದಿ ಹಗರಣದ ಬಗ್ಗೆ ತನಿಖೆ ನಡೆಸಲಾಗಿದೆಯೇ ; ಇದ್ದಲ್ಲಿ, ತನಿಖೆಗಳ ವರದಿಯ ಸಂಪೂರ್ಣ ಮಾಹಿತಿ ನೀಡುವುದು ;

(ಈ) ಸದರಿ ಗೋಲ್‌ಮಾಲ್‌ನಲ್ಲಿ ಭಾಗಿಯಾಗಿರುವ ಅಧಿಕಾರಿಗಳು ಯಾರು ; ಅವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ? (ಮಾಹಿತಿ ನೀಡುವುದು)

## ಅಲ್ಪಸಂಖ್ಯಾತರ ಸಮುದಾಯದ ಪದವಿ ಕಾಲೇಜುಗಳಲ್ಲಿರುವ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) –**

೯೭೮ (೧೯೪೪) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಲ್ಪಸಂಖ್ಯಾತರ ಸಮುದಾಯ ಸಂಸ್ಥೆಗಳ ವತಿಯಿಂದ ನಡೆಸುತ್ತಿರುವ ಅನುದಾನಿತ ಪದವಿ ಕಾಲೇಜುಗಳಲ್ಲಿ ಮಂಜೂರಾದ ಹುದ್ದೆಗಳ ವಿವರ ನೀಡುವುದು ; (ಜಿಲ್ಲಾವಾರು, ಪದವಿ ಕಾಲೇಜುವಾರು ವಿವರ ನೀಡುವುದು)

(ಆ) ಮಂಜೂರಾದ ಹುದ್ದೆಗಳ ಪೈಕಿ ಪ್ರಸಕ್ತ ಕಾರ್ಯನಿರ್ವಹಿಸುತ್ತಿರುವ ಪ್ರಾಧ್ಯಾಪಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಪದವಿ ಕಾಲೇಜುವಾರು ವಿವರ ನೀಡುವುದು)

(ಇ) ಎಷ್ಟು ಹುದ್ದೆಗಳು ಖಾಲಿ ಇವೆ ; ಈ ಹುದ್ದೆಗಳು ಎಷ್ಟು ಅವಧಿಗಳಿಂದ ಖಾಲಿ ಇವೆ ; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡದಿರಲು ಕಾರಣಗಳೇನು ;

(ಈ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಪರವಾನಿಗೆ ಕೋರಿ ಅಲ್ಪಸಂಖ್ಯಾತ ಕಾಲೇಜುಗಳಿಂದ ಬಂದಿರುವ ಪ್ರಸ್ತಾವನೆಗಳ ಸಂಖ್ಯೆ ಎಷ್ಟು ; ಈ ಪೈಕಿ ಎಷ್ಟು ಪ್ರಸ್ತಾವನೆಗಳು ಪುರಸ್ಕೃತವಾಗಿವೆ ; ಹಾಗೂ ಎಷ್ಟು ತಿರಸ್ಕೃತವಾಗಿವೆ ; ಈ ಪ್ರಸ್ತಾವನೆಗಳು ತಿರಸ್ಕೃತವಾಗಲು ಕಾರಣವೇನು ? (ಜಿಲ್ಲಾವಾರು, ಸಂಸ್ಥೆವಾರು ಮಾಹಿತಿ ನೀಡುವುದು)

## ಶಿಕ್ಷಣ ಇಲಾಖೆಯಲ್ಲಿ ಪದವಿ ಪೂರ್ವ ಕಾಲೇಜುಗಳನ್ನು ಅಲ್ಪಸಂಖ್ಯಾತವೆಂದು ಘೋಷಿಸುವ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) –**

೯೭೯ (೧೯೪೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಲ್ಪಸಂಖ್ಯಾತರ ಸಮುದಾಯದ ವತಿಯಿಂದ ನಡೆಸಲಾಗುತ್ತಿರುವ ಪದವಿ ಪೂರ್ವ ಕಾಲೇಜುಗಳನ್ನು ಅಲ್ಪಸಂಖ್ಯಾತ ಕಾಲೇಜುಗಳೆಂದು ಘೋಷಿಸುವ ಪ್ರಾಧಿಕಾರ (Authority) ಯಾವುದು ;

(ಆ) ಇದಕ್ಕಾಗಿ ಸರ್ಕಾರ ನಿಗಧಿಪಡಿಸಿರುವ ಮಾನದಂಡಗಳೇನು ;

(ಇ) ಅಲ್ಪಸಂಖ್ಯಾತರ ಸಮುದಾಯದಿಂದ ನಡೆಸುತ್ತಿರುವ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು/ಕಾಲೇಜುವಾರು ಮಾಹಿತಿ ನೀಡುವುದು)

(ಈ) ಈ ಪೈಕಿ ಎಷ್ಟು ಕಾಲೇಜುಗಳನ್ನು ಅಲ್ಪಸಂಖ್ಯಾತರ ಕಾಲೇಜುಗಳೆಂದು ಘೋಷಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಉ) ಅಲ್ಪಸಂಖ್ಯಾತರ ಪದವಿ ಪೂರ್ವ ಕಾಲೇಜುಗಳೆಂದು ಘೋಷಿಸಲು ಇರುವ ಪ್ರಸ್ತಾವನೆಗಳು ಎಷ್ಟು ; (ಜಿಲ್ಲಾವಾರು ವಿವರ ನೀಡುವುದು) ಇತ್ಯರ್ಥವಾಗದೇ ಬಾಕಿ ಉಳಿಸಲು ಕಾರಣಗಳೇನು ; ಬಾಕಿ ಉಳಿದಿರುವ ಪ್ರಸ್ತಾವನೆಗಳನ್ನು ಯಾವ ಕಾಲಮಿತಿಯೊಳಗಾಗಿ ಇತ್ಯರ್ಥಗೊಳಿಸುವುದು ?

## ಉನ್ನತ ಶಿಕ್ಷಣ ಇಲಾಖೆಯಲ್ಲಿ ಪದವಿ ಕಾಲೇಜುಗಳನ್ನು ಅಲ್ಪಸಂಖ್ಯಾತವೆಂದು ಘೋಷಿಸುವ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) –**

೯೮೦ (೧೯೭೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಲ್ಪಸಂಖ್ಯಾತರ ಸಮುದಾಯದ ವತಿಯಿಂದ ನಡೆಸಲಾಗುತ್ತಿರುವ ಪದವಿ ಕಾಲೇಜುಗಳನ್ನು ಅಲ್ಪಸಂಖ್ಯಾತರ ಕಾಲೇಜುಗಳೆಂದು ಘೋಷಿಸುವ ಪ್ರಾಧಿಕಾರ (Authority) ಯಾವುದು ;

(ಆ) ಇದಕ್ಕಾಗಿ ಸರ್ಕಾರ ನಿಗಧಿಪಡಿಸಿರುವ ಮಾನದಂಡಗಳೇನು ;

(ಇ) ಅಲ್ಪಸಂಖ್ಯಾತರ ಸಮುದಾಯದಿಂದ ನಡೆಸುತ್ತಿರುವ ಪದವಿ ಕಾಲೇಜುಗಳು ಎಷ್ಟು ; (ಜಿಲ್ಲಾವಾರು ಕಾಲೇಜುಗಳ ಮಾಹಿತಿ ನೀಡುವುದು)

(ಈ) ಈ ಪೈಕಿ ಎಷ್ಟು ಕಾಲೇಜುಗಳನ್ನು ಅಲ್ಪಸಂಖ್ಯಾತ ಕಾಲೇಜುಗಳೆಂದು ಘೋಷಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಉ) ಅಲ್ಪಸಂಖ್ಯಾತರ ಪದವಿ ಕಾಲೇಜುಗಳೆಂದು ಘೋಷಿಸಲು ಬಾಕಿ ಇರುವ ಪ್ರಸ್ತಾವನೆಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು) ಇತ್ಯರ್ಥವಾಗದೇ ಬಾಕಿ ಉಳಿಯಲು ಕಾರಣಗಳೇನು ; ಬಾಕಿ ಉಳಿದಿರುವ ಪ್ರಸ್ತಾವನೆಗಳನ್ನು ಯಾವ ಕಾಲಮಿತಿಯೊಳಗೆ ಇತ್ಯರ್ಥಗೊಳಿಸಲಾಗುವುದು ?

## ಅಲ್ಪಸಂಖ್ಯಾತರ ಸಮುದಾಯದ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) –**

೬೮೧ (೧೦೯೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಲ್ಪಸಂಖ್ಯಾತರ ಸಮುದಾಯ ಸಂಸ್ಥೆಗಳ ವತಿಯಿಂದ ನಡೆಸುತ್ತಿರುವ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಮಂಜೂರಾದ ಹುದ್ದೆಗಳ ವಿವರ ನೀಡುವುದು ; (ಜಿಲ್ಲಾವಾರು, ಪದವಿ ಪೂರ್ವ ಕಾಲೇಜುವಾರು ವಿವರ ನೀಡುವುದು)

(ಆ) ಮಂಜೂರಾದ ಹುದ್ದೆಗಳ ಪೈಕಿ ಪ್ರಸಕ್ತ ಕಾರ್ಯನಿರ್ವಹಿಸುತ್ತಿರುವ ಪ್ರಾಧ್ಯಾಪಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಪದವಿ ಪೂರ್ವ ಕಾಲೇಜುವಾರು ವಿವರ ನೀಡುವುದು)

(ಇ) ಖಾಲಿ ಇರುವ ಹುದ್ದೆಗಳು ಎಷ್ಟು ; ಈ ಹುದ್ದೆಗಳು ಎಷ್ಟು ಅವಧಿಯಿಂದ ಖಾಲಿ ಇವೆ ; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡದಿರಲು ಕಾರಣಗಳೇನು ;

(ಈ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಪರವಾನಿಗೆ ಕೋರಿ ಅಲ್ಪಸಂಖ್ಯಾತರ ಕಾಲೇಜುಗಳಿಂದ ಬಂದಿರುವ ಪ್ರಸ್ತಾವನೆಗಳ ಸಂಖ್ಯೆ ಎಷ್ಟು ;

(ಉ) ಈ ಪೈಕಿ ಎಷ್ಟು ಪ್ರಸ್ತಾವನೆಗಳು ಪುರಸ್ಕೃತವಾಗಿವೆ ; ಹಾಗೂ ಎಷ್ಟು ತಿರಸ್ಕೃತವಾಗಿವೆ ; ಈ ಪ್ರಸ್ತಾವನೆಗಳು ತಿರಸ್ಕೃತವಾಗಲು ಕಾರಣಗಳೇನು ? (ಜಿಲ್ಲಾವಾರು, ಸಂಸ್ಥೆವಾರು ಮಾಹಿತಿ ನೀಡುವುದು)

## ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಶಾದಿ ಮಹಲ್ ನಿರ್ಮಾಣದ ಯೋಜನೆ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) –**

೯೮೨ (೧೯೫೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಶಾದಿ ಮಹಲ್ ನಿರ್ಮಾಣ ಯೋಜನೆಯಲ್ಲಿ ೦೩ ವರ್ಷಗಳಿಂದ ಎಷ್ಟು ಅನುದಾನ ಮಂಜೂರಾಗಿದೆ ; (ವಿವರ ನೀಡುವುದು)

(ಆ) ಈ ಯೋಜನೆಯಡಿಯಲ್ಲಿ ಮಂಜೂರಾದ ಶಾದಿ ಮಹಲ್‌ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಪೈಕಿ ಶಾದಿ ಮಹಲ್ ನಿರ್ಮಾಣ ಪೂರ್ಣಗೊಂಡಿರುವುದು ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಅಪೂರ್ಣಗೊಂಡಿರುವ ಶಾದಿ ಮಹಲ್‌ಗಳು ಎಷ್ಟು ; ಇದಕ್ಕೆ ಕಾರಣಗಳೇನು ? (ಜಿಲ್ಲಾವಾರು ಮಾಹಿತಿ ನೀಡುವುದು)

## ರಾಜ್ಯದ ಶಿಕ್ಷಣ ನೀತಿ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ ) –**

೯೮೩ (೧೯೯೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಜ್ಞಾನ ಆಯೋಗದಿಂದ ರಾಜ್ಯದ ಶಿಕ್ಷಣ ನೀತಿ ಕುರಿತು ಇಲ್ಲಿಯವರೆಗೂ ಎಷ್ಟು ಶಿಫಾರಸ್ಸುಗಳನ್ನು ನೀಡಲಾಗಿದೆ ; (ಪ್ರತಿ ನೀಡುವುದು)

(ಆ) ಇತ್ತೀಚೆಗೆ ನೀಡಿರುವ ಶಿಫಾರಸ್ಸುಗಳೇನು ; ಇವುಗಳ ಜಾರಿಯ ಕುರಿತು ಸರ್ಕಾರದ ನಿಲುವೇನು ?

## ಪ್ರೌಢಶಾಲೆ ಹಾಗೂ ಪದವಿ ಪೂರ್ವ ಉಪನ್ಯಾಸಕರಿಗೆ ವಿಶೇಷ ಬಡ್ತಿ ನೀಡುವ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ ) –**

೯೮೪ (೧೧೯೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳ ಶಿಕ್ಷಕ/ಉಪನ್ಯಾಸಕರು ಕುಮಾರ್ ನಾಯಕ್ ವರದಿಯಲ್ಲಿನ ಶಿಫಾರಸ್ಸಿನಂತೆ ಸರ್ಕಾರವು ಒಂದು ವೇತನ ಬಡ್ತಿ ನೀಡುವುದಾಗಿ ಘೋಷಣೆ ಮಾಡಿದ್ದು ನಿಜವೇ ; ಹಾಗಿದ್ದಲ್ಲಿ, ಅದನ್ನು ಜಾರಿಗೊಳಿಸುವ ನಿಟ್ಟಿನಲ್ಲಿ ಆದೇಶವನ್ನು ಹೊರಡಿಸಲಾಗಿದೆಯೇ ; ಪ್ರತಿ ಒದಗಿಸುವುದು ;

(ಆ) ಪಿ.ಯು. ಉಪನ್ಯಾಸಕರಿಗೆ ೬ನೇ ವೇತನ ಶ್ರೇಣಿಯಲ್ಲಿ ಕೊಡಲಾಗಿರುವ ೨೫ ಹಾಗೂ ೩೦ ವರ್ಷಗಳ ವೇತನ ಬಡ್ತಿ ನೀಡಲಾಗುತ್ತಿದೆಯೇ ; ಇಲ್ಲದಿದ್ದಲ್ಲಿ, ನೀಡಲು ಇರುವ ತಾಂತ್ರಿಕ ತೊಂದರೆಗಳೇನು ;

(ಇ) ತತ್ಸಮಾನ ಹುದ್ದೆಯಲ್ಲಿರುವಂತಹ ಶಿಕ್ಷಕರಿಗೆ ಈ ವೇತನ ಬಡ್ತಿಯನ್ನು ನೀಡಲು ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ ) –**

೯೮೫ (೧೧೯೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೧೯೮೭ ರಿಂದ ೧೯೯೫ರವರೆಗೂ ಆರಂಭವಾಗಿರುವ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಪ್ರಕ್ರಿಯೆ ನಡೆಯುತ್ತಿದೆಯೇ ;

(ಆ) ಕಳೆದ ೦೨ ವರ್ಷದಲ್ಲಿ ಇಲ್ಲಿಯವರೆಗೆ ಅನುದಾನಕ್ಕೆ ಒಳಪಡಿಸಿದ ಪ್ರತಿ ಶಾಲಾ ಕಾಲೇಜುಗಳ ಹಾಗೂ ಹುದ್ದೆಯ ವಿವರ ನೀಡುವುದು ;

(ಇ) ಸರ್ಕಾರದ ಹಂತದಲ್ಲಿ ಅನುಮೋದನೆಗಾಗಿ ಬಂದಿರುವ ಕಡತಗಳೆಷ್ಟು ; (ವಿವರ ನೀಡಿ) ಶಾಲಾ ಕಾಲೇಜುವಾರು ಯಾವ ಕಡತ ಯಾವ ಹಂತದಲ್ಲಿದೆ ಎನ್ನುವುದರ ಸಂಪೂರ್ಣ ಮಾಹಿತಿ ನೀಡುವುದು ;

(ಈ) ಅನುದಾನಕ್ಕೆ ಒಳಪಡಿಸುವ ಕುರಿತು ಸರ್ಕಾರದ ನೀತಿಯಲ್ಲಿ ಏನಾದರೂ ವ್ಯತ್ಯಾಸ ಆಗಿದೆಯೇ ; ಆಗಿದ್ದಲ್ಲಿ, ಆಗಿರುವ ವ್ಯತ್ಯಾಸದ ಕುರಿತು ವಿವರ ನೀಡುವುದು ;

(ಉ) ೧೯೯೫ರ ನಂತರ ಪ್ರಾರಂಭವಾದ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಕುರಿತು ಸರ್ಕಾರದ ನೀತಿ ಏನು ?

## AICTE ಹಾಗೂ UGC ವೇತನ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ ) –**

೯೮೬ (೧೧೯೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉನ್ನತ ಶಿಕ್ಷಣ ಇಲಾಖೆಯಲ್ಲಿ ಪಾಲಿಟೆಕ್ನಿಕ್ ಸಿಬ್ಬಂದಿಗಳಿಗೆ ಎ.ಐ.ಸಿ.ಟಿ.ಇ. ಸ್ಕೇಲ್ ಅನ್ನು ಯಾವ ದಿನಾಂಕದಿಂದ ಕೊಡಲಾಗಿದೆ ;

(ಆ) ಪದವಿ ಕಾಲೇಜುಗಳಿಗೆ ಯು.ಜಿ.ಸಿ. ಸ್ಕೇಲ್ ಅನ್ನು ಪ್ರಸಕ್ತ ಯಾವ ದಿನಾಂಕದಿಂದ ಕೊಡಲಾಗಿದೆ ;

(ಇ) ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಪ್ರಸಕ್ತ ಎ.ಐ.ಸಿ.ಟಿ.ಇ. ಸ್ಕೇಲ್ ಅನ್ನು ಯಾವ ದಿನಾಂಕದಿಂದ ಕೊಡಲಾಗಿದೆ ; (ಸಂಪೂರ್ಣ ವಿವರಣೆ ನೀಡುವುದು)

(ಈ) ಬಾಕಿ ಇರುವ ಕಾಲೇಜುಗಳ ಸಿಬ್ಬಂದಿಗಳ ವಿವರ ನೀಡುವುದು ? (AICTE ಹಾಗೂ UGC ಸೇರಿದಂತೆ)

## ಜಿಲ್ಲಾ ಮಟ್ಟದ R.T.A. ಸಭೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೯೮೭ (೧೨೫೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯಲ್ಲಿ ಜಿಲ್ಲಾ ಮಟ್ಟದ ರಸ್ತೆ ಸಾರಿಗೆ ಪ್ರಾಧಿಕಾರದ ಆರ್.ಟಿ.ಎ. (R.T.A.) ಸಭೆಯನ್ನು ಕನಿಷ್ಠ ಎಷ್ಟು ತಿಂಗಳಿಗೊಮ್ಮೆ ಕರೆಯಬೇಕೆಂದು ಸರ್ಕಾರ ನಿಗಧಿಪಡಿಸಿದೆ ;

(ಆ) ಕಳೆದ ಮೂರು ವರ್ಷಗಳಲ್ಲಿ ಮಂಡ್ಯ ಜಿಲ್ಲೆಯಲ್ಲಿ ಎಷ್ಟು ರಸ್ತೆ ಸಾರಿಗೆ ಪ್ರಾಧಿಕಾರದ ಸಭೆಗಳನ್ನು ನಡೆಸಲಾಗಿದೆ ; ಎಷ್ಟು ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ ; (ವರ್ಷವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆಯಲ್ಲಿ ಇರುವ ಒಟ್ಟು ಬಸ್‌ಗಳ ಸಂಖ್ಯೆ ಎಷ್ಟು ; ಹೊಸದಾಗಿ ಸೇರ್ಪಡೆಯಾಗಿರುವ ಬಸ್‌ಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಕಬ್ಬಿಣ ಮತ್ತು ಮ್ಯಾಂಗನೀಸ್ ಅದಿರಿನ ಉತ್ಪಾದನೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೯೮೮ (೧೨೫೧) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಬ್ಬಿಣ ಮತ್ತು ಮ್ಯಾಂಗನೀಸ್ ಅದಿರಿನ ವಾರ್ಷಿಕ ಉತ್ಪನ್ನವೆಷ್ಟು ;

(ಆ) ಇದರ ಅವಲಂಬಿತ ಕಾರ್ಖಾನೆಗಳಾವುವು ;

(ಇ) ಗಣಿಗಾರಿಕೆಯಿಂದ ಸರ್ಕಾರದ ಬೊಕ್ಕಸಕ್ಕೆ ಬರುವ ರಾಜಧನವೆಷ್ಟು ;

(ಈ) ರಾಜ್ಯದಲ್ಲಿ ಕಟ್ಟಡಗಳಿಗೆ ಉಪಯೋಗಿಸುವ ಕಬ್ಬಿಣ, ಸಿಮೆಂಟ್ ಬೆಲೆ ಹೆಚ್ಚಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಬೆಲೆ ಕಡಿಮೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮವೇನು ? (ವಿವರ ನೀಡುವುದು)

## ಹಂಚಿಕೆ ಮಾಡಲಾದ ಮನೆ ಮತ್ತು ನಿವೇಶನಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೯೮೯ (೧೨೫೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಹಂಚಿಕೆ ಮಾಡಲಾದ ವಿವಿಧ ವಸತಿ ಯೋಜನೆಗಳು ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ನಿವೇಶನರಹಿತರಿಗೆ ಹಂಚಿಕೆ ಮಾಡಲಾದ ವಿವಿಧ ಅಳತೆಯ ನಿವೇಶನಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಗ್ರಾಮ ಪಂಚಾಯಿತಿಗಳ ಮೂಲಕ ಹಂಚಿಕೆ ಮಾಡಲಾದ ವಿವಿಧ ವಸತಿ ಯೋಜನೆಯ ಮನೆಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಸ್ಥಳೀಯ ಸಂಸ್ಥೆಗಳು ತೆರಿಗೆಯೊಂದಿಗೆ ವಸೂಲು ಮಾಡಿದ ಗ್ರಂಥಾಲಯ ಸೆಸ್‌ನ್ನು ಗ್ರಂಥಾಲಯ ಇಲಾಖೆಗೆ ನೀಡುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ ) –**

೯೯೦ (೧೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ಸ್ಥಳೀಯ ಸಂಸ್ಥೆಗಳು ಪ್ರತಿ ವರ್ಷ ಆಸ್ತಿ ತೆರಿಗೆ ಜೊತೆಗೆ ಕಡ್ಡಾಯವಾಗಿ ವಸೂಲು ಮಾಡುತ್ತಿರುವ ಗ್ರಂಥಾಲಯ ತೆರಿಗೆಯ ಶೇಕಡಾ ಮೊತ್ತವೆಷ್ಟು ;

(ಆ) ಸ್ಥಳೀಯ ಸಂಸ್ಥೆಗಳಿಂದ ಅಂದರೆ ಮಹಾನಗರ ಸಭೆ, ಮಹಾನಗರ ಪಾಲಿಕೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗಳು ವಸೂಲು ಮಾಡಿದ ತೆರಿಗೆಯ ಮೊತ್ತದಲ್ಲಿ ಗ್ರಂಥಾಲಯ ಇಲಾಖೆಗೆ ಭರಿಸಲು ಬಾಕಿ ಇರುವ ಸೆಸ್ ಮೊತ್ತವೆಷ್ಟು ; (ಪ್ರತಿಯೊಂದು ಸಂಸ್ಥೆಯಿಂದ ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಸ್ಥಳೀಯ ಸಂಸ್ಥೆಗಳು ಕಡ್ಡಾಯವಾಗಿ ಸೆಸ್ ವಸೂಲು ಮಾಡಿ, ಗ್ರಂಥಾಲಯಗಳಿಗೆ ಬಿಡುಗಡೆ ಮಾಡದಿರಲು ಕಾರಣಗಳೇನು ;

(ಈ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ೫ ವಲಯಗಳ ೧೮೦ ಗ್ರಂಥಾಲಯಗಳಿಗೆ, ಹಣಕಾಸಿನ ಮುಗ್ಗಟ್ಟಿನಿಂದ ದಿನಪತ್ರಿಕೆಗಳ ಸರಬರಾಜು ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಏನು ಕ್ರಮ ಕೈಗೊಳ್ಳಲಾಗಿದೆ ;

(ಉ) ರಾಜ್ಯದಲ್ಲಿಯ ಎಲ್ಲಾ ಗ್ರಂಥಾಲಯಗಳಿಗೆ ಅದರ ಪಾಲಿಗೆ ಬರುವ ಹಣ ಬಿಡುಗಡೆ ಮಾಡಲು ತಕ್ಷಣ ಕ್ರಮ ಕೈಗೊಳ್ಳುವುದೇ ?

## ರಾಜ್ಯ ಶಿಕ್ಷಣ ವ್ಯವಸ್ಥೆಯಲ್ಲಿ ತ್ರಿ ಟೈರ್ ಪದ್ಧತಿಯನ್ನು ಪೂರ್ಣಪ್ರಮಾಣದಲ್ಲಿ ಅಳವಡಿಸುವ ಕುರಿತು

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ ) –**

೯೧ (೨೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಾಧ್ಯಮಿಕ ಶಿಕ್ಷಣ ಅಭಿಯಾನವನ್ನು ಯಾವ ದಿನಾಂಕದಿಂದ ಜಾರಿಗೆ ತರಲಾಗಿದೆ ; ಅದರ ಮುಖ್ಯ ಅಂಶಗಳೇನು ;

(ಆ) ಕಿರಿಯ ಪ್ರಾಥಮಿಕ ಶಾಲೆ, ಹಿರಿಯ ಪ್ರಾಥಮಿಕ ಶಾಲೆ ಹಾಗೂ ಮಾಧ್ಯಮಿಕ ಶಾಲೆ ಹೀಗೆ ಮೂರು ವಿವಿಧ ಶಿಕ್ಷಣ ವ್ಯವಸ್ಥೆಯು ದೇಶಾದ್ಯಂತ

ಜಾರಿಯಲ್ಲಿದ್ದು, ರಾಜ್ಯದಲ್ಲಿ ಈ ಪದ್ಧತಿಯನ್ನು ಈ ವರೆಗೆ ಅಳವಡಿಸದಿರಲು ಕಾರಣಗಳೇನು ; ಸದರಿ ಯೋಜನೆಯನ್ನು ಜಾರಿಗೊಳಿಸಲು ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಸಿ.ಬಿ.ಎಸ್.ಸಿ. ಪಠ್ಯಕ್ರಮವನ್ನು ಜಾರಿಯಲ್ಲಿ ತಂದಿದ್ದು, ಶಿಕ್ಷಕರ ಮತ್ತು ಮಕ್ಕಳ ಅನುಪಾತ ಯಾವ ಪ್ರಮಾಣದಲ್ಲಿದೆ ;

(ಈ) ರಾಜ್ಯದಲ್ಲಿ ಶಿಕ್ಷಕರ ಮತ್ತು ಮಕ್ಕಳ ಅನುಪಾತ (Teachers People Ratio) ಇನ್ನೂ ೧–೭೦ ಇರುವುದು ನಿಜವೇ ; ಹಾಗಿದ್ದಲ್ಲಿ, ಕೇಂದ್ರ ಶಿಕ್ಷಣ ಪದ್ಧತಿಯಲ್ಲಿ ಅಳವಡಿಸಿದಂತೆ ಮಕ್ಕಳ ಮತ್ತು ಶಿಕ್ಷಕರ ಅನುಪಾತವನ್ನು ರಾಜ್ಯ ಸರ್ಕಾರದ ಶಿಕ್ಷಣ ಪದ್ಧತಿಯಲ್ಲಿ ಅಳವಡಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಉ) ಸಿ.ಸಿ.ಇ. ಪದ್ಧತಿ ಅಳವಡಿಸಿದ ನಂತರವೂ ಸಹ ೭೦:೧ ಅನುಪಾತವನ್ನು ಮುಂದುವರೆಸಿದ್ದು, ಇದರಿಂದ ಶಿಕ್ಷಣ ಮಟ್ಟದ ಪ್ರಗತಿಗೆ ತೊಂದರೆಯಾಗಿದ್ದು, ಸರ್ಕಾರ ಕೇಂದ್ರದ ಮಾದರಿಯಲ್ಲಿ ಮಕ್ಕಳ ಮತ್ತು ಶಿಕ್ಷಕರ ಅನುಪಾತವನ್ನು ನಿಗಧಿಪಡಿಸಲು ಕ್ರಮ ಕೈಗೊಳ್ಳುವುದೇ ?

## ರಾಜ್ಯದ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಿಗೆ ದೈಹಿಕ ಶಿಕ್ಷಕರ ಹುದ್ದೆಗಳನ್ನು ಸೃಜಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ ) –**

೯೬೨ (೨೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಾಥಮಿಕ ಹಂತದಿಂದ ಪದವಿ ಪೂರ್ವ ಹಂತದವರಿಗೆ ದೈಹಿಕ ಶಿಕ್ಷಣವನ್ನು ಕಡ್ಡಾಯಗೊಳಿಸಲಾದ ಆದೇಶವನ್ನು ಯಾವಾಗ ಹೊರಡಿಸಲಾಯಿತು ;

(ಆ) ದೈಹಿಕ ಶಿಕ್ಷಣ ವಿಷಯ ಬೋಧನೆಗೆ ಪಠ್ಯ ಪುಸ್ತಕಗಳನ್ನು ಯಾವಾಗ ರಚಿಸಲಾಯಿತು ;

(ಇ) ಪಠ್ಯ ಪುಸ್ತಕ ಒದಗಿಸಿದ ನಂತರ ಬೋಧನೆಗೆ ದೈಹಿಕ ಶಿಕ್ಷಕರ ಹುದ್ದೆಗಳನ್ನು ಸೃಜಿಸಿಕೊಳ್ಳಲಾಗಿದೆಯೇ ; ಇಲ್ಲದಿದ್ದಲ್ಲಿ, ದೈಹಿಕ ಶಿಕ್ಷಣ ಪಠ್ಯ ಬೋಧನೆಗೆ ಮಾಡಿರುವ ಪರ್ಯಾಯ ವ್ಯವಸ್ಥೆಗಳೇನು ;

(ಈ) ರಾಜ್ಯದಲ್ಲಿ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಿಗೆ ಕಡ್ಡಾಯವಾಗಿ ದೈಹಿಕ ಶಿಕ್ಷಕರ ಹುದ್ದೆಗಳನ್ನು ಸೃಜಿಸಲು ಸರ್ಕಾರ ಉದ್ದೇಶಿಸಿದೆಯೇ ;

(ಉ) ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಅತಿಥಿ ಉಪನ್ಯಾಸಕರಿಗೆ ಯು.ಜಿ.ಸಿ. ನಿಗಧಿಪಡಿಸಿರುವ ಸಂಭಾವನೆ ನೀಡುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ ) –**

೯೯೩ (೧೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅತಿಥಿ ಉಪನ್ಯಾಸಕರಾಗಿ ಕೆಲಸ ಮಾಡುತ್ತಿರುವ ಶಿಕ್ಷಕರ ಹೆಸರು ಹಾಗೂ ಅವರು ಬೋಧಿಸುತ್ತಿರುವ ವಿಷಯಗಳು ಯಾವುವು ; ಅವರು ಸೇವೆ ಸಲ್ಲಿಸುತ್ತಿರುವ ಸಂಸ್ಥೆಯ ಹೆಸರು ಹಾಗೂ ಸಂಸ್ಥೆಗೆ ಸೇರಿದ ದಿನಾಂಕ (ಜಿಲ್ಲಾವಾರು ಮಾಹಿತಿ ನೀಡುವುದು) ಮತ್ತು ಅತಿಥಿ ಉಪನ್ಯಾಸಕರಿಗೆ ಸರ್ಕಾರ ಈಗ ನೀಡುತ್ತಿರುವ ಸಂಭಾವನೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಅತಿಥಿ ಉಪನ್ಯಾಸಕರಿಗೆ ಯು.ಜಿ.ಸಿ. ನಿಗಧಿಪಡಿಸಿದ ಸಂಭಾವನೆಯನ್ನು ರಾಜ್ಯದ ಅತಿಥಿ ಉಪನ್ಯಾಸಕರಿಗೆ ನೀಡಲು ಸರ್ಕಾರ ಉದ್ದೇಶಿಸಿದೆಯೇ ;

(ಇ) ಹಾಗಿದ್ದಲ್ಲಿ, ಯಾವಾಗ ಸರ್ಕಾರಿ ಆದೇಶ ಹೊರಡಿಸಲಾಗುವುದು ;

(ಈ) ಪ್ರತಿ ತಿಂಗಳು ಅತಿಥಿ ಉಪನ್ಯಾಸಕರಿಗೆ ಸಂಭಾವನೆ ಬಟವಾಡೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಕೊಳಚೆ ನಿರ್ಮೂಲನೆ ಮಂಡಳಿ ಅನುದಾನದ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೯೯೪ (೧೧೦೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೧೦ ವರ್ಷಗಳಲ್ಲಿ ಕೊಳಚೆ ನಿರ್ಮೂಲನೆ ಮಂಡಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; ಬಿಡುಗಡೆ ಮಾಡಿದ ಹಣದಲ್ಲಿ ವಿಜಯಪುರ ಜಿಲ್ಲೆಯ ಯಾವ ಯಾವ ಅಭಿವೃದ್ಧಿ ಕಾಮಗಾರಿಗಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; ಅದರಲ್ಲಿ ಈಗ ಖರ್ಚು ಮಾಡಿರುವ ಹಣವೆಷ್ಟು ; ಖರ್ಚು ಮಾಡದೆ ಬಾಕಿ ಉಳಿದಿರುವ ಮೊತ್ತವೆಷ್ಟು ; (ಕಾಮಗಾರಿವಾರು, ವರ್ಗವಾರು ವಿವರವಾದ ಸಂಪೂರ್ಣ ಮಾಹಿತಿ ನೀಡುವುದು)

(ಆ) ಕೊಳಚೆ ನಿರ್ಮೂಲನೆ ಮಂಡಳಿಗೆ ಸರ್ಕಾರದಿಂದ ಪ್ರತಿ ವರ್ಷ ಮಂಜೂರಾಗುವ ಮೊತ್ತ ಎಷ್ಟು ; ಸದರಿ ಹಣವನ್ನು ಯಾವ ಯಾವ ಕಾಮಗಾರಿಗಳ ಅನುಷ್ಠಾನಕ್ಕಾಗಿ ಬಿಡುಗಡೆ ಮಾಡಲಾಗುವುದು ? (ಸಂಪೂರ್ಣವಾದ ವಿವರವಾದ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣಕ್ಕೆ ಇರುವ ಯೋಜನೆಗಳ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೯೯೫ (೧೯೯೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣಕ್ಕೆ ಸಂಬಂಧಿಸಿದಂತೆ ಇರುವ ಯೋಜನೆಗಳು ಯಾವುವು ; (ಸಂಪೂರ್ಣ ವಿವರ ನೀಡುವುದು)

(ಆ) ರಾಜ್ಯದ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣಕ್ಕೆ ಸಂಬಂಧಿಸಿದಂತೆ ಇರುವ ಯೋಜನೆಗಳಲ್ಲಿ ಕೇಂದ್ರದ ಹಾಗೂ ರಾಜ್ಯದ ಪಾಲುಗಾರಿಕೆ ಎಷ್ಟು ;

(ಇ) ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಪಡೆಯುತ್ತಿರುವ ಒಂದು ಮಗುವಿಗೆ ನೀಡಲಾಗುತ್ತಿರುವ ಪುಸ್ತಕ, ಸಮವಸ್ತ್ರ, ಬೂಟು, ಸೈಕಲ್ ಹಾಗೂ ಇತರೆ ಸೌಲಭ್ಯಗಳು ಯಾವುವು ; ಹಾಗೂ ಅವುಗಳನ್ನು ಸರ್ಕಾರವು ಖರೀದಿಸುವ ಬೆಲೆ ಎಷ್ಟು ; ಮತ್ತು ಮಾರುಕಟ್ಟೆ ಬೆಲೆ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಈ) ರಾಜ್ಯದಲ್ಲಿ ಬಿಸಿ ಊಟಕ್ಕೆ ಪೂರೈಸಲಾಗುತ್ತಿರುವ ಒಂದು ಕೆ.ಜಿ. ಅಕ್ಕಿಯ, ತೊಗರಿ ಬೇಳೆ ಖರೀದಿ ಬೆಲೆ ಎಷ್ಟು ; ಹಾಗೂ ಸದರಿ ಅಕ್ಕಿಯ ಮಾರುಕಟ್ಟೆ ಬೆಲೆ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಉ) ರಾಜ್ಯದಲ್ಲಿ ಶಿಕ್ಷಣ ಇಲಾಖೆಗೆ ಬಿಸಿ ಊಟಕ್ಕೆ ಸಂಬಂಧಿಸಿದಂತೆ ಆಹಾರ ಧಾನ್ಯಗಳ ಖರೀದಿಗೆ ಸಂಬಂಧಿಸಿದಂತೆ ಇರುವ ನಿಯಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಕಾಮಗಾರಿ ಅನುಷ್ಠಾನ ವಿಳಂಬ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೯೧೬ (೧೮೯೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಯನಿರ್ವಾಹಕ ಅಭಿಯಂತರರು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಗೆ ರೂ.೧–೦೦ ಲಕ್ಷದವರೆಗೆ ಒಪ್ಪಂದವಾದ ಕಾಮಗಾರಿಗಳ ಬಿಲ್ಲನ್ನು ಮಾತ್ರ ಪಾವತಿಸಲು ಅಧಿಕಾರವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಾಮಗಾರಿಯ ಮೊತ್ತವು ೨–೦೦ ಲಕ್ಷಕ್ಕೆ ಮೇಲ್ಪಟ್ಟರೆ, ಬೆಳಗಾವಿ ಮತ್ತು ಬೆಂಗಳೂರು ಮುಖ್ಯ ಅಭಿಯಂತರರಿಗೆ ಸಲ್ಲಿಸಬೇಕಾಗುತ್ತದೆ ; ಮತ್ತು ಕಾಮಗಾರಿಗೆ ಅಗ್ರಿಮೆಂಟ್‌ಗಾಗಿ ಮೇಲಾಧಿಕಾರಿಗೆ ಸಲ್ಲಿಸಬೇಕಾಗಿರುವುದು ನಿಜವೇ ;

(ಇ) ಇದರಿಂದ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ವಿಳಂಬವಾಗುತ್ತಿದ್ದು, ಮುಂದಿನ ಅನುದಾನ ಹಂಚಿಕೆ ಮಾಡುವಲ್ಲಿ ತೊಂದರೆಯಾಗುತ್ತಿದ್ದು, ಇದರಿಂದ ಸಮಸ್ಯೆಗಳು ಉದ್ಭವವಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ;

(ಈ) ಬಂದಿದ್ದಲ್ಲಿ, ಸರ್ಕಾರವು ತೆಗೆದುಕೊಂಡ ಕ್ರಮವೇನು ? (ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಎಂ–ಸ್ಯಾಂಡ್ ತಯಾರಿಸುವ ಘಟಕಗಳ ವಿಚಾರ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) –**

೯೧೭ (೧೧೩೭) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಂ–ಸ್ಯಾಂಡ್ ತಯಾರಿಸುವ ಘಟಕಗಳು ಎಷ್ಟು ; ಅವುಗಳ ವಿವರ, ವಿಳಾಸ ಸಹಿತ ನೀಡುವುದು ;

(ಆ) ಅನಧಿಕೃತವಾಗಿ ಎಂ–ಸ್ಯಾಂಡ್ ತಯಾರಿಸುವ ಘಟಕಗಳನ್ನು ಪತ್ತೆ ಹಚ್ಚಲಾಗಿದೆಯೇ ; (ಅವುಗಳ ವಿವರ ನೀಡುವುದು)

(ಇ) ಅನಧಿಕೃತವಾಗಿ ಎಂ–ಸ್ಯಾಂಡ್ ತಯಾರಿಸುವ ಘಟಕಗಳ ವಿರುದ್ಧ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ಎಂ–ಸ್ಯಾಂಡ್ ತಯಾರಿಸಲು ಸರ್ಕಾರಕ್ಕೆ ಪರವಾನಗಿ ಕೋರಿ ಸಲ್ಲಿಸಿರುವ ಅರ್ಜಿಗಳು ಎಷ್ಟು ; ಎಷ್ಟು ದಿನಗಳಿಂದ ಅರ್ಜಿಗಳು ಬಾಕಿ ಉಳಿದಿದೆ ; ಎಷ್ಟು ದಿನಗಳಲ್ಲಿ ಇವುಗಳನ್ನು ಇತ್ಯರ್ಥಪಡಿಸಲಾಗುವುದು ?

## ವಿಶ್ವಭಾರತಿ ಸೇವಾ ಸಮಿತಿ ಸಂಸ್ಥೆಯ ಶಾಲೆಗಳ ಕುರಿತು

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) –**

೯೧೮ (೧೧೯೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯಲ್ಲಿನ ವಿಶ್ವಭಾರತಿ ಸೇವಾ ಸಮಿತಿ ಸಂಸ್ಥೆಯಡಿ ಕಾರ್ಯನಿರ್ವಹಿಸುತ್ತಿರುವ ಶಾಲೆಗಳು ಎಷ್ಟು ; ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಪ್ರತ್ಯೇಕ ಪಟ್ಟಿ ನೀಡುವುದು ; ಪ್ರತಿ ಶಾಲೆಯಲ್ಲಿ ಓದುತ್ತಿರುವ ಮಕ್ಕಳ ಸಂಖ್ಯೆಯ ೦೩ ವರ್ಷದ ವಿವರ ನೀಡುವುದು ; (ಫಲಿತಾಂಶ ಸಹಿತ)

(ಆ) ಪ್ರತಿ ಶಾಲೆಯಲ್ಲಿ ಎಸ್.ಎಸ್.ಎಲ್.ಸಿ. ಪ್ರವೇಶ ಪಡೆದು ನಿರಂತರ ತರಗತಿಗಳಿಗೆ ಹಾಜರಾದ, ಎಸ್.ಎಸ್.ಎಲ್.ಸಿ. ಪಾಸಾದ ವಿದ್ಯಾರ್ಥಿಗಳ ವಿವರಗಳನ್ನು ನೀಡುವುದು ;

(ಇ) ಪ್ರತಿ ಶಾಲೆಯ ಶಿಕ್ಷಕರ ಕಾರ್ಯಭಾರ, ವಿದ್ಯಾರ್ಥಿ/ಶಿಕ್ಷಕ ಅನುಪಾತ ; (ಸರ್ಕಾರಿ ನಿಯಮಗಳಿಗೆ ಹೋಲಿಕೆಯೊಂದಿಗೆ ವಿವರ ನೀಡುವುದು)

(ಈ) ಕಳೆದ ೦೨ ವರ್ಷಗಳಲ್ಲಿ ಅನುದಾನಕ್ಕೆ ಒಳಪಡಿಸಿದ ಪ್ರತಿ ಹುದ್ದೆಯ ಶಾಲಾವಾರು ವಿವರ ನೀಡುವುದು ;

(ಉ) ಪ್ರಸಕ್ತ ಆಡಳಿತ ಮಂಡಳಿಯಲ್ಲಿ ಯಾರು ಯಾರು ಇದ್ದಾರೆ ; ಕಳೆದ ೦೩ ವರ್ಷದ ಪಿ.ಟಿ.ಆರ್. ಪ್ರತಿ ಹಾಗೂ ಈ ಕುರಿತು ನ್ಯಾಯಾಲಯದಲ್ಲಿ ವ್ಯಾಜ್ಯವಿದ್ದೆಯೇ ? (ಸಂಪೂರ್ಣ ಮಾಹಿತಿ ನೀಡುವುದು)

## ರಾಯಚೂರು ಜಿಲ್ಲೆಯಲ್ಲಿರುವ ವಕ್ಫ್ ಆಸ್ತಿ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೯೯೯ (೧೧೭೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ವಕ್ಫ್ ಆಸ್ತಿ ಸಂರಕ್ಷಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು ನಗರದಲ್ಲಿ ನೂತನ ಈದ್ಗಾ ಮೈದಾನ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ೨೦೧೬–೧೭ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಗೆ ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಬಿಡುಗಡೆಯಾಗಿರುವ ಅನುದಾನ ಎಷ್ಟು ; ಫಲಾನುಭವಿಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಕಲಬುರಗಿ ವಿಶ್ವ ವಿದ್ಯಾಲಯದಲ್ಲಿ ಸಿಬ್ಬಂದಿ ಕೊರತೆ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೦೦ (೧೧೭೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೬–೧೭ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಗೆ ಉನ್ನತ ಶಿಕ್ಷಣಕ್ಕೆ ವಿವಿಧ ಯೋಜನೆಗಳಲ್ಲಿ ಬಿಡುಗಡೆಯಾದ ಅನುದಾನ ಎಷ್ಟು ; (ವಿವರ ನೀಡುವುದು)

(ಆ) ಕಲಬುರಗಿ ವಿಶ್ವ ವಿದ್ಯಾಲಯದಲ್ಲಿ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಯಚೂರಿನಲ್ಲಿರುವ ಪಿ.ಜಿ. ಸೆಂಟರ್‌ಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಯಚೂರು ಜಿಲ್ಲಾ ಪಂಚಾಯಿತಿಗಳಿಗೆ ಸೇರಿರುವ ವಿವಿಧ ಯೋಜನೆಗಳ ಹಣವನ್ನು ಆರ್ಥಿಕ ಇಲಾಖೆ ವಾಪಸ್ಸು ಪಡೆದಿರುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೦೧ (೧೧೭೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೧೬ ಮತ್ತು ೨೦೧೬–೧೭ನೇ ಸಾಲಿನಲ್ಲಿ ರಾಯಚೂರು ಜಿಲ್ಲಾ ಪಂಚಾಯಿತಿಗೆ ವಿವಿಧ ಯೋಜನೆಗಳ ಮುಖಾಂತರ ಬಿಡುಗಡೆ ಮಾಡಿದ ಅನುದಾನ ಎಷ್ಟು ; (ವಿವರ ನೀಡುವುದು)

(ಆ) ರಾಯಚೂರು ಜಿಲ್ಲೆಯಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕಗಳೆಷ್ಟು ; ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಘಟಕಗಳೆಷ್ಟು ; (ವಿವರ ನೀಡುವುದು)

(ಇ) ನೂತನ ಗ್ರಾಮ ಪಂಚಾಯತಿಗಳಿಗೆ ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ೨೦೧೬–೧೭ರಲ್ಲಿ ರಾಯಚೂರು ಜಿಲ್ಲೆಯಲ್ಲಿ ನೀರಿನ ಕೊರತೆ ಇರುವ ಗ್ರಾಮಗಳಲ್ಲಿ ಕುಡಿಯುವ ನೀರು ಸರಬರಾಜು ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಉ) ೨೦೧೬–೧೭ನೇ ಸಾಲಿನಲ್ಲಿ ರಾಯಚೂರು ಜಿಲ್ಲಾ ಪಂಚಾಯಿತಿಗೆ ಸೇರಿರುವ ವಿವಿಧ ಯೋಜನೆಗಳ ಹಣವನ್ನು ಆರ್ಥಿಕ ಇಲಾಖೆ ವಾಪಸ್ಸು ಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಆರ್ಥಿಕ ಇಲಾಖೆಯವರು ವಾಪಸ್ಸು ಪಡೆದಿರುವ ಹಣವನ್ನು ಜಿಲ್ಲಾ ಪಂಚಾಯತ್ ರಾಯಚೂರಿಗೆ ಮರಳಿ ಕೊಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ವಾಪಸ್ಸು ಹಣವನ್ನು ಮರಳಿಸಲು ತೆಗೆದುಕೊಳ್ಳುವ ಕಾಲಮಿತಿ ಅವಧಿ ಎಷ್ಟು ?

## ರಾಯಚೂರು ಜಿಲ್ಲೆಯಲ್ಲಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳು ಮತ್ತು ಪಿ.ಯು. ಕಾಲೇಜುಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೦೨ (೧೧೭೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಗೆ ಉರ್ದು ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಮಂಜೂರು ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು ಜಿಲ್ಲೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಯಚೂರು ಜಿಲ್ಲೆಯಲ್ಲಿರುವ ಪ್ರಸ್ತುತ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳೆಷ್ಟು ; ಮತ್ತು ಪ್ರೌಢ ಶಾಲೆ ಹಾಗೂ ಪಿ.ಯು. ಕಾಲೇಜುಗಳಲ್ಲಿ ತರಗತಿ ನಡೆಸಲು ಕೊಠಡಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ವಿಶ್ವವಿದ್ಯಾಲಯಗಳಿಗೆ ನಾಮನಿರ್ದೇಶನ ಮಾಡುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ ) –**

೧೦೦೩ (೧೨೪೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಎಷ್ಟು ವಿಶ್ವವಿದ್ಯಾನಿಲಯಗಳು ಇವೆ ; ಸದರಿ ವಿಶ್ವವಿದ್ಯಾನಿಲಯುಗಳ ಸಿಂಡಿಕೇಟ್‌ಗಳಿಗೆ ಸರ್ಕಾರದಿಂದ ನಾಮನಿರ್ದೇಶನಗೊಂಡ ಪ್ರತಿನಿಧಿಗಳೆಷ್ಟು ; ಹಾಲಿ ಖಾಲಿ ಇರುವ ಸ್ಥಾನಗಳೆಷ್ಟು ; (ಸಂಪೂರ್ಣವಾದ ವಿವರ ನೀಡುವುದು)

(ಆ) ಕಳೆದ ಒಂದೂವರೆ ವರ್ಷದ ಹಿಂದೆ, ಹಿಂದಿನ ಸರ್ಕಾರದಿಂದ ನಾಮನಿರ್ದೇಶನಗೊಂಡ ಸಿಂಡಿಕೇಟ್ ಸದಸ್ಯರ ಸದಸ್ಯತ್ವವನ್ನು ರದ್ದುಗೊಳಿಸಿರುವುದಕ್ಕೆ ಕಾರಣಗಳೇನು ; (ಮಾಹಿತಿ ನೀಡುವುದು)

(ಇ) ಪತ್ರಿಕೆಗಳಲ್ಲಿ ಕಳೆದ ಒಂದೂವರೆ ವರ್ಷದಿಂದ ರಾಜ್ಯದ ಬಹಳಷ್ಟು ವಿಶ್ವವಿದ್ಯಾಲಯಗಳಲ್ಲಿ ದುರಾಡಳಿತ ಹಾಗೂ ಹಗರಣದ ಪ್ರಕರಣಗಳು ವರದಿಯಾಗುತ್ತಿದ್ದು, ಇದಕ್ಕೆ ವಿಶ್ವವಿದ್ಯಾಲಯದ ಸಿಂಡಿಕೇಟ್‌ಗಳಲ್ಲಿ ಸರ್ಕಾರದಿಂದ ನಾಮನಿರ್ದೇಶಿತ ಸದಸ್ಯರೇ ಇಲ್ಲದಿರುವುದು ಕಾರಣವಲ್ಲವೇ ; (ಮಾಹಿತಿ ನೀಡುವುದು)

(ಈ) ಸರ್ಕಾರವು ವಿಶ್ವವಿದ್ಯಾಲಯಗಳ ಸಿಂಡಿಕೇಟ್‌ಗಳಿಗೆ ಸರ್ಕಾರದ ಪ್ರತಿನಿಧಿಗಳನ್ನು ನಾಮನಿರ್ದೇಶನಗೊಳಿಸಲು ವಿಳಂಬ ಮಾಡುತ್ತಿರಲು ಕಾರಣಗಳೇನು ;

(ಉ) ಯಾವ ಕಾಲಮಿತಿಯಲ್ಲಿ ನಾಮನಿರ್ದೇಶನ ಮಾಡಲಾಗುತ್ತದೆ ? (ಮಾಹಿತಿ ನೀಡುವುದು)

## ಕೆ.ಐ.ಎ.ಡಿ.ಬಿ. ನಿಂದ ಭೂಸ್ವಾಧೀನತೆಯ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ ) –**

೧೦೦೪ (೧೨೪೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಇಲ್ಲಿಯವರೆಗೆ ಎಷ್ಟು ಜಮೀನುಗಳನ್ನು ಸೆಕ್ಷನ್ ೨೮(೪)ರನ್ವಯ ಸ್ವಾಧೀನಪಡಿಸಿಕೊಳ್ಳಲಾಗಿದೆ ; (ಬಡಾವಣೆವಾರು, ವರ್ಷವಾರು, ವಿವರವಾದ ಮಾಹಿತಿ ನೀಡುವುದು)

(ಆ) ಸ್ವಾಧೀನಪಡಿಸಿಕೊಂಡ ಜಮೀನುಗಳಲ್ಲಿ ಎಷ್ಟು ಜಮೀನನ್ನು ಸೆಕ್ಷನ್ ೨೮(೮)ರನ್ವಯ ಮಂಡಳಿಯ ಹೆಸರಿಗೆ ಸ್ವಾಧೀನಕ್ಕೆ ಪಡೆಯಲಾಗಿದೆ ; ಉಳಿದಿರುವ ಜಮೀನು ಎಷ್ಟು ; (ಬಡಾವಣೆವಾರು, ವರ್ಷವಾರು, ವಿವರವಾದ ಮಾಹಿತಿ ನೀಡುವುದು)

(ಇ) ಸದರಿ ಜಮೀನನ್ನು ಇಲ್ಲಿಯವರೆಗೂ ಮಂಡಳಿ ಹೆಸರಿಗೆ ಸ್ವಾಧೀನ ಪಡೆಯದಿರಲು ಕಾರಣಗಳೇನು ; (ವಿವರವಾದ ಮಾಹಿತಿ ನೀಡುವುದು)

(ಈ) ಸ್ವಾಧೀನಪಡಿಸಿಕೊಂಡ ಜಮೀನುಗಳಲ್ಲಿ ಎಷ್ಟು ಕೈಗಾರಿಕಾ ವಸಾಹತು/ ಬಡಾವಣೆ, ಇತರೆಗಳನ್ನು ಅಭಿವೃದ್ಧಿಪಡಿಸಲಾಗಿದೆ ? (ವಿವರವಾದ ಮಾಹಿತಿ ನೀಡುವುದು)

## ಇನ್‌ವೆಸ್ಟ್ ಕರ್ನಾಟಕ–೨೦೧೬ರ ಖರ್ಚು ವೆಚ್ಚದ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ ) –**

೧೦೦೫ (೧೨೪೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಶ್ವ ಬಂಡವಾಳ ಹೂಡಿಕೆದಾರರ ಇನ್‌ವೆಸ್ಟ್ ಕರ್ನಾಟಕ–೨೦೧೬ ಸಮಾವೇಶದಲ್ಲಿ ಎಷ್ಟು ಕೈಗಾರಿಕೋದ್ಯಮಿಗಳು ಭಾಗವಹಿಸಿದ್ದರು ; ಇದರಲ್ಲಿ ಎಷ್ಟು ಒಪ್ಪಂದಗಳನ್ನು ಮಾಡಿಕೊಳ್ಳಲಾಯಿತು ;

(ಆ) ಈ ಒಪ್ಪಂದಗಳಲ್ಲಿ ಎಷ್ಟು ಒಪ್ಪಂದಗಳು ಕಾರ್ಯರೂಪಕ್ಕೆ ಬಂದಿವೆ ;

(ಇ) ಈ ಒಪ್ಪಂದಗಳ ಮೂಲಕ ಇಲ್ಲಿಯವರೆಗೂ ನಿಜವಾಗಿಯೂ ರಾಜ್ಯಕ್ಕೆ ಹರಿದು ಬಂದ ಬಂಡವಾಳವೆಷ್ಟು ; ವಾಸ್ತವಿಕವಾಗಿ ಹೂಡಿಕೆಯಾದ ಹಣವೆಷ್ಟು ;

(ಈ) ಈ ಕಾರ್ಯಕ್ರಮಕ್ಕೆ ಮಾಡಿದ ಸಂಪೂರ್ಣ ವೆಚ್ಚ ಎಷ್ಟು ; ಸರ್ಕಾರ ಬಿಡುಗಡೆ ಮಾಡಿದ ಅನುದಾನ ಎಷ್ಟು ? (ವಿವರವಾದ ಮಾಹಿತಿ ಮತ್ತು ಸಂಪೂರ್ಣ ವೆಚ್ಚದ ಬಿಲ್ಲು, ರಶೀದಿ ಮತ್ತು ಪಾವತಿ ಮಾಡಿದ ವಿವರಗಳೊಂದಿಗೆ ಮಾಹಿತಿ ನೀಡುವುದು)

## ಶಾಲೆಗಳಲ್ಲಿ ರಂಗ ಶಿಕ್ಷಣ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೦೬ (೧೧೨೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಾಥಮಿಕ ಮತ್ತು ಪ್ರೌಢ ಶಾಲಾ ಮಕ್ಕಳಿಗೆ ರಂಗ ಶಿಕ್ಷಣವನ್ನು ನೀಡಬೇಕೆಂಬುದು ರಂಗಾಸಕ್ತರ ಅಭಿಪ್ರಾಯವಾಗಿದೆಯೇ ; ಇದಕ್ಕೆ ಅನುಗುಣವಾಗಿ ರಂಗ ಶಿಕ್ಷಣವನ್ನು ನೀಡಬೇಕೆಂಬ ಉದ್ದೇಶ ಸರ್ಕಾರಕ್ಕಿದೆಯೇ ;

(ಆ) ಶಾಲೆಗಳಲ್ಲಿ ರಂಗ ತರಬೇತಿ ನೀಡಿ ನಾಟಕ, ಜಾನಪದ, ಕಲೆ ಮುಂತಾದ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ತರಬೇತಿ ನೀಡಲು ಅಗತ್ಯವಾದ ಶಿಕ್ಷಕರನ್ನು ನೇಮಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ ;

(ಇ) ಮಕ್ಕಳ ಮನೋವಿಕಾಸಕ್ಕೆ ಸಾಂಸ್ಕೃತಿಕ ಚಟುವಟಿಕೆಗಳು ಅಗತ್ಯವಾಗಿರುವುದರಿಂದ ಮುಂದಿನ ಶೈಕ್ಷಣಿಕ ವರ್ಷದಿಂದ ಈ ಪ್ರಸ್ತಾವನೆಯನ್ನು ಪರಿಶೀಲಿಸಿ ಜಾರಿಗೊಳಿಸಲಾಗುವುದೆ ?

## ವಸತಿರಹಿತರಿಗೆ ವಸತಿ ಹಂಚಿಕೆ ಮಾಡುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೦೭ (೧೧೨೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ರಾಜೀವ್‌ಗಾಂಧಿ ವಸತಿ ನಿಗಮದಿಂದ ಎಷ್ಟು ವಸತಿಗಳನ್ನು ಹಂಚಿಕೆ ಮಾಡಲಾಗಿದೆ ; (ಕಳೆದ ೨ ವರ್ಷಗಳ ಫಲಾನುಭವಿಗಳ ವಿವರ ನೀಡುವುದು)

(ಆ) ಆ ಜಿಲ್ಲೆಗಳಲ್ಲಿ ಎಷ್ಟು ಮನೆಗಳಿಗೆ ಬೇಡಿಕೆ ಬಂದಿದೆ ; ಇನ್ನೂ ಎಷ್ಟು ಜನರಿಗೆ ನೀಡಬೇಕಾಗಿದೆ ;

(ಇ) ಫಲಾನುಭವಿಗಳನ್ನು ಯಾವ ಮಾನದಂಡವನ್ನು ಅನುಸರಿಸಿ ಆಯ್ಕೆ ಮಾಡಲಾಗುತ್ತಿದೆ ? (ವಿವರ ನೀಡುವುದು)

## ಪ್ರಾಥಮಿಕ ಶಾಲೆಗಳಲ್ಲಿ ಡೊನೇಷನ್ ಹಾವಳಿ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೦೮ (೧೧೨೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಖಾಸಗಿ ಶಾಲೆಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢ ವಿದ್ಯಾಭ್ಯಾಸಕ್ಕಾಗಿ ಮಾಸಿಕ ಅಥವಾ ವಾರ್ಷಿಕವಾಗಿ ಇಂತಿಷ್ಟೆ ಹಣ ಪಡೆಯಬೇಕೆಂಬ ಬಗ್ಗೆ ಏನಾದರೂ ಆದೇಶ ಇದೆಯೇ ;

(ಆ) ನರ್ಸರಿ ಮತ್ತು ಪ್ರಾಥಮಿಕ ಶಾಲಾ ಪ್ರವೇಶಕ್ಕೆ ತಮಗೆ ಇಷ್ಟ ಬಂದಂತೆ ಡೊನೇಷನ್ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಡೊನೇಷನ್ ಹಾವಳಿಯನ್ನು ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ವಕ್ಫ್‌ಗೆ ಮೀಸಲಿಟ್ಟ ಹಣ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೦೯ (೧೧೧೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ ಮತ್ತು ೨೦೧೫–೧೬ನೇ ಸಾಲುಗಳಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ವಕ್ಫ್ ಬೋರ್ಡ್‌ಗಾಗಿ ಆಯವ್ಯಯದಲ್ಲಿ ನಿಗಧಿಪಡಿಸಿದ್ದ ಮೊಬಲಗೆಷ್ಟು ; ಖರ್ಚಾದ ಮೊಬಲಗೆಷ್ಟು ;

(ಆ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿರುವ ವಕ್ಫ್ ಸಂಸ್ಥೆಗೆ ಸೇರಿದ ಮಸೀದಿಗಳು ಮತ್ತು ದರ್ಗಾಗಳ ಸಂಖ್ಯೆ ಎಷ್ಟು ;

(ಇ) ೨೦೧೪–೧೫ ಮತ್ತು ೨೦೧೫–೧೬ನೇ ಸಾಲಿನಲ್ಲಿ ಇವುಗಳ ರಿಪೇರಿಗಾಗಿ ಎಷ್ಟು ಹಣ ಮೀಸಲಿಡಲಾಗಿತ್ತು ; ಬಿಡುಗಡೆಯಾಗಿರುವ ಹಣ ಎಷ್ಟು ; ಖರ್ಚಾಗಿರುವ ಹಣ ಎಷ್ಟು ?

## ಅಲರವಾಡ ಗ್ರಾಮದಲ್ಲಿರುವ ಮನೆಗಳ ಮರು ಮಂಜೂರಾತಿ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೧೦೧೦ (೧೨೬೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ತಾಲ್ಲೂಕು, ಅಲರವಾಡ ಗ್ರಾಮದಲ್ಲಿ ಹೌಸಿಂಗ್ ಬೋರ್ಡ್‌ನಿಂದ ಕಟ್ಟಿರುವ ಮನೆಗಳೆಷ್ಟು ; ಯಾವಾಗ ಕಟ್ಟಲಾಯಿತು ;

(ಆ) ಹಲವಾರು ವರ್ಷಗಳಿಂದ ನೂರಾರು ಮನೆಗಳು ಖಾಲಿ ಇದ್ದು, ಮಂಜೂರು ಮಾಡದಿರಲು ಕಾರಣವೇನು ;

(ಇ) ಬೆಳಗಾವಿ ನಗರದ ಬಡ ನೇಕಾರರು ಅನೇಕ ಅರ್ಜಿಗಳನ್ನು ಸಲ್ಲಿಸಿದ್ದರೂ, ಮನೆಗಳನ್ನು ಮಂಜೂರು ಮಾಡದಿರಲು ಕಾರಣವೇನು ;

(ಈ) ಬಡವರಿಗೆ ವಸತಿ ನೀಡಿ ಅನುಕೂಲ ಮಾಡಿಕೊಡಲು ಸರ್ಕಾರ ಕೂಡಲೇ ಬಡ ನೇಕಾರರಿಗೆ ಈ ವಸತಿಗಳನ್ನು ಬೇಡಿಕೆಗೆ ತಕ್ಕಂತೆ ಮಂಜೂರು ಮಾಡಲಾಗುವುದೇ ?

## ತುರುವೇಕೆರೆ ಕ್ಷೇತ್ರದ ಶಿಕ್ಷಕರ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೧೦೧೧ (೧೨೬೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುರುವೇಕೆರೆ ಕ್ಷೇತ್ರದಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಶಾಲೆಗಳು ಎಷ್ಟು ;

(ಆ) ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಶಾಲೆಗಳು ಎಲ್ಲೆಲ್ಲಿ ಕಾರ್ಯನಿರ್ವಹಿಸುತ್ತಿವೆ ; (ವಿವರ ನೀಡುವುದು)

(ಇ) ಈ ಎಲ್ಲಾ ಶಾಲೆಗಳಿಗೆ ಪೂರ್ಣ ಮಟ್ಟದ ಕಟ್ಟಡಗಳು ಇದೆಯೇ ; ಅವು ಸುಸಜ್ಜಿತವಾಗಿದೆಯೇ ;

(ಈ) ಯಾವ್ಯಾವ ಶಾಲೆಗಳಲ್ಲಿ ಎಷ್ಟು ಎಷ್ಟು ಶಿಕ್ಷಕರು ಕೆಲಸ ನಿರ್ವಹಿಸುತ್ತಿದ್ದಾರೆ ; (ಹೆಸರು ಸಮೇತ ವಿವರ ನೀಡುವುದು)

(ಉ) ಶಿಕ್ಷಕರ ಕೊರತೆ ಎಷ್ಟಿದೆ ಮತ್ತು ಎಲ್ಲೆಲ್ಲಿ ; ಕೊರತೆ ಇರುವ ಕಡೆ ತುಂಬಲು ತೆಗೆದುಕೊಂಡ ಕ್ರಮವೇನು ?

## ತುರುವೇಕೆರೆ ಕ್ಷೇತ್ರದಲ್ಲಿ ನಿವೇಶನ ಹಂಚಿಕೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೧೦೧೨ (೧೨೬೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುರುವೇಕೆರೆ ಕ್ಷೇತ್ರದಲ್ಲಿ ಬರುವ ಗ್ರಾಮ ಪಂಚಾಯಿತಿಗಳೆಷ್ಟು ; ಅವು ಯಾವುವು ;

(ಆ) ಕಳೆದ ಹತ್ತು ವರ್ಷಗಳಲ್ಲಿ ಈ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ನಿವೇಶನ ರಹಿತರು ನಿವೇಶನ ನೀಡುವಂತೆ ಕೋರಿ ಸಲ್ಲಿಸಿರುವ ಅರ್ಜಿಗಳೆಷ್ಟು ;

(ಇ) ಬೇಡಿಕೆಗೆ ತಕ್ಕಂತೆ ಯಾವ ಯಾವ ಗ್ರಾಮ ಪಂಚಾಯಿತಿಗಳನ್ನು ಕಳೆದ ಹತ್ತು ವರ್ಷದಿಂದ ಎಷ್ಟು ನಿವೇಶನಗಳನ್ನು ನೀಡಲಾಗಿದೆ ; (ಫಲಾನುಭವಿಗಳ ಹೆಸರು ಹಾಗೂ ಗ್ರಾಮವಾರು ಮಾಹಿತಿ ಒದಗಿಸುವುದು)

(ಈ) ಗ್ರಾಮ ಪಂಚಾಯಿತಿವಾರು ಹಂಚಿಕೆ ಮಾಡಿರುವ ನಿವೇಶನರಹಿತರ ಪಟ್ಟಿಯ ವಿವರ ನೀಡುವುದು ;

(ಉ) ಬೇಡಿಕೆ ಇದ್ದು, ನಿವೇಶನ ಕೊಡದಿರುವ ಪಂಚಾಯತಿಗಳಾವುವು ; ಕಾರಣವೇನು ?

## ತುರುವೇಕೆರೆ ಕ್ಷೇತ್ರದ ಶುದ್ಧ ಕುಡಿಯುವ ನೀರಿನ ಘಟಕ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೧೦೧೩ (೧೨೬೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುರುವೇಕೆರೆ ಕ್ಷೇತ್ರಕ್ಕೆ ಕಳೆದ ಮೂರು ವರ್ಷಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಎಷ್ಟು ಮಂಜೂರಾಗಿವೆ ; ಅವು ಯಾವುವು ;

(ಆ) ಮಂಜೂರಾಗಿ ಕೆಲಸ ನಿರ್ವಹಿಸುತ್ತಿರುವ ಘಟಕಗಳು ಯಾವುವು ;

(ಇ) ಈ ವರ್ಷದಲ್ಲಿ ಹೊಸದಾಗಿ ಮಂಜೂರು ಮಾಡಿರುವ ಹಳ್ಳಿಗಳು ಯಾವುವು ;

(ಈ) ಹೊಸದಾಗಿ ಘಟಕ ಪ್ರಾರಂಭಿಸಲು ಬಂದಿರುವ ಬೇಡಿಕೆಗಳೆಷ್ಟು ; ಅವು ಯಾವುವು ;

(ಉ) ಯಾವಾಗ ಹೊಸ ಘಟಕಗಳನ್ನು ಮಂಜೂರು ಮಾಡಲಾಗುವುದು ?

## ತುಮಕೂರು ಜಿಲ್ಲೆಯ ತುರುವೇಕೆರೆ–ದೇವಿಹಳ್ಳಿ ಗ್ರಾಮದ ಸರ್ವೆ ನಂ. ೩೭ರ ಜಮೀನಿನ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೧೧೧೪ (೧೨೬೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆ, ತುರುವೇಕೆರೆ ತಾಲ್ಲೂಕು, ದೇವಿಹಳ್ಳಿ ಗ್ರಾಮದ ಸರ್ವೆ ನಂ. ೩೭ರ ಯಾವ ಯಾವ ರೈತರ ಜಮೀನು ದಬ್ಬೆಘಟ್ಟ ರಸ್ತೆಗೆ ಸೇರಿರುತ್ತದೆ ; ಈ ಜಮೀನನ್ನು ಲೋಕೋಪಯೋಗಿ ಇಲಾಖೆ ಯಾವ ವರ್ಷದಲ್ಲಿ ರಸ್ತೆ ನಿರ್ಮಾಣಕ್ಕಾಗಿ ಯಾರ ಯಾರ ಎಷ್ಟೆಷ್ಟು ಜಮೀನನ್ನು ಸ್ವಾಧೀನಪಡಿಸಿಕೊಂಡಿರುತ್ತದೆ ; ಸ್ವಾಧೀನಪಡಿಸಿಕೊಂಡಿರುವ ಆದೇಶದ ಪ್ರತಿಗಳನ್ನು ಒದಗಿಸುವುದು ;

(ಆ) ಸದರಿ ಜಮೀನನ್ನು ಅಧಿಕೃತವಾಗಿ ವಶಪಡಿಸಿಕೊಂಡಿದ್ದಲ್ಲಿ, ಯಾವ ಯಾವ ರೈತರಿಗೆ ಎಷ್ಟೆಷ್ಟು ಭೂ ಪರಿಹಾರ ನೀಡಲಾಗಿದೆ ; ಯಾವ ದಿನಾಂಕ, ಯಾರ ಮೂಲಕ ನೀಡಲಾಗಿದೆ ; (ಪರಿಹಾರ ನೀಡಿರುವ ಆದೇಶದ ಪ್ರತಿಗಳೊಂದಿಗೆ ಪೂರ್ಣ ವಿವರ ಒದಗಿಸುವುದು)

(ಇ) ಸದರಿ ಜಮೀನನ್ನು ಅಧಿಕೃತವಾಗಿ ಸ್ವಾಧೀನಪಡಿಸಿಕೊಳ್ಳದೆ ಹಾಗೂ ಸಂಬಂಧಿಸಿದ ರೈತರಿಗೆ ಪರಿಹಾರ ನೀಡದೆ, ಅನಧಿಕೃತವಾಗಿ ರಸ್ತೆ ಮಾಡಿರುವುದು ಕಾನೂನುಬಾಹಿರ ಹಾಗೂ ರೈತ ವಿರೋಧಿ ನೀತಿಯಲ್ಲವೇ ;

(ಈ) ಸದರಿ ರೈತರಿಗೆ ಕೂಡಲೇ ಪರಿಹಾರ ನೀಡಲು ಸರ್ಕಾರ ಕೈಗೊಳ್ಳುವ ಕ್ರಮಗಳಾವುವು ?

## ಸರ್ಕಾರಿ ಪದವಿ ಕಾಲೇಜುಗಳಲ್ಲಿನ ಉಪನ್ಯಾಸಕರ ಕೊರತೆ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೧೫ (೧೧೬೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಇರುವ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು ;

(ಆ) ಸರ್ಕಾರಿ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು ;

(ಇ) ಸರ್ಕಾರಿ ಪದವಿ ಕಾಲೇಜಿಗಿಂತ ಖಾಸಗಿ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಸರ್ಕಾರಿ ಪದವಿ ಕಾಲೇಜುಗಳಲ್ಲಿ ಉಪನ್ಯಾಸಕರ ಕೊರತೆ ತೀವ್ರವಾಗಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದ ಪ್ರೌಢ ಶಾಲೆಗಳಲ್ಲಿ ಮಾಹಿತಿ ಸಿಂಧು ಕಂಪ್ಯೂಟರ್ ಶಿಕ್ಷಣ ಜಾರಿಗೆ ಕುರಿತು

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ ) –**

೧೦೧೬ (೧೦೮೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಾಹಿತಿ ಸಿಂಧು ಕಂಪ್ಯೂಟರ್ ಶಿಕ್ಷಣ ಯೋಜನೆಯ ಹಂತ–೧,೨,೩ ಎಷ್ಟು ಶಾಲೆಗಳಲ್ಲಿ ನಡೆಯುತ್ತಿದೆ ;

(ಆ) ಈ ಯೋಜನೆಗೆ ಎಷ್ಟು ಗಣಕಯಂತ್ರ ಶಿಕ್ಷಕರನ್ನು ನೇಮಕ ಮಾಡಲಾಗಿದೆ ; ಅದರಲ್ಲಿ ಖಾಯಂ ಆಗಿರುವ ಗಣಕಯಂತ್ರ ಶಿಕ್ಷಕರ ಸಂಖ್ಯೆ ಎಷ್ಟು ;

(ಇ) ಖಾಯಂ ಆಗದೆ ಇರುವ ಗೊಂದಲಗಳಿಗೆ ಸರ್ಕಾರದ ಕ್ರಮವೇನು ;

(ಈ) ಇತ್ತೀಚಿನ ದಿನಗಳಲ್ಲಿ ಮಂಡ್ಯ ಜಿಲ್ಲೆಯ ಕೆಲವೊಂದು ಶಾಲೆಗಳಿಗೆ ಛೇರ್ ಮತ್ತು ಟೇಬಲ್‌ಗಳನ್ನು ಸರಬರಾಜು ಮಾಡಿ, ಇನ್ನೂ ಕಂಪ್ಯೂಟರ್ ಕೊಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಈ ತಂತ್ರಜ್ಞಾನ ಯುಗದಲ್ಲಿ ಪ್ರೌಢ ಶಾಲಾ ಹಂತದಲ್ಲಿ ಕಂಪ್ಯೂಟರ್ ಶಿಕ್ಷಣ ತುಂಬಾ ಮಹತ್ವವಾಗಿರುವುದರಿಂದ, ಇದರ ಬಗ್ಗೆ ಸರ್ಕಾರದ ಕ್ರಮವೇನು ?

## ಪ್ರತ್ಯೇಕಗೊಂಡ ಪದವಿ ಪೂರ್ವ ಕಾಲೇಜುಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ ) –**

೧೧೧೭ (೧೦೮೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರತ್ಯೇಕಗೊಂಡ (ವಿಭಜಿತ) ಖಾಸಗಿ ಪದವಿಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ;

(ಆ) ಇಲ್ಲಿ ಕಳೆದ ಹತ್ತಾರು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಉಪನ್ಯಾಸಕರ ಸಂಖ್ಯೆ ಎಷ್ಟು ;

(ಇ) ಈ ಉಪನ್ಯಾಸಕರನ್ನು ಖಾಯಂ ಮಾಡುವ ದಿಸೆಯಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಹಳೇ ಮೈಸೂರು ಭಾಗದಲ್ಲಿ ಹೊಸದಾಗಿ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ (ಜಿ.ಜೆ.ಟಿ.ಎಸ್.) ಪ್ರಾರಂಭ ಮಾಡುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ ) –**

೧೧೧೮ (೧೧೭೪) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು (ಜಿ.ಜೆ.ಟಿ.ಎಸ್.) ಎಷ್ಟು ಇವೆ ; ಎಲ್ಲಿ ಎಲ್ಲಿ ನಡೆಯುತ್ತಿವೆ ;

(ಆ) ಸದರಿ ಶಾಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ವಿವರ ನೀಡುವುದು ;

(ಇ) ಹಳೇ ಮೈಸೂರು ಭಾಗದಲ್ಲಿ (ಮಂಡ್ಯ, ಮೈಸೂರು, ಹಾಸನ, ಚಾಮರಾಜನಗರ) ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ ಆರಂಭಿಸಲು ಸರ್ಕಾರ ಚಿಂತನೆ ನಡೆಸಿದೆಯೇ ;

(ಈ) ಈ ತಾಂತ್ರಿಕ ಯುಗಕ್ಕೆ ಪ್ರೌಢ ಶಾಲಾ ಹಂತದಲ್ಲಿಯೇ ಇಂತಹ ಮಹತ್ವದ ಶಾಲೆಗಳನ್ನು ಯಾವ ಶೈಕ್ಷಣಿಕ ಸಾಲಿನಿಂದ ಸರ್ಕಾರವು, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳನ್ನು ಆರಂಭಿಸುತ್ತದೆ ?

## ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ ) –**

೧೧೯ (೧೦೮೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮ ಪಂಚಾಯತ್‌ಗಳಲ್ಲಿ ಎಷ್ಟು ಜನ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಕೆಲಸ ನಿರ್ವಹಿಸುತ್ತಿದ್ದಾರೆ ;

(ಆ) ರಮೇಶ್ ಕುಮಾರ್‌ರವರ ಸಮಿತಿಯ ಶಿಫಾರಸ್ಸಿನಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಮೇಲ್ದರ್ಜೆಗೇರಿಸಲು ಶಿಫಾರಸ್ಸು ಮಾಡಲಾಗಿದೆಯೇ ;

(ಇ) ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಗಳನ್ನು 'ಸಿ' ವೃಂದದಿಂದ 'ಬಿ' ವೃಂದಕ್ಕೆ ಮೇಲ್ದರ್ಜೆಗೇರಿಸಲು ಸರ್ಕಾರ ಕೈಗೊಂಡ ಕ್ರಮವೇನು ?

## ನೂತನ ಗ್ರಾಮ ಪಂಚಾಯತ್ ಘೋಷಣೆಯಾಗಿ ೨ ವರ್ಷವಾದರೂ ಮೂಲ ಸೌಕರ್ಯ ಒದಗಿಸದೇ ಇರುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೨೦ (೧೧೧೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಹೊಸ ಗ್ರಾಮ ಪಂಚಾಯತ್‌ಗಳನ್ನು ಸೃಜನೆ ಮಾಡಲಾಗಿದೆ ; ಹೊಸ ಗ್ರಾಮ ಪಂಚಾಯತ್‌ಗಳಿಗೆ ಸರ್ಕಾರ ಕಲ್ಪಿಸಿರುವ ಮೂಲ ಸೌಕರ್ಯಗಳೇನು ; ಬಿಡುಡೆಯಾದ ಅನುದಾನ ಎಷ್ಟು ;

(ಆ) ಹೊಸದಾಗಿ ಸೃಜನೆಯಾದ ಗ್ರಾಮ ಪಂಚಾಯತ್‌ಗಳ ಪೈಕಿ ಎಷ್ಟು ಪಂಚಾಯತ್‌ಗಳಿಗೆ ನಿವೇಶನ ಮತ್ತು ಹೊಸ ಕಟ್ಟಡ ಮಂಜೂರಾತಿ ಮಾಡಲಾಗಿದೆ ;

(ಇ) ನೂತನ ಗ್ರಾಮ ಪಂಚಾಯತ್‌ಗಳು ಘೋಷಣೆಯಾಗಿ ೨ ವರ್ಷವಾದರೂ, ಕಟ್ಟಡ, ಪೀಠೋಪಕರಣ, ಕಂಪ್ಯೂಟರ್ ಸೇರಿದಂತೆ ಮೂಲ ಸೌಕರ್ಯಕ್ಕಾಗಿ ೨೦ ಲಕ್ಷ ಅನುದಾನ ನೀಡುವ ಸರ್ಕಾರದ ಭರವಸೆ ಕಾರ್ಯರೂಪಕ್ಕೆ ಬರದಿರಲು ಕಾರಣಗಳೇನು ;

(ಈ) ಹೊಸದಾಗಿ ಸೃಜನೆಯಾದ ಗ್ರಾಮ ಪಂಚಾಯತ್‌ಗಳಿಗೆ ಅಗತ್ಯ ಸಿಬ್ಬಂದಿ ನೇಮಕಾತಿ ಪೂರ್ಣಗೊಂಡಿದೆಯೇ ; ನೇಮಕಾತಿ ವಿಳಂಬಕ್ಕೆ ಕಾರಣಗಳೇನು ;

(ಉ) ನೂತನ ಗ್ರಾಮ ಪಂಚಾಯತ್‌ಗಳ ಸಿಬ್ಬಂದಿ ನೇಮಕಾತಿ, ಕಟ್ಟಡ ಸೇರಿದಂತೆ ಮೂಲ ಸೌಕರ್ಯವನ್ನು ಕಾಲಮಿತಿಯಲ್ಲಿ ಒದಗಿಸುವ ನಿಟ್ಟಿನಲ್ಲಿ, ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ? (ವಿವರ ಒದಗಿಸುವುದು)

# ರಾಜ್ಯದಲ್ಲಿ ಪ್ರೊ. ಎಲ್.ಆರ್. ವೈದ್ಯನಾಥನ್ ನೇತೃತ್ವದ ಸಮಿತಿಯ ಶಿಫಾರಸ್ಸು ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೧೦೨೧ (೧೧೫೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ದೈಹಿಕ ಶಿಕ್ಷಕರ ನೇಮಕಾತಿಗೆ ಸಂಬಂಧಿಸಿದಂತೆ ಪ್ರೊ. ಎಲ್.ಆರ್. ವೈದ್ಯನಾಥನ್ ನೇತೃತ್ವದ ಸಮಿತಿಯ ಶಿಫಾರಸ್ಸುಗಳೇನು ; (ವಿವರ ನೀಡುವುದು)

(ಆ) ರಾಜ್ಯದಲ್ಲಿರುವ ಸರ್ಕಾರಿ ಹಿರಿಯ, ಕಿರಿಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಒಟ್ಟು ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು) ಎಷ್ಟು ಶಾಲೆಗಳಲ್ಲಿ ದೈಹಿಕ ಶಿಕ್ಷಕರ ನೇಮಕಾತಿ ಆಗಿರುತ್ತದೆ ; ಖಾಲಿ ಇರುವ ಹುದ್ದೆಗಳೆಷ್ಟು ;

(ಇ) ಸರ್ಕಾರವು ಪ್ರಾಥಮಿಕ ಶಾಲೆಗಳಿಗೆ ಸುಮಾರು ೧೧ ವರ್ಷಗಳಿಂದ ದೈಹಿಕ ಶಿಕ್ಷಣ ಶಿಕ್ಷಕರನ್ನು ನೇಮಿಸಿಕೊಳ್ಳದಿರಲು ಕಾರಣಗಳೇನು ;

(ಈ) ಒಟ್ಟು ೯೨೭ ದೈಹಿಕ ಶಿಕ್ಷಣ ಶಿಕ್ಷಕರ ನೇಮಕಾತಿಯ ಪ್ರಸ್ತಾವನೆಯು ಒಂದು ವರ್ಷದಿಂದ ಸರ್ಕಾರದ ಮುಂದಿದ್ದರೂ, ಈ ಕುರಿತಾಗಿ ನಿರ್ಣಯ ಕೈಗೊಳ್ಳದಿರಲು ಕಾರಣಗಳೇನು ;

(ಉ) ಪ್ರಾಥಮಿಕ ಶಾಲೆಗಳಲ್ಲಿ ದೈಹಿಕ ಶಿಕ್ಷಕರ ನೇಮಕಾತಿಗಾಗಿ ಸರ್ಕಾರ ಏನು ಕ್ರಮ ಕೈಗೊಳ್ಳಲಿದೆ ?

## ರಾಜ್ಯದಲ್ಲಿರುವ ೧೯೯೫ರ ನಂತರ ಪ್ರಾಥಮಿಕ ಹಾಗೂ ಖಾಸಗಿ ಕನ್ನಡ ಮಾಧ್ಯಮ, ಪ್ರಾಥಮಿಕ ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳುಗಳನ್ನು ಅನುದಾನದ ವ್ಯಾಪ್ತಿಗೆ ತರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ ) –**

೧೦೨೨ (೧೧೫೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೧೯೯೫ರ ನಂತರ ಪ್ರಾರಂಭವಾದ ಖಾಸಗಿ ಕನ್ನಡ ಮಾಧ್ಯಮ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಕನ್ನಡ ಮಾಧ್ಯಮ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಶಿಕ್ಷಕ ಮತ್ತು ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ;

(ಇ) ಈ ಎಲ್ಲಾ ಕನ್ನಡ ಮಾಧ್ಯಮ, ಶಾಲಾ–ಕಾಲೇಜುಗಳನ್ನು ಅನುದಾನದ ವ್ಯಾಪ್ತಿಗೆ ಒಳಪಡಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ ?

## ರಾಜ್ಯದಲ್ಲಿ, ಮಾಹಿತಿ ಸಿಂಧು I.C.T.I. ೧,೨,೩ ಹಂತಗಳಲ್ಲಿ ಶಾಲೆ ಕಾಲೇಜುಗಳಲ್ಲಿ ಅನುಷ್ಠಾನ ಮಾಡಿಸುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ ) –**

೧೦೨೩ (೧೧೫೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳ ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ಶಿಕ್ಷಣ ನೀಡಲು ಸರ್ಕಾರ ಯಾವ ಯೋಜನೆಗಳನ್ನು ಕೈಗೊಂಡಿದೆ ; (ವಿವರ ನೀಡುವುದು)

(ಆ) ಮಾಹಿತಿ ಸಿಂಧು, I.C.T.I. ೨ ಮತ್ತು ೩ನೇ ಹಂತಗಳಲ್ಲಿ ಎಷ್ಟು ಶಾಲಾ–ಕಾಲೇಜುಗಳಲ್ಲಿ ಅನುಷ್ಠಾನಗೊಳಿಸಲಾಗಿದೆ ; (ವಿವರ ನೀಡುವುದು)

(ಇ) ಮೇಲಿನ ಯೋಜನೆಗಳನ್ನು ಕೇಂದ್ರ ಸಹಭಾಗಿತ್ವದಲ್ಲಿ ಕೈಗೊಂಡಿದ್ದರೂ ರಾಜ್ಯದ ಬಹಳಷ್ಟು ವಿದ್ಯಾರ್ಥಿಗಳು ಕಂಪ್ಯೂಟರ್ ಶಿಕ್ಷಣದಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಮೇಲಿನ ಯೋಜನೆಗಳ ಅನ್ವಯ ಅನುಷ್ಠಾನಕ್ಕಾಗಿ ಖರೀದಿಸಿದ ಕಂಪ್ಯೂಟರ್, ಯು.ಪಿ.ಎಸ್. ಮತ್ತು ಇತರ ಉಪಕರಣಗಳು ಮೂಲೆ ಹಿಡಿದು ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಮೇಲಿನ ಯೋಜನೆಗಳಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಅನೇಕ ವರ್ಷಗಳಿಂದ ದುಡಿಯುತ್ತಿರುವ ಶಿಕ್ಷಕರ ಸೇವಾ ಸೌಲಭ್ಯಗಳ ಕುರಿತು ಸರ್ಕಾರ ಏನು ಕ್ರಮ ಕೈಗೊಂಡಿದೆ ;

(ಉ) ಈ ಕುರಿತಾಗಿ ಸರ್ಕಾರ ಏನು ಕ್ರಮ ಕೈಗೊಳ್ಳಲಿದೆ ?

## ಹೊರನಾಡು ಕನ್ನಡಿಗ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ ಹಾಗೂ ಇತರ ಸೌಲಭ್ಯವನ್ನು ಪಡೆಯುವಲ್ಲಿ ಇರುವ ತಾರತಮ್ಯದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ ) –**

೧೦೨೪ (೧೧೫೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗಡಿಪ್ರದೇಶಗಳ ಪಕ್ಕದಲ್ಲಿರುವ ಹೊರನಾಡು ಕನ್ನಡಿಗ ವಿದ್ಯಾರ್ಥಿಗಳು ರಾಜ್ಯದಲ್ಲಿ ಉನ್ನತ ಶಿಕ್ಷಣ ಪಡೆಯುವಲ್ಲಿ ಅನುಕೂಲವಾಗುವಂತೆ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ ;

(ಆ) ಈ ವಿದ್ಯಾರ್ಥಿಗಳಿಗೆ ಪ್ರವೇಶ ನೀಡುವಾಗ ವಿಶ್ವವಿದ್ಯಾನಿಲಯಗಳಲ್ಲಿ ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಂದ ಪಡೆಯುವಷ್ಟೇ ಶುಲ್ಕವನ್ನು ಪಡೆಯಲಾಗುತ್ತಿದೆಯೇ ; ಇಲ್ಲದಿದ್ದಲ್ಲಿ, ಈ ರೀತಿಯ ತಾರತಮ್ಯಕ್ಕೆ ಕಾರಣವೇನು ;

(ಇ) ಗಡಿನಾಡಿನ ಕನ್ನಡಿಗ ವಿದ್ಯಾರ್ಥಿಗಳ ಪ್ರೋತ್ಸಾಹಕ್ಕಾಗಿ ಸರ್ಕಾರ ಗಡಿನಾಡಿನ ವಿದ್ಯಾರ್ಥಿಗಳಿಗೂ ಶುಲ್ಕ ರಿಯಾಯಿತಿ, ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ, ಸ್ನಾತಕ ಹಾಗೂ ಸ್ನಾತಕೋತ್ತರ ಪದವಿ ಕೋರ್ಸ್‌ಗಳಿಗೆ ಕೋಟಾ ಕಲ್ಪಿಸುವುದು ಸೇರಿದಂತೆ ವಿವಿಧ ಸೌಲಭ್ಯಗಳನ್ನು ವಿಸ್ತರಿಸಲು ಸರ್ಕಾರ ಆಸಕ್ತಿ ವಹಿಸಲಿದೆಯೇ ?

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಸುಮಾರು ಕೋಟಿ ರೂಪಾಯಿಗಳ ಹಣ ದುರ್ಬಳಕೆ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ ) –**

೧೦೨೫ (೧೧೬೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಸುಮಾರು ೭೧೭ ಕೋಟಿ ರೂಪಾಯಿಗಳಷ್ಟು ಹಣವನ್ನು ದುರ್ಬಳಕೆ ಮಾಡಿಕೊಂಡಿದ್ದನ್ನು ಸರ್ಕಾರ ಪತ್ತೆ ಹಚ್ಚಿ ವಿಚಾರಣೆ ನಡೆಸುತ್ತಿರುವುದು ಯಾವ ಹಂತದಲ್ಲಿದೆ ;

(ಆ) ಇದೇ ರೀತಿ ಕೇಂದ್ರ ಸರ್ಕಾರದಿಂದ ವಿವಿಧ ಯೋಜನೆಗಳಿಗೆ ಬಂದಂತಹ ಹಣವನ್ನು ಅಭಿವೃದ್ಧಿ ಕಾರ್ಯಗಳಿಗೆ ಬಳಸದೇ ಈ ತರಹದ ರಹಸ್ಯ ನಿಧಿಗಳನ್ನು ಸೃಷ್ಟಿಸಿ, ಅಭಿವೃದ್ಧಿ ಕಾರ್ಯಗಳನ್ನು ಕುಂಠಿತಗೊಳಿಸಿರುವ ಅಧಿಕಾರಿಗಳನ್ನು ಗುರುತಿಸಿ, ಕಾನೂನು ಕ್ರಮ ಕೈಗೊಳ್ಳಲಾಗಿದೆಯೇ ; (ವಿವರ ನೀಡುವುದು)

(ಇ) ವಿವಿಧ ಇಲಾಖೆಗಳಲ್ಲಿ ಈ ತರಹದ ಹಣದ ದುರ್ಬಳಕೆಗೆ ಕಡಿವಾಣ ಹಾಕಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಸರ್ಕಾರದ ಷೂ ಭಾಗ್ಯ ಯೋಜನೆಯಡಿ ಶಾಲಾ ಮಕ್ಕಳಿಗೆ ಷೂ, ಸಾಕ್ಸ್ ನಿಗಧಿತ ಅವಧಿಯಲ್ಲಿ ತಲುಪದೇ ಇರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೨೬ (೧೧೮೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರವು ಜಾರಿಗೆ ತಂದಿರುವ ಶಾಲಾ ಮಕ್ಕಳಿಗೆ 'ಷೂ ಭಾಗ್ಯ' ಯೋಜನೆಯಲ್ಲಿ ನಿಗಧಿತ ಅವಧಿಯಲ್ಲಿ ವಿದ್ಯಾರ್ಥಿಗಳಿಗೆ ಷೂ–ಸಾಕ್ಸ್ ತಲುಪಿಸದಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ೨೦೧೬–೧೭ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ಜನ ವಿದ್ಯಾರ್ಥಿಗಳಿಗೆ ಷೂ ಹಾಗೂ ಸಾಕ್ಸ್‌ಗಳನ್ನು ನೀಡಲಾಗಿದೆ ; ಮತ್ತು ಯಾವ ತಿಂಗಳಲ್ಲಿ ನೀಡಲಾಗಿದೆ ;

(ಇ) ಜಿಲ್ಲೆಯಲ್ಲಿ ಷೂ ಖರೀದಿಯಲ್ಲಿ ಅವ್ಯವಹಾರವಾಗಿರುವುದನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೆ ; ತಪ್ಪಿತಸ್ಥರ ವಿರುದ್ಧ ಏನಾದರೂ ಕ್ರಮ ಜರುಗಿಸಿದೆಯೇ ; ಹಾಗಿದ್ದಲ್ಲಿ, ಏನು ಕ್ರಮ ಜರುಗಿಸಿದೆ ; ಎಷ್ಟು ಜನರ ಮೇಲೆ ಕ್ರಮ ಜರುಗಿಸಿದೆ ; (ವಿವರ ನೀಡುವುದು)

(ಈ) ಉತ್ತಮ ಗುಣಮಟ್ಟದ ಷೂ ಖರೀದಿಸದೆ ಕಳಪೆ ಗುಣಮಟ್ಟದ ಷೂ ಖರೀದಿಸಿರುವ ಕುರಿತು ಜಿಲ್ಲೆಯಾದ್ಯಂತ ಉನ್ನತ ಮಟ್ಟದ ತನಿಖೆ ನಡೆಸಲಾಗಿದೆಯೇ ; ತನಿಖೆ ನಡೆಸಿದವರು ಯಾರು ; ತನಿಖೆ ಯಾವ ಮಟ್ಟದಲ್ಲಿದೆ ?

## ವಸತಿ ರಹಿತರಿಗೆ ಸೂರು ಕಲ್ಪಿಸುವ ವಸತಿ ಯೋಜನೆಗಳು ಗುರಿ ಸಾಧಿಸಲಾಗದೆ ಕುಂಟುತ್ತಾ ಸಾಗಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೨೭ (೧೧೮೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಸತಿ ರಹಿತರಿಗೆ ಸೂರು ಕಲ್ಪಿಸುವ ಸರ್ಕಾರದ "ವಸತಿ ಯೋಜನೆಗಳು" ಗುರಿ ಸಾಧಿಸಲಾಗದೆ ಕುಂಟುತ್ತಾ ಸಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ೩ ವರ್ಷಗಳಲ್ಲಿ ರಾಜ್ಯ ಸರ್ಕಾರವು ವಿವಿಧ ವಸತಿ ಯೋಜನಗಳಡಿಯಲ್ಲಿ ಎಷ್ಟು ಮನೆಗಳನ್ನು ನಿರ್ಮಿಸುವ ಗುರಿ ಹಾಕಿಕೊಂಡಿದೆ ; ಎಷ್ಟು ಮನೆಗಳನ್ನು ನಿರ್ಮಿಸಿ ಅರ್ಹರಿಗೆ ಹಂಚಿಕೆ ಮಾಡಲಾಗಿದೆ ; ಎಷ್ಟು ಬಾಕಿ ಉಳಿದಿವೆ ; (ವರ್ಷಾವಾರು ಹಾಗೂ ಯೋಜನೆವಾರು ವಿವರ ನೀಡುವುದು)

(ಇ) ಅದರಲ್ಲಿ ಮನೆಗಳನ್ನು ನಿರ್ಮಿಸಿಕೊಂಡ ಫಲಾನುಭವಿಗಳ ಸಂಖ್ಯೆ ಎಷ್ಟು ; ಪ್ರಗತಿಯಲ್ಲಿರುವ ಮನೆಗಳ ಸಂಖ್ಯೆ ಎಷ್ಟು ; ಮನೆಗಳನ್ನು ನಿರ್ಮಿಸಿಕೊಳ್ಳದ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಸದರಿ ಯೋಜನೆಯಡಿ ಮನೆ ನಿರ್ಮಿಸುವ ಗುರಿ ತಲುಪುವಲ್ಲಿ ವಿಳಂಬವಾಗಲು ಕಾರಣಗಳೇನು ; ಸರ್ಕಾರವು ಹಾಕಿಕೊಂಡ ಗುರಿ ತಲುಪಲು ಯಾವ ಕ್ರಮಗಳನ್ನು ಕೈಗೊಂಡಿದೆ ;

(ಉ) ಜಿಲ್ಲಾಧಿಕಾರಿಗಳ ವಸತಿ ಸಮಿತಿಯು ಆಯ್ಕೆ ಮಾಡಿದ ವಿಶೇಷ ವರ್ಗದ ಫಲಾನುಭವಿಗಳು (ಅಂಗವಿಕಲರು ಹಾಗೂ ವಿಧವೆಯರು) ಜಿ.ಪಿ.ಎಸ್. ಮಾಡಲು ವಿಳಂಬವಾಗಿ, ಗುರಿ ಪಡೆದಿದ್ದರೂ ಯೋಜನೆಯ ಫಲ ಸಿಗದೇ, ಅತಂತ್ರ ಸ್ಥಿತಿಯಲ್ಲಿರುವ ಇವರಿಗೆ ನ್ಯಾಯ ಒದಗಿಸಲು ಸರ್ಕಾರವು ಏನು ಕ್ರಮಗಳನ್ನು ಕೈಗೊಳ್ಳುವುದು ?

## ವಸತಿರಹಿತ ಅರ್ಹ ಫಲಾನುಭವಿಗಳನ್ನು ಆಯ್ಕೆ ಪ್ರಕ್ರಿಯೆ ಸ್ಥಗಿತಗೊಳಿಸಿ ಗ್ರಾಮ ಪಂಚಾಯಿತಿಗಳ ಅಧಿಕಾರ ಮೊಟಕುಗೊಳಿಸಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೨೮ (೧೧೮೩) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರವು ವಸತಿರಹಿತ ಅರ್ಹ ಫಲಾನುಭವಿಗಳನ್ನು ಗುರುತಿಸಿ ಆಯ್ಕೆ ಮಾಡುವ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಿ, ಫಲಾನುಭವಿಗಳನ್ನು ಆಯ್ಕೆ ಮಾಡುವ ಗ್ರಾಮ ಪಂಚಾಯಿತಿಗಳ ಅಧಿಕಾರವನ್ನು ಮೊಟಕುಗೊಳಿಸಿರುವುದು, ಸಾರ್ವಜನಿಕವಾಗಿ ತೀವ್ರ ವಿರೋಧ ವ್ಯಕ್ತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಗ್ರಾಮ ಪಂಚಾಯಿತಿ ಮಟ್ಟದಲ್ಲಿ ನಡೆಯುತ್ತಿದ್ದ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಲು ಕಾರಣಗಳೇನು ; ಜಿಲ್ಲಾ ವಸತಿ ಸಮಿತಿಗಳ ಮುಂದಿನ ಕಾರ್ಯನಡೆ ಏನು ;

(ಇ) ಇದರಿಂದ ಸ್ಥಳೀಯ ಸಂಸ್ಥೆಗಳ ಸಾಂವಿಧಾನಿಕ ಹಕ್ಕನ್ನು ಕಿತ್ತುಕೊಂಡಂತಾಗುವುದಿಲ್ಲವೆ ?

## ಬೆಳಗಾವಿ ಜಿಲ್ಲೆಯಲ್ಲಿ ಕೈಗಾರಿಕಾ ವಸಾಹತು ಸ್ಥಾಪನೆಗಾಗಿ ಸಾವಿರಾರು ಮರಗಳನ್ನು ಧರೆಗುರುಳಿಸುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೨೯ (೧೧೮೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೈಗಾರಿಕಾ ಅಭಿವೃದ್ಧಿ ಮಂಡಳಿ ಸ್ಥಾಪಿಸುವ ನೆಪದಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಸುಮಾರು ೩೦ ಸಾವಿರ ಮರಗಳನ್ನು ಬಲಿಕೊಡುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕೈಗಾರಿಕೆ ವಸಾಹತು ಸ್ಥಾಪನೆಗೆ ಬೆಳಗಾವಿ ಜಿಲ್ಲೆಯಲ್ಲಿ ಗುರುತಿಸಲ್ಪಟ್ಟ ಜಾಗ ಯಾವುದು ; ಎಷ್ಟು ಎಕರೆ ಜಾಗವನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ ;

(ಇ) ಗುರುತಿಸಲ್ಪಟ್ಟ ಜಾಗವು ಫಲವತ್ತಾದ ಕೃಷಿ ಭೂಮಿಯಾಗಿದ್ದು, ಅಲ್ಲಿ ಲಕ್ಷಾಂತರ ರೂಪಾಯಿ ಬೆಲೆ ಬಾಳುವ ಮರಗಳನ್ನು ರೈತರು ಬೆಳೆಸಿರುವುದು ನಿಜವೆ ;

(ಈ) ಹಾಗಿದ್ದಲ್ಲಿ, ಅಂತಹ ಬೆಲೆ ಬಾಳುವ ಮರಗಳನ್ನು ಕಡಿಯುವುದರಿಂದ, ಪರಿಸರ ಹಾಗೂ ರೈತರ ಭೂಮಿಗಳು ಹಾನಿಗೊಳಗಾಗುವುದನ್ನು ತಪ್ಪಿಸಲು ಸರ್ಕಾರವು ಏನು ಕ್ರಮಗಳನ್ನು ಕೈಗೊಳ್ಳುವುದು ;

(ಉ) ಅಂತಹ ಫಲವತ್ತಾದ ಭೂಮಿ ಬಿಟ್ಟು ಪಾಳು ಭೂಮಿಯಲ್ಲಿ ಕೈಗಾರಿಕೆ ವಸಾಹತು ಸ್ಥಾಪಿಸುವ ಬಗ್ಗೆ ಸರ್ಕಾರ ಯೋಚಿಸಿದೆಯೇ ?

## ಶಾಲಾ ಪಠ್ಯಪುಸ್ತಕ ಮುದ್ರಣ ಕಾರ್ಯವನ್ನು ಸ್ಥಳೀಯರಿಗೆ ನೀಡದೆ ಹೊರ ರಾಜ್ಯದವರಿಗೆ ಆಧ್ಯತೆ ನೀಡಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೩೦ (೧೧೮೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲಾ ಪಠ್ಯಪುಸ್ತಕಗಳ ಮುದ್ರಣ ಕಾರ್ಯವನ್ನು ನಮ್ಮ ರಾಜ್ಯದ ಮುದ್ರಕರಿಗೆ ವಹಿಸದೇ, ಮುದ್ರಕರಿಗೆ ಉತ್ತೇಜನ ನೀಡದೇ, ರಾಜ್ಯದ ಬೊಕ್ಕಸಕ್ಕೆ ಹೊರೆಯಾಗುವಂತೆ ಹೊರ ರಾಜ್ಯದ ಮುದ್ರಕರಿಗೆ ಮುದ್ರಣದ ಹೊಣೆಗಾರಿಕೆ ನೀಡುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸ್ಥಳೀಯ ಪಠ್ಯಪುಸ್ತಕ ಮುದ್ರಕರಿಗೆ ಮುದ್ರಣದ ಗುತ್ತಿಗೆ ನೀಡದೆ, ಹೊರ ರಾಜ್ಯಗಳ ಮುದ್ರಕರಿಗೆ ಗುತ್ತಿಗೆ ನೀಡಲು ಕಾರಣಗಳೇನು ;

(ಇ) ಪುಸ್ತಕ ಮುದ್ರಣದ ಗುತ್ತಿಗೆ ಪಡೆಯಲು ಇರುವ ಮಾನದಂಡಗಳೇನು ; (ವಿವರ ನೀಡುವುದು)

(ಈ) ಹೀಗೆ ಹೊರ ರಾಜ್ಯದವರಿಗೆ ಅವಕಾಶ ನೀಡಿದರೆ, ನಮ್ಮ ರಾಜ್ಯದಲ್ಲಿ ನಿರುದ್ಯೋಗ ಸೃಷ್ಠಿಗೆ ಸರ್ಕಾರವೇ ಸಹಾಯ ಮಾಡಿದಂತಾಗುವುದಿಲ್ಲವೆ ; ಸ್ಥಳೀಯ ಮುದ್ರಕರು ಸರ್ಕಾರದ ಉತ್ತೇಜನದಿಂದ ವಂಚಿಸಿದಂತಾಗುವುದಿಲ್ಲವೇ ;

(ಉ) ಮುಂದೆ ನಮ್ಮ ರಾಜ್ಯದ ಮುದ್ರಕರಿಗೆ ಪಠ್ಯ ಪುಸ್ತಕ ಮುದ್ರಿಸುವ ಹೊಣೆಗಾರಿಕೆ ವಹಿಸುವ ವಿಚಾರ ಸರ್ಕಾರದ ಮುಂದೆ ಇದೆಯೇ ? (ವಿವರ ನೀಡುವುದು)

## ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ನಿಯೋಜನೆ ಮೇಲೆ ಅಧಿಕಾರಿಗಳ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಬಗ್ಗೆ ) –**

೧೦೩೧ (೧೦೭೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೬–೧೭ನೇ ಸಾಲಿನಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದದ ಎಷ್ಟು ಜನ ನೌಕರರನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವಾಲಯ ಮತ್ತು ಆಯುಕ್ತಾಲಯಗಳಿಗೆ ನಿಯೋಜನೆ ಮಾಡಲಾಗಿದೆ ; (ವಿವರ ನೀಡುವುದು)

(ಆ) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಿಂದ ಅನುಮೋದನೆ ಪಡೆದು, ನಿಯೋಜನೆಗೊಳಿಸಲಾದ ನೌಕರರೆಷ್ಟು ? (ಹೆಸರು, ವಿಳಾಸ ಸಹಿತ ಸಂಪೂರ್ಣ ಮಾಹಿತಿ ಹಾಗೂ ಈ ಸಂಬಂಧ ಹೊರಡಿಸಿರುವ ಎಲ್ಲಾ ಆದೇಶಗಳ ಪ್ರತಿಗಳನ್ನು ನೀಡುವುದು)

## ಗ್ರಾಮ ಪಂಚಾಯತ್‌ಗಳಲ್ಲಿ ಈ–ಸ್ವತ್ತು ನಮೂನೆ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೩.೨ (೧೦೭೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯತ್‌ಗಳಲ್ಲಿ ಈ–ಸ್ವತ್ತು ಮೂಲಕ ನಮೂನೆ ೯, ೧೧ಎ ಮತ್ತು ೧೧ಬಿ ವಿತರಿಸಲು ನಿಗಧಿಗೊಳಿಸಿರುವ ಮಾನದಂಡಗಳ ಉಲ್ಲಂಘನೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ; ಹಳೆಯ ಗ್ರಾಮ ಠಾಣಾ ನಕ್ಷೆಗೂ ಈಗ ವಾಸ ಮಾಡುತ್ತಿರುವ ವಸತಿ ಪ್ರದೇಶಗಳಿಗೂ ವ್ಯತ್ಯಾಸವಿದ್ದು, ನಮೂನೆ ೯, ೧೧ಎ ಮತ್ತು ೧೧ಬಿ ಪಡೆಯಲು ಗ್ರಾಮೀಣ ಪ್ರದೇಶದ ಜನರಿಗೆ ತೊಂದರೆಯಾಗುತ್ತಿದ್ದು ಹೊಸದಾಗಿ ಸರ್ವೆ ಮಾಡಿ ಗ್ರಾಮಠಾಣಾ ಹದ್ದುಬಸ್ತು ಗುರುತಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ಮಾಹಿತಿ ನೀಡುವುದು)

## ವಸತಿ ರಹಿತರಿಗೆ ನಿವೇಶನ ಮತ್ತು ವಸತಿ ಸೌಲಭ್ಯ ಕಲ್ಪಿಸುವ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೩.೩ (೧೦೭೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಗರ ಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ ಪರಿಮಿತಿಯಲ್ಲಿ ಹಲವು ವರ್ಷಗಳಿಂದ ವಾಸಿಸುತ್ತಿರುವ ವಸತಿ ರಹಿತರಿಗೆ ನಿವೇಶನ ಮತ್ತು ವಸತಿ ಸೌಲಭ್ಯ ಕಲ್ಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಹಲವು ವರ್ಷಗಳಿಂದ ವಾಸಿಸುತ್ತಿರುವ ವಸತಿ, ನಿವೇಶನ ರಹಿತ ಕುಟುಂಬಗಳನ್ನು ಗಣತಿ ಮಾಡುವಾಗ ಸರ್ಕಾರ ಅನುಸರಿಸಿರುವ ಮಾನದಂಡಗಳೇನು ; (ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ವ್ಯಾಪ್ತಿಯಲ್ಲಿ ವಸತಿ ರಹಿತರ ಗಣತಿ ನಡೆಸಲಾಗಿದೆಯೇ ; ಹಾಗಿದ್ದಲ್ಲಿ, ಎಷ್ಟು ವಸತಿ ರಹಿತ ಕುಟುಂಬಗಳಿವೆ ; (ವಿಧಾನಸಭಾ ಕ್ಷೇತ್ರಗಳವಾರು ಸಂಪೂರ್ಣ ವಿವರ ನೀಡುವುದು)

(ಈ) ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ ಪರಿಮಿತಿಯಲ್ಲಿ ವಸತಿ ರಹಿತ ಕುಟುಂಬಗಳನ್ನು ಗುರುತಿಸಲು ಸರ್ಕಾರ ಅನುಸರಿಸಿರುವ ಮಾನದಂಡಗಳೇನು ? (ಮಾಹಿತಿ ನೀಡುವುದು)

## ಗ್ರಾಮ ಪಂಚಾಯಿತಿ ಸದಸ್ಯರ ಗೌರವಧನ ಹೆಚ್ಚಳದ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೩೪ (೧೦೮೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯಿತಿ ಸದಸ್ಯರ ಗೌರವಧನ ಹೆಚ್ಚಳದ ಬಗ್ಗೆ ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ;

(ಆ) ಈಗ ನೀಡುತ್ತಿರುವ ಗೌರವಧನ ಪ್ರತಿ ತಿಂಗಳು ನೀಡಲಾಗುತ್ತಿದೆಯೇ ; ಇನ್ನೂ ಎಷ್ಟು ತಿಂಗಳುಗಳ ಗೌರವಧನ ಬಾಕಿ ಇದೆ ?

## ಗ್ರಾಮ ಪಂಚಾಯಿತಿಗಳ ಇಂಟರ್‌ನೆಟ್ ಸಮಸ್ಯೆ ಮತ್ತು ಬಾಪೂಜಿ ಸೇವಾ ಕೇಂದ್ರಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೩೫ (೧೧೧೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಇಂಟರ್‌ನೆಟ್ ಸಂಪರ್ಕವಿಲದ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಬಾಪೂಜಿ ಸೇವಾ ಕೇಂದ್ರದಲ್ಲಿ ಸಮರ್ಪಕ ಕಾರ್ಯನಿರ್ವಹಣೆಗೆ ಹೆಚ್ಚುವರಿ ಡಾಟಾ ಎಂಟ್ರಿ ಆಪರೇಟರ್ ಹುದ್ದೆಯ ಅವಶ್ಯಕತೆಯನ್ನು ಸರ್ಕಾರ ಗಮನಿಸಿದೆಯೇ ; ಹೌದಾದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮಗಳು ಯಾವುವು ;

(ಇ) ಬಾಪೂಜಿ ಸೇವಾ ಕೇಂದ್ರದಲ್ಲಿ ಪಡೆದ ಶುಲ್ಕವನ್ನು ಗ್ರಾಮದ ಆಡಳಿತಾತ್ಮಕ ವೆಚ್ಚ ಭರಿಸಿಕೊಳ್ಳಲು ಅದೇ ರೀತಿ ನೀಡಲಾಗಿದೆಯೇ ; ಇಲ್ಲದಿದ್ದಲ್ಲಿ, ಕಾರಣವೇನು ;

(ಈ) ಗ್ರಾಮೀಣ ಪ್ರದೇಶದಲ್ಲಿ ಪೋಡಿಯಾಗದ ಕಾರಣ ಒಂದು R.T.C.ಯು ರೂ. ೧೦ ಶುಲ್ಕಕ್ಕೆ ೨೦ ಪುಟದವರೆಗೂ R.T.C.ಯನ್ನು ನೀಡುತ್ತಿರುವುದರಿಂದ ಗ್ರಾಮದ ಆದಾಯಕ್ಕೆ ನಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹೌದಾದರೆ, ಪುಟವಾರು ಶುಲ್ಕ ನಿಗಧಿಗೆ ಸರ್ಕಾರ ಕೈಗೊಂಡ ಕ್ರಮವೇನು ;

(ಉ) ಬಾಪೂಜಿ ಸೇವಾ ಕೇಂದ್ರದಲ್ಲಿ ಇಂಟರ್‌ನೆಟ್ ಸರ್ವರ್ ನಿಧಾನದ ಸಮಸ್ಯೆಯಿಂದ ಜನರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹೌದಾದರೆ, ಈ ಬಗ್ಗೆ ಕ್ರಮವೇನು ?

## ಉಡುಪಿ ಜಿಲ್ಲೆ, ಗಣಿ ಮತ್ತು ಭೂವಿಜ್ಞಾನ ಇಲಾಖೆಯಲ್ಲಿ ದಾಖಲಾದ ಪ್ರಕರಣದ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೩೬ (೧೧೦೫) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೧೦ ವರ್ಷಗಳಿಂದ ಉಡುಪಿ ಜಿಲ್ಲೆಯಲ್ಲಿ ವಿವಿಧ ಗಣಿಗಾರಿಕೆಯಿಂದ ಸರ್ಕಾರಕ್ಕೆ ಸಂದಾಯವಾದ ರಾಜಧನವೆಷ್ಟು ; ದಂಡನೆಯ ಮೂಲಕ ವಸೂಲಾದ ಹಣವೆಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಆ) ಕಳೆದ ೧೦ ವರ್ಷಗಳಲ್ಲಿ ಉಡುಪಿ ಜಿಲ್ಲೆಯಲ್ಲಿ ಕೋರ್ಟ್‌ನಲ್ಲಿ ಇಲಾಖೆಯಿಂದ ಮತ್ತು ಇಲಾಖೆಯ ವಿರುದ್ಧ ದಾಖಲಾದ ಪ್ರಕರಣಗಳೆಷ್ಟು ; ಅವುಗಳಲ್ಲಿ ತಡೆಯಾಜ್ಞೆ ತಂದವರ ಸಂಖ್ಯೆ ಎಷ್ಟು ; ಎಷ್ಟು ಕ್ರಿಮಿನಲ್ ಕೇಸುಗಳನ್ನು ದಾಖಲಿಸಲಾಗಿದೆ ; ದಂಡನಾ ಶುಲ್ಕ ಪಾವತಿಗೆ ಬಾಕಿಯಿರುವ ಪ್ರಕರಣಗಳೆಷ್ಟು ; ಬಾಕಿಯಿರುವ ಹಣವೆಷ್ಟು ? (ಹೆಸರು ಮತ್ತು ವಿಳಾಸವಾರು ಮಾಹಿತಿಯನ್ನು ನೀಡುವುದು)

## ಜಿಲ್ಲಾ ಪಂಚಾಯಿತಿ ಹಾಗೂ ತಾಲ್ಲೂಕು ಪಂಚಾಯಿತಿ ಅಧ್ಯಕ್ಷರು ಮತ್ತು ಉಪಾಧ್ಯಕ್ಷರಿಗೆ ಸೌಲಭ್ಯ ನೀಡುವ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೩೭ (೧೧೦೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಜಿಲ್ಲಾ ಪಂಚಾಯತ್ ಅಧ್ಯಕ್ಷರು ಮತ್ತು ಉಪಾಧ್ಯಕ್ಷರಿಗೆ ಸರ್ಕಾರದಿಂದ ದೊರೆಯಬೇಕಾದ ಸೌಲಭ್ಯಗಳು ಯಾವುವು ; ಪ್ರಸ್ತುತ ದೊರೆಯುತ್ತಿರುವ ಸೌಲಭ್ಯಗಳು ಯಾವುವು ; ಪೂರ್ಣ ಪ್ರಮಾಣದಲ್ಲಿ ದೊರೆಯದಿದ್ದಲ್ಲಿ, ಈ ಬಗ್ಗೆ ಸರ್ಕಾರದ ಕ್ರಮವೇನು ;

(ಆ) ರಾಜ್ಯದ ತಾಲ್ಲೂಕು ಪಂಚಾಯಿತಿ ಅಧ್ಯಕ್ಷರು ಮತ್ತು ಉಪಾಧ್ಯಕ್ಷರಿಗೆ ಸರ್ಕಾರದಿಂದ ದೊರೆಯಬೇಕಾದ ಸೌಲಭ್ಯಗಳು ಯಾವುವು ; ಪ್ರಸ್ತುತ ದೊರೆಯುತ್ತಿರುವ ಸೌಲಭ್ಯಗಳು ಯಾವುವು ; ಪೂರ್ಣ ಪ್ರಮಾಣದಲ್ಲಿ ದೊರೆಯದಿದ್ದರೆ, ಈ ಬಗ್ಗೆ ಸರ್ಕಾರದ ಕ್ರಮವೇನು ?

## ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಿಂಡಿ ಅಣೆಕಟ್ಟು ನಿರ್ವಹಣೆಯ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೩೮ (೧೧೦೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ವಿವಿಧ ಯೋಜನೆಗಳ ಅಡಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ನಿರ್ಮಿಸಲಾದ ಕಿಂಡಿ ಅಣೆಕಟ್ಟುಗಳ ಸಂಖ್ಯೆ ಎಷ್ಟು ; ಈ ಅಣೆಕಟ್ಟುಗಳ ವಾರ್ಷಿಕ ನಿರ್ವಹಣೆಯನ್ನು ಯಾರು ಮಾಡುತ್ತಿದ್ದಾರೆ ; ಮತ್ತು ಕಳೆದ ೩ ವರ್ಷಗಳಲ್ಲಿ ವಾರ್ಷಿಕ ನಿರ್ವಹಣಾ ವೆಚ್ಚ ಎಷ್ಟು ;

(ಆ) ಬೇರೆ ಬೇರೆ ಇಲಾಖೆಯ ಯೋಜನೆಯಡಿ ನಿರ್ಮಿಸಲಾದ ಕಿಂಡಿ ಅಣೆಕಟ್ಟುಗಳನ್ನು ಗ್ರಾಮ ಪಂಚಾಯಿತಿಗಳು ತಮ್ಮ ಸ್ವಂತ ಸಂಪನ್ಮೂಲದಲ್ಲಿ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಗ್ರಾಮ ಪಂಚಾಯಿತಿಗಳಿಗೆ ಈ ಬಗ್ಗೆ ಕಳೆದ ೩ ವರ್ಷಗಳಲ್ಲಿ ನೀಡಲಾದ ಅನುದಾನವೆಷ್ಟು ; (ವರ್ಷವಾರು, ತಾಲ್ಲೂಕುವಾರು ಮಾಹಿತಿ ನೀಡುವುದು) ಕಿಂಡಿ ಅಣೆಕಟ್ಟುಗಳ ವಾರ್ಷಿಕ ನಿರ್ವಹಣೆಯು ಗ್ರಾಮ ಪಂಚಾಯಿತಿಗೆ ಆರ್ಥಿಕ ಹೊರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಕಿಂಡಿ ಅಣೆಕಟ್ಟುಗಳ ಸಂಖ್ಯೆ ಎಷ್ಟು ? (ಗ್ರಾಮ ಪಂಚಾಯಿತಿವಾರು ಮಾಹಿತಿ ನೀಡುವುದು)

## ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ವಿವಿಧ ದರ್ಜೆಯ ಅಧಿಕಾರಿಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೩೯ (೧೧೦೬) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗಣಿ ಮತ್ತು ಭೂವಿಜ್ಞಾನ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಅಧಿಕಾರಿಗಳ ಸಂಖ್ಯೆ ಎಷ್ಟು ; (ಹುದ್ದೆವಾರು, ಜಿಲ್ಲಾವಾರು, ಹೆಸರುವಾರು ವಿವರ ನೀಡುವುದು) ಅವರು ಅಧಿಕಾರವನ್ನು ಸ್ವೀಕರಿಸಿದ ದಿನಾಂಕ

ಯಾವುದು ; ಪ್ರಸ್ತುತವಿರುವ ಈ ಹುದ್ದೆ ಸ್ವೀಕಾರದ ಪೂರ್ವದಲ್ಲಿ ಯಾವ ಯಾವ ಅವಧಿಗೆ ಎಲ್ಲೆಲ್ಲಿ ಸೇವೆ ಸಲ್ಲಿಸಿರುತ್ತಾರೆ ; (ಸಂಪೂರ್ಣ ವಿವರ ಒದಗಿಸುವುದು)

(ಆ) ಪ್ರಸ್ತುತ ಸೇವೆ ಸಲ್ಲಿಸುತ್ತಿರುವ ಅಧಿಕಾರಿಗಳಲ್ಲಿ ಇಲಾಖಾ ತನಿಖೆ ದಾಖಲಾಗಿರುವವರ ಸಂಖ್ಯೆ ಎಷ್ಟು ; ಅವರ ವಿರುದ್ಧ ಕೈಗೊಂಡ ಕ್ರಮಗಳೇನು ; (ಹುದ್ದೆವಾರು, ಹೆಸರುವಾರು, ಇಲಾಖಾ ತನಿಖಾವಾರು ವಿವರ ನೀಡುವುದು)

(ಇ) ಇಲಾಖಾ ತಜ್ಞರ ಕೊರತೆಯಿರುವುದು ನಿಜವೆ ; ರಾಜ್ಯದ ಸಂಪನ್ಮೂಲಗಳಿಗೆ ಹೊಂದಿಕೊಂಡು ಸಿಬ್ಬಂದಿಗಳ ಸಂಖ್ಯೆ ಕಡಿಮೆಯಿರುವುದರಿಂದ, ಸರ್ಕಾರದ ಬೊಕ್ಕಸಕ್ಕೆ ದಿನನಿತ್ಯ ಸೋರಿಕೆಯಾಗುತ್ತಿರುವುದು ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಕೈಗೊಂಡ ಕ್ರಮವೇನು ?

## ಹೊಸ ಗ್ರಾಮ ಪಂಚಾಯಿತಿಗಳಿಗೆ ಮೂಲ ಸೌಕರ್ಯಗಳ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೪೦ (೧೧೧೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೪೩೩ ಹೊಸ ಗ್ರಾಮ ಪಂಚಾಯಿತಿಗಳನ್ನು ರಚಿಸಿ ೨ ವರ್ಷಗಳು ಕಳೆದರೂ ಇನ್ನೂ ಮೂಲ ಸೌಕರ್ಯಗಳಾದ ಕಟ್ಟಡ, ಪೀಠೋಪಕರಣ ಒದಗಿಸದೇ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ೨೦೧೮ರ ನವೆಂಬರ್ ೧೯ರಂದು ಆರ್ಥಿಕ ಇಲಾಖೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಪ್ರಧಾನ ಕಾರ್ಯದರ್ಶಿಗಳು ಬರೆದ ಪತ್ರದಲ್ಲಿ ೧೩೭ ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಲು ಕೋರಿರುವ ಪ್ರಸ್ತಾವನೆ ಕುರಿತು ಸರ್ಕಾರ ಕೈಗೊಂಡ ಕ್ರಮವೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ೧೩೭ ಕೋಟಿ ರೂಪಾಯಿ ಬೇಡಿಕೆ ಇದ್ದರೂ, ಕೇವಲ ೩೦ ಕೋಟಿ ರೂಪಾಯಿ ಮಂಜೂರು ಮಾಡಿರುವುದಕ್ಕೆ ಕಾರಣಗಳೇನು ; ಉಳಿದ ೧೦೭ ಕೋಟಿ ರೂಪಾಯಿ ಅನುದಾನವನ್ನು ಯಾವ ಕಾಲಮಿತಿಯಲ್ಲಿ ಬಿಡುಗಡೆ ಮಾಡಲಾಗುವುದು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಬಿಡುಗಡೆಯಾಗಿರುವ ಅನುದಾನವನ್ನು ರಾಜ್ಯದ ಯಾವ ಯಾವ ಗ್ರಾಮ ಪಂಚಾಯಿತಿಗಳಿಗೆ ಯಾವ ರೀತಿ ಹಂಚಿಕೆ ಮಾಡಲಾಗಿದೆ ; ಬಿಡುಗಡೆ ಮಾಡಿರುವ ಹಣವನ್ನು ಯಾವ ಯಾವ ಕೆಲಸಕಾರ್ಯಗಳಿಗೆ ಬಳಸಲು ಕ್ರಮ ವಹಿಸಲಾಗಿದೆ ? (ಮಾಹಿತಿ ನೀಡುವುದು)

## ಶುದ್ಧ ಕುಡಿಯುವ ನೀರಿನ ಯೋಜನೆ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೪೧ (೧೧೧೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕುಡಿಯುವ ನೀರಿಗಾಗಿ ಎಲ್ಲಾ ಕಡೆ ತುಂಬಾ ತೊಂದರೆಯಾಗುತ್ತಿದ್ದು, ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಯಾದ ಶುದ್ಧ ಕುಡಿಯುವ ನೀರಿನ ಘಟಕಗಳ ಸ್ಥಾಪನೆ ಯೋಜನೆಯಡಿಯಲ್ಲಿ ಭ್ರಷ್ಟಾಚಾರ ಆಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ರಾಜ್ಯದಲ್ಲಿ ಈ ವಿಚಾರವಾಗಿ ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿವೆ ; ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಶುದ್ಧ ನೀರಿನ ಘಟಕಗಳನ್ನು ಸ್ಥಾಪಿಸಲು ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ;

(ಇ) ಯಾವ ಯಾವ ಜಿಲ್ಲೆಗಳ ಯಾವ ಯಾವ ಗ್ರಾಮಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದೆ ; ಒಂದು ಘಟಕಕ್ಕೆ ತಗಲಿರುವ ವೆಚ್ಚವೆಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯ ಸಾರಿಗೆ ಸಂಸ್ಥೆಯ ಬಸ್‌ಗಳ ಕುರಿತು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೪೨ (೧೦೮೯) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಈಶಾನ್ಯ ಸಾರಿಗೆ ಸಂಸ್ಥೆಯಡಿ ಬೀದರ್‌ನಿಂದ ಬೆಂಗಳೂರು ಮಾರ್ಗದಲ್ಲಿ ಹೆಚ್ಚು ಜನ ಸಂಚಾರವಿದ್ದು, ಎಲ್ಲಾ ರೀತಿಯ ಬಸ್‌ಗಳು ತುಂಬಾ ಹಾಳಾಗಿದ್ದು, ಜನರಿಗೆ ಆಗುತ್ತಿರುವ ತೊಂದರೆಯ ಕುರಿತು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳ ಪೂರ್ಣ ಮಾಹಿತಿ ನೀಡುವುದು ;

(ಆ) ಹಳೆಯ ಬಸ್‌ಗಳನ್ನು ಬದಲಿಸಿ ಹೊಸ ಬಸ್‌ಗಳನ್ನು ನೀಡಲು ಯಾವ ಕ್ರಮ ಕೈಗೊಳ್ಳಲಾಗಿದೆ ; ಹಾಗೂ ಇದು ಯಾವ ಕಾಲಮಿತಿಯಲ್ಲಿ ಚಾಲನೆಗೆ ಬರಲಿದೆ ; (ಪೂರ್ಣ ವಿವರ ನೀಡುವುದು)

(ಇ) ಬೀದರ್‌ನಿಂದ ಬೆಂಗಳೂರು ಮಾರ್ಗದಲ್ಲಿ ಹೆಚ್ಚು ಜನ ಸಂಚಾರವಿದ್ದು, ಎ.ಸಿ., ಸ್ಲೀಪರ್ ಬಸ್‌ಗಳ ಅವಶ್ಯಕತೆ ಹೆಚ್ಚಾಗಿರುವ ಕಾರಣ ಈ ಬಸ್‌ನ ಸಂಚಾರವನ್ನು ಯಾವ ಕಾಲಮಿತಿಯಲ್ಲಿ ಮಂಜೂರು ಮಾಡಲಾಗುವುದು ?

## ಬೀದರ್ ಜಿಲ್ಲೆಗಳಲ್ಲಿ ಗ್ರಾಮ ಪಂಚಾಯಿತಿ ಸಿಬ್ಬಂದಿಗಳನ್ನು ಖಾಯಂ ಮಾಡುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೪೩ (೧೮೯೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಗ್ರಾಮ ಪಂಚಾಯಿತಿಗಳಲ್ಲಿ ಗುಮಾಸ್ತರು, ಎಲೆಕ್ಟ್ರಿಷಿಯನ್ ಮತ್ತು ಇನ್ನಿತರೆ ಹುದ್ದೆಗೆ ಎಸ್.ಎಸ್.ಎಲ್.ಸಿ. ವಿದ್ಯಾರ್ಹತೆ (ಪ್ರೌಢ ಶಿಕ್ಷಣ) ಮೇರೆಗೆ ಸೇವೆಗೆ ಸೇರಿ ಸುಮಾರು ೧೦ ರಿಂದ ೧೫ ವರ್ಷಕ್ಕೂ

ಹೆಚ್ಚು ಸೇವೆ ಪೂರೈಸಿದ್ದರೂ ಅನುಮೋದನೆಗೆ ಒಳಪಡಿಸದೆ ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಗ್ರಾಮ ಪಂಚಾಯತವಾರು ಸಿಬ್ಬಂದಿಗಳ ಸೇವಾ ಅವಧಿ, ಹೆಸರು, ವಿಳಾಸದೊಂದಿಗೆ ಸಂಪೂರ್ಣ ವಿವರ ನೀಡುವುದು)

(ಆ) ಹಾಗೆ ಈ ಸಿಬ್ಬಂದಿಗಳು ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿಗಳಿಗೆ ಪಿ.ಎಫ್. ಮತ್ತು ಇತರೆ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿರುವುದು ; ಇಲ್ಲವಾದಲ್ಲಿ, ಕಾರಣವೇನು ;

(ಇ) ಗ್ರಾಮ ಪಂಚಾಯಿತಿಗಳಲ್ಲಿ ೧೦/೧೫ ವರ್ಷಕ್ಕೂ ಹೆಚ್ಚು ಅವಧಿಯಿಂದ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿಗಳ ಅನುಮೋದನೆಗೆ ಏನು ಕ್ರಮ ಕೈಗೊಳ್ಳಲಾಗುವುದು ;

(ಈ) ಉದ್ಯೋಗ ಭದ್ರತೆ ಸೌಲಭ್ಯ ಮತ್ತು ಕಾರ್ಮಿಕ ಕಾಯ್ದೆಯನ್ನು ಒಪ್ಪಿ ಗೌರವಿಸಬೇಕಾದದ್ದು ಇಲಾಖೆಯ ಹೊಣೆಯಲ್ಲವೇ ; ಸರಿಪಡಿಸಲು ಕ್ರಮ ಕೈಗೊಳ್ಳಲಾಗುವುದೆ ;

(ಉ) ಈ ಇಲಾಖೆಯಲ್ಲಿ ೧೦ ರಿಂದ ೧೫ ವರ್ಷಗಳ ಮೇಲ್ಪಟ್ಟು ಕಾರ್ಯನಿರ್ವಹಿಸುತ್ತಿರುವವರನ್ನು ಎಷ್ಟು ದಿನಗಳಲ್ಲಿ ಇಂತಹ ಸಿಬ್ಬಂದಿಗಳಿಗೆ ಖಾಯಂ ಮಾಡಲಾಗುವುದು ? (ವಿವರ ನೀಡುವುದು)

## ಶಾಲಾ ಕಾಲೇಜುಗಳಲ್ಲಿ ಶೌಚಾಲಯಗಳ ಕೊರತೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೪೪ (೧೯೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿರುವ ಎಲ್ಲಾ ವಿಧಾನ ಸಭೆ ಕ್ಷೇತ್ರ ವ್ಯಾಪ್ತಿಯಲ್ಲಿರುವ ಪ್ರಾಥಮಿಕ ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಶೌಚಾಲಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಬಂದಿದ್ದಲ್ಲಿ, ಶೌಚಾಲಯಗಳ ಕೊರತೆಯಿರುವ ಶಾಲಾ ಕಾಲೇಜುಗಳ ಸಂಖ್ಯೆ ಎಷ್ಟು ; (ಶಾಲಾ ಕಾಲೇಜುಗಳವಾರು ಸರ್ಕಾರ ಮತ್ತು ಅನುದಾನಿತ ವಿವರ ನೀಡುವುದು)

(ಇ) ಶೌಚಾಲಯಗಳಿಲ್ಲದ ಸರ್ಕಾರಿ/ಅನುದಾನಿತ ಶಾಲಾ ಕಾಲೇಜುಗಳಲ್ಲಿ ಶೌಚಾಲಯಗಳ ನಿರ್ಮಾಣಕ್ಕಾಗಿ ಸರ್ಕಾರ ಕೈಗೊಂಡಿರುವ ತುರ್ತು ಕ್ರಮಗಳೇನು ; (ವಿವರ ನೀಡುವುದು)

(ಈ) ಬೀದರ್ ಜಿಲ್ಲೆಯ ಗ್ರಾಮಾಂತರ ಪ್ರದೇಶದಲ್ಲಿನ ಹೆಣ್ಣು ಮಕ್ಕಳಿಗೆ ಪ್ರತ್ಯೇಕ ಶೌಚಾಲಯಗಳು ಹಾಗೂ ಅಗತ್ಯ ನೀರಿನ ಸಂಪರ್ಕ ಕಲ್ಪಿಸುವಲ್ಲಿ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ? (ಸ್ಪಷ್ಟ ಮಾಹಿತಿ ನೀಡುವುದು)

## ಮನೆಗಳ ನಿರ್ಮಾಣ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೪೫ (೧೯೯೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೧೬ ಮತ್ತು ೨೦೧೬–೧೭ನೇ ಸಾಲಿನವರೆಗೆ ಬೀದರ್ ಜಿಲ್ಲೆಗೆ ಕೊಳಚೆ ನಿರ್ಮೂಲನಾ ಮಂಡಳಿಯಿಂದ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮಂಜೂರಾದ ಮನೆಗಳಲ್ಲಿ ಎಷ್ಟು ಮನೆಗಳನ್ನು ನಿರ್ಮಿಸಲಾಗಿದೆ ;

(ಇ) ನಿರ್ಮಿಸಲಾದ ಮನೆಗಳನ್ನು ಫಲಾನುಭವಿಗಳಿಗೆ ಹಂಚಿಕೆ ಮಾಡಲಾಗಿದೆಯೇ ; ಫಲಾನುಭವಿಗಳನ್ನು ಯಾವ ಮಾನದಂಡದಡಿ ಆಯ್ಕೆ ಮಾಡಲಾಗುವುದು ;

(ಈ) ನಿರ್ಮಿಸಿರುವ ಪ್ರತಿ ಮನೆಗೆ ತಗಲಿರುವ ಮೊತ್ತವೆಷ್ಟು ? (ಸಂಪೂರ್ಣ ವಿವರ ನೀಡುವುದು)

# ತಾಂತ್ರಿಕ ಸಮಿತಿ ಬಗ್ಗೆ

**ಶ್ರೀ ರಿಜ್ವಾನ್ ಅರ್ಷದ್ (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೪೬ (೧೧೬೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರದ ಸರ್ವ ಶಿಕ್ಷಣ ಅಭಿಯಾನದಲ್ಲಿ ಉರ್ದು ಮಕ್ಕಳಿಗಾಗಿ ಶಾಲಾ ಪೂರ್ವ ಶಿಕ್ಷಣವನ್ನು ಪ್ರಾರಂಭಿಸಲು ಮಾನವ ಸಂಪನ್ಮೂಲ ಸಚಿವಾಲಯವು ೨೦೧೩ರಲ್ಲಿ ತಾಂತ್ರಿಕ ಸಮಿತಿಯ ತನಿಖೆಗೆ ಆದೇಶ ಹೊರಡಿಸಿದ್ದು, ಸಮಿತಿಯು ಸಮೀಕ್ಷಾ ವರದಿಯನ್ನು ತಯಾರಿಸಿ ಸರ್ಕಾರಕ್ಕೆ ಸಲ್ಲಿಸಿದ ವರದಿಗೆ ರಾಜ್ಯ ಸರ್ಕಾರ ಕೈಗೊಂಡ ಕ್ರಮವೇನು ; (ಸಂಪೂರ್ಣ ವಿವರ ನೀಡುವುದು)

(ಆ) ತಾಂತ್ರಿಕ ಸಮಿತಿ ಸಲ್ಲಿಸಿದ ವಿಷಯಕ್ಕೆ ಮರು ತನಿಖೆ ನಡೆಸಲು ಆದೇಶವಾಗಿದೆಯೇ ; ಅಥವಾ ಉರ್ದು ಭಾಷಿಕ ಸಿಬ್ಬಂದಿಗಳನ್ನು ನೇಮಿಸಿಕೊಳ್ಳುವ ಸಲುವಾಗಿ ಸಮೀಕ್ಷಾ ಕಾರ್ಯ ಕೈಗೊಳ್ಳಲು ಮಾತ್ರ ಆದೇಶವಾಗಿರುತ್ತದೆಯೇ ;

(ಇ) ತಾಂತ್ರಿಕ ಸಮಿತಿಯ ನೇಮಕಾತಿ ಹಾಗೂ ಕೈಗೊಳ್ಳಬೇಕಾದ ತನಿಖೆಯ ಬಗ್ಗೆ ಹಿಂದಿನ ಕೇಂದ್ರ ಸರ್ಕಾರವು ಹೊರಡಿಸಿದ್ದ ಆದೇಶ ಪ್ರತಿ ಹಾಗೂ ವಸ್ತುಸ್ಥಿತಿಯ ಬಗ್ಗೆ ಸೂಕ್ತ ಮಾಹಿತಿಯ ವಿವರ ನೀಡುವುದು ;

(ಈ) ಉರ್ದು ಭಾಷಿಕ ಅಲ್ಪಸಂಖ್ಯಾತ ಮಕ್ಕಳಿಗಾಗಿ ಹಮ್ಮಿಕೊಂಡ ಕಾರ್ಯಕ್ರಮಗಳ ವಿಫಲತೆಯನ್ನು ಕಂಡುಹಿಡಿಯಲು ಮತ್ತು ತಾಂತ್ರಿಕ ಸಮಿತಿಯು ತನ್ನ ತನಿಖಾ ಕಾರ್ಯ ಚಟುವಟಿಕೆಗಳನ್ನು ನಡೆಸಲು ಉರ್ದು, ಆಂಗ್ಲ ಮತ್ತು ಕನ್ನಡವನ್ನು ಬಲ್ಲಂತಹ ಬೇರೊಬ್ಬ ಅಧಿಕಾರಿಯನ್ನು ನೇಮಿಸುವ ಬಗ್ಗೆ ಸರ್ಕಾರದ ಸ್ಪಷ್ಟ ಅಭಿಪ್ರಾಯವೇನು ?

## ಅನುದಾನಿತ ಶೈಕ್ಷಣಿಕ ಸಿಬ್ಬಂದಿಗಳಿಗೆ ಶ್ರೀ ಬಸವರಾಜ ಹೊರಟ್ಟಿಯವರ ವರದಿ ಪ್ರಕಾರ ಕಾಲ್ಪನಿಕ ವೇತನ ನೀಡುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ ) –**

೧೦೪೭ (೧೨೦೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಶೈಕ್ಷಣಿಕ ಸಿಬ್ಬಂದಿಗಳಿಗೆ ಕಾಲ್ಪನಿಕ ವೇತನ ನಿಗಧಿ ಕುರಿತು ಹಾಗೂ ಪಿಂಚಣಿ ಹಿಂಬಾಕಿ ಕುರಿತಂತೆ ರಾಜ್ಯ ಉಚ್ಛ ನ್ಯಾಯಾಲಯದಲ್ಲಿ ಆದೇಶವಾಗಿರುವುದು ನಿಜವೇ ;

(ಆ) ನಿಜವಾಗಿದ್ದಲ್ಲಿ, ಸದರಿ ಆದೇಶದ ಸಾರಾಂಶವೇನು ;

(ಇ) ಕಾಲ್ಪನಿಕ ವೇತನ ವಿಷಯದ ಸಂಬಂಧ, ಶ್ರೀ ಬಸವರಾಜ ಹೊರಟ್ಟಿಯವರ ಸಮಿತಿಯು, ವರದಿಯನ್ನು ಯಾವಾಗ ಮಂಡಿಸಿತು ;

(ಈ) ಈ ವರದಿಯ ಸಾರಾಂಶವೇನು ;

(ಉ) ಸದರಿ ವರದಿ ಹಾಗೂ ಆದೇಶವನ್ನು ಅನುಷ್ಠಾನಗೊಳಿಸುವ ಕುರಿತಂತೆ ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಸರ್ಕಾರಿ ಪದವಿ ಕಾಲೇಜುಗಳಲ್ಲಿ ಪ್ರಾಂಶುಪಾಲರ ಹುದ್ದೆಗಳು ಖಾಲಿ ಇದ್ದು, ಭರ್ತಿ ಮಾಡುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ ) –**

೧೦೪೮ (೧೨೦೪) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಪದವಿ ಕಾಲೇಜುಗಳು ಎಷ್ಟು ; ಎಷ್ಟು ಕಾಲೇಜುಗಳಲ್ಲಿ ಪ್ರಾಂಶುಪಾಲರ ಹುದ್ದೆಗಳು ಖಾಲಿ ಇದೆ ;

(ಆ) ಒಬ್ಬರೇ ಎರಡು ಕಾಲೇಜುಗಳಲ್ಲಿ ಮತ್ತು ಮೂರು ಕಾಲೇಜುಗಳಲ್ಲಿ ಉಸ್ತುವಾರಿ ಪ್ರಾಂಶುಪಾಲರಾಗಿ ಕಾರ್ಯನಿರ್ವಹಿಸುತ್ತಿರುವ ಕಾಲೇಜುಗಳ ಸಂಖ್ಯೆ ಎಷ್ಟು ;

(ಇ) ಎಷ್ಟು ವರ್ಷಗಳಿಂದ ಪ್ರಾಂಶುಪಾಲರ ಹುದ್ದೆಗಳು ಖಾಲಿ ಇವೆ ; (ಸಂಕ್ಷಿಪ್ತ ವಿವರ ನೀಡುವುದು)

(ಈ) ಎಷ್ಟು ಕಾಲೇಜುಗಳಲ್ಲಿ ಪದೋನ್ನತಿಯಿಂದ ಪ್ರಾಂಶುಪಾಲರ ಹುದ್ದೆಗಳನ್ನು ತುಂಬಬಹುದಾಗಿದೆ ;

(ಉ) ಪ್ರಾಂಶುಪಾಲರುಗಳಿಲ್ಲದೆ ಕಾಲೇಜುಗಳಲ್ಲಿ ಗುಣಮಟ್ಟದೊಂದಿಗೆ ಸಮರ್ಪಕವಾಗಿ ಕಾಲೇಜು ನಡೆಸಲು ಸಾಧ್ಯವೇ ?

## ಲಲಿತಕಲಾ ವಿಶ್ವವಿದ್ಯಾಲಯವನ್ನು ನೂತನವಾಗಿ ಸ್ಥಾಪಿಸುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ ) –**

೧೦೪೯ (೧೨೦೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇರುವ ಲಲಿತಕಲಾ ಮಹಾವಿದ್ಯಾಲಯಗಳೆಷ್ಟು ; ಅವು ಯಾವುವು ; ಇವುಗಳಿಗೆ ಪ್ರತ್ಯೇಕ ಲಲಿತಕಲಾ ವಿಶ್ವವಿದ್ಯಾಲಯದ ಅಗತ್ಯವಿಲ್ಲವೇ ; ಅಗತ್ಯವಿಲ್ಲವೆಂದಾದರೆ, ಕಾರಣವೇನು ;

(ಆ) ಕನ್ನಡ ಭಾಷೆಯ ಕಲೆ, ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ದೃಷ್ಟಿಯಿಂದ ಲಲಿತಕಲಾ ವಿಶ್ವವಿದ್ಯಾಲಯುವನ್ನು ಸ್ಥಾಪಿಸಲು ಸರ್ಕಾರ ಮುಂದಾಗುವುದೆ ;

(ಇ) ಸದರಿ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಯೋಜನೆ ಇದೆಯೇ ? (ವಿವರ ನೀಡುವುದು)

## ಶ್ರೀ ಕುಮಾರ ನಾಯಕ್ ರವರ ವರದಿಯಂತೆ ವೇತನ ತಾರತಮ್ಯ ನಿವಾರಣೆ ಮಾಡುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ ) –**

೧೦೫೧ (೧೨೦೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಸರ್ಕಾರಿ ಹಾಗೂ ಅನುದಾನಿತ ಶಿಕ್ಷಕರುಗಳಿಗೆ ವೇತನ ತಾರತಮ್ಯ ನಿವಾರಣೆ ಕುರಿತಂತೆ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾಗಿದ್ದ ಶ್ರೀ ಕುಮಾರ ನಾಯಕ್ ರವರು ವರದಿ ನೀಡಿರುವುದು ನಿಜವೇ ; ಯಾವಾಗ ನೀಡಿರುತ್ತಾರೆ ;

(ಆ) ವೇತನ ತಾರತಮ್ಯ ಕುರಿತಂತೆ ಯಾವ ರೀತಿಯ ಅಭಿಪ್ರಾಯವನ್ನು ವ್ಯಕ್ತಪಡಿಸಿರುತ್ತಾರೆ ; ವರದಿಯಲ್ಲಿ ನೀಡಿರುವ ಪ್ರಮುಖ ಸಲಹೆಗಳು ಯಾವುವು ;

(ಇ) ಶಿಕ್ಷಕರುಗಳ ವೇತನ ತಾರತಮ್ಯ ನಿವಾರಣೆಯ ಬಗ್ಗೆ ಯಾವ ರೀತಿಯ ವರದಿ ನೀಡಿರುತ್ತಾರೆ ;

(ಈ) ಇವುಗಳಲ್ಲಿ ಯಾವ ಅಂಶಗಳನ್ನು ಮಾನ್ಯ ಮಾಡಿ ಜಾರಿಗೊಳಿಸಲಾಗಿದೆ ;

(ಉ) ವರದಿಯನ್ನು ಯಥಾವತ್ ಜಾರಿಗೊಳಿಸಲು ಯಾವ ಅಂಶಗಳಲ್ಲಿ ಅಡಚಣೆಯಾಗಿರುತ್ತದೆ ? (ವಿವರಿಸುವುದು)

## ಗ್ರಂಥಾಲಯ ಇಲಾಖೆಯಲ್ಲಿ ಸಂಗ್ರಹವಾದ ಸೆಸ್ ಹಣದ ಬಳಕೆಯ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೫೧ (೧೦೭೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗ್ರಂಥಾಲಯ ಇಲಾಖೆಗೆ ಕಳೆದ ಮೂರು ವರ್ಷಗಳಲ್ಲಿ ಸಂದಾಯವಾದ ಸೆಸ್ ಹಣವೆಷ್ಟು ; (ಜಿಲ್ಲಾವರು ವಿವರ ನೀಡುವುದು)

(ಆ) ಇಲಾಖೆಯು ಪಡೆದ ಈ ಹಣವನ್ನು ಯಾವ ಯಾವ ಕಾರ್ಯಗಳಿಗಾಗಿ ವ್ಯಯಿಸಿದೆ ; (ಜಿಲ್ಲಾವಾರು, ಕಾಮಗಾರಿವಾರು, ಕೆಲಸ ನಿರ್ವಹಿಸಿದ ಗುತ್ತಿಗೆದಾರರ ವಿವರಗಳೊಂದಿಗೆ ವೆಚ್ಚದ ಸಂಪೂರ್ಣ ವಿವರಗಳನ್ನು ನೀಡುವುದು)

(ಇ) ಇಲಾಖೆಯು ಕಳೆದ ಮೂರು ವರ್ಷಗಳಲ್ಲಿ ಖರೀದಿಸಿದ ಪೀಠೋಪಕರಣಗಳೆಷ್ಟು ; ಇದಕ್ಕಾಗಿ ವ್ಯಯಿಸಿದ ಹಣವೆಷ್ಟು ? (ಗುತ್ತಿಗೆದಾರರ ವಿವರಗಳೊಂದಿಗೆ, ಜಿಲ್ಲಾವಾರು ವಿವರ ನೀಡುವುದು, ಕೊಡಗು ಜಿಲ್ಲೆಗೆ ಸಂಬಂಧಿಸಿದಂತೆ ಗ್ರಂಥಾಲಯಗಳವಾರು ವಿವರ ನೀಡುವುದು)

## ರಾಜ್ಯದಲ್ಲಿ ಬಂಡವಾಳ ಹೂಡಿಕೆ ಮತ್ತು ಸಮಾವೇಶ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೫೨ (೧೧೩೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಯಾವಾಗಿನಿಂದ ಬಂಡವಾಳ ಹೂಡಿಕೆದಾರರ ಸಮಾವೇಶವನ್ನು ಆಯೋಜಿಸಲಾಗುತ್ತಿದೆ ; ಸಮಾವೇಶ ನಡೆದ ವರ್ಷಾವಾರು, ಹೂಡಿಕೆಗೆ ಮುಂದಾಗಿದ್ದ ಕಂಪನಿಗಳು ಹೂಡಿಕೆಗೆ ಉದ್ದೇಶಿಸಿದ್ದ ಮೊತ್ತವೆಷ್ಟು ;

(ಆ) ಅದೇ ಪ್ರಕಾರವಾಗಿ ಘೋಷಿಸಿದ್ದ ಸ್ಥಳದಲ್ಲಿಯೇ ಕಂಪನಿಗಳು ಕಾರ್ಯಾರಂಭ ಮಾಡಿವೆಯೇ ; ನಿರೀಕ್ಷಿಸಿದಷ್ಟು ಹಣಕಾಸು ಬಂಡವಾಳ ಲಭ್ಯವಾಗಿದೆಯೇ ;

(ಇ) ಇಲ್ಲದಿದ್ದಲ್ಲಿ, ಕಾರಣಗಳೇನು ; ರಾಜ್ಯದ ಯಾವ ಯಾವ ಭಾಗಕ್ಕೆ ಎಷ್ಟೆಷ್ಟು ಮೊತ್ತ ನಿರೀಕ್ಷಿಸಲಾಗಿತ್ತು ; ನೈಜವಾಗಿ ಹರಿದು ಬಂದಿರುವ ಬಂಡವಾಳ ಎಷ್ಟು ;

(ಈ) ಈ ನಿಟ್ಟಿನಲ್ಲಿ ಆಗಿರುವ ಪ್ರಗತಿ ವಿವರಗಳನ್ನು ಒದಗಿಸುವುದು ; ಕೈಗಾರಿಕೋದ್ಯಮಕ್ಕೆ ನಿರೀಕ್ಷಿಸಲಾರದಷ್ಟು ಪ್ರತಿಕ್ರಿಯೆ ದೊರೆಯದಿರುವ ಬಗ್ಗೆ ಸರ್ಕಾರದ ನಿಲುವೇನು ;

(ಉ) ಇದರಿಂದಾಗಿ ಸರ್ಕಾರ ತೀವ್ರ ಹಿನ್ನೆಡೆಯುನ್ನು ಅನುಭವಿಸಿದಂತಾಗುವುದಿಲ್ಲವೇ ? (ವಿವರಗಳನ್ನು ನೀಡುವುದು)

## ವಸತಿ ಯೋಜನೆಗಳ ಅಡಿಯಲ್ಲಿ ನಿರ್ಮಿಸಲಾದ ಮನೆಗಳ ಕುರಿತು

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೫೩ (೧೦೭೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೧೫–೧೬ನೇ ಸಾಲಿಗೆ ಗ್ರಾಮ ಪಂಚಾಯಿತಿ ವ್ಯಾಪ್ತಿಗಳಲ್ಲಿ ವಸತಿ ಯೋಜನೆಗಳ ಅಡಿಯಲ್ಲಿ ಮನೆಗಳ ನಿರ್ಮಾಣಕ್ಕೆ ಇಟ್ಟಿದ್ದ ಗುರಿ ಎಷ್ಟು ; ಬಿಡುಗಡೆ ಮಾಡಲಾದ ಅನುದಾನ ಎಷ್ಟು ; ಮತ್ತು ನಿಗಧಿಪಡಿಸಲಾದ ಗುರಿಯಲ್ಲಿ ಎಷ್ಟು ಮನೆಗಳು ಪೂರ್ಣವಾಗಿದೆ ; ಅಪೂರ್ಣ ಕಾಮಗಾರಿಗಳೆಷ್ಟು ; (ವಿವರ ನೀಡುವುದು)

(ಆ) ಕೊಡಗು ಜಿಲ್ಲೆಯಲ್ಲಿ (ಬಡತನ ರೇಖೆಗಿಂತ ಕೆಳಗಿರುವವರಿಗೆ) ಮನೆಗಳ ನಿರ್ಮಾಣಕ್ಕೆ ಗ್ರಾಮ ಪಂಚಾಯಿತಿಗಳಲ್ಲಿ ಗುರುತಿಸಲಾದ ಫಲಾನುಭವಿಗಳ ಸಂಖ್ಯೆ ಎಷ್ಟು ; (ಗ್ರಾಮ ಪಂಚಾಯಿತಿವಾರು, ವರ್ಗವಾರು ವಿವರ ನೀಡುವುದು)

(ಇ) ಕೆಲವು ಗ್ರಾಮ ಪಂಚಾಯಿತಿ ವ್ಯಾಪ್ತಿಗಳಲ್ಲಿ ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡದವರು ಕಡಿಮೆಯಿದ್ದು, ಸಾಮಾನ್ಯ ವರ್ಗದವರು ಹೆಚ್ಚಾಗಿರುವ ಕಡೆ ಮನೆಗಳ ನಿರ್ಮಾಣಕ್ಕೆ ಪರಿಶಿಷ್ಠ ಜಾತಿ : ಪರಿಶಿಷ್ಠ ಪಂಗಡದವರಿಗೆ ಬಿಡುಗಡೆಯಾದ ಅನುದಾನವನ್ನು ಸಾಮಾನ್ಯ ವರ್ಗದವರಿಗೆ ಮನೆ ನಿರ್ಮಿಸಲು ಬಳಸಲು ನಿಯಮದಲ್ಲಿ ಅವಕಾಶ ಇದೆಯೇ ; ಇಲ್ಲವಾದಲ್ಲಿ, ಈ ಬಗ್ಗೆ ಸರ್ಕಾರದ ಕ್ರಮವೇನು ; (ಇವರುಗಳ ಕುರಿತು ಇರುವ ಸರ್ಕಾರಿ ಆದೇಶದ ಪ್ರತಿಗಳನ್ನು ಒದಗಿಸುವುದು)

(ಈ) ರಾಜ್ಯದಲ್ಲಿರುವ ವಸತಿ ಯೋಜನೆಗಳು ಯಾವುದು ? (ವಿವರ ಮತ್ತು ಅದರ ಉದ್ದೇಶದ ಸಂಪೂರ್ಣ ಮಾಹಿತಿ ನೀಡುವುದು)

## ಹಾವೇರಿ ಜಿಲ್ಲೆಯಲ್ಲಿ ಕೆಲವು ಗ್ರಾಮಗಳಲ್ಲಿ ಸ್ವಂತ ಕಟ್ಟಡ ಇಲ್ಲದಿರುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೫೪ (೧೧೧೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯಲ್ಲಿ ಕೆಲವು ಗ್ರಾಮ ಪಂಚಾಯಿತಿಗಳಿಗೆ ಸ್ವಂತ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸ್ವಂತ ಕಟ್ಟಡ ಇಲ್ಲದ ಗ್ರಾಮ ಪಂಚಾಯಿತಿಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಗ್ರಾಮ ಪಂಚಾಯಿತಿಗಳಿಗೆ ಸ್ವಂತ ಕಟ್ಟಡ ಕಟ್ಟಿಕೊಳ್ಳಲು ಸರ್ಕಾರ ಅನುದಾನ ನೀಡಿದೆಯೇ ; ನೀಡದಿದ್ದಲ್ಲಿ, ಇದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಹಾವೇರಿ ಜಿಲ್ಲೆಯಲ್ಲಿ ಮರಳು ಸಿಗದಿರುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೫೫ (೧೧೧೯) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯಲ್ಲಿ ಮರಳು ಸಿಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಜಿಲ್ಲೆಯಲ್ಲಿ ಮರಳು ಹೇರಳವಾಗಿ ಸಿಕ್ಕರೂ ಸಾಮಾನ್ಯರಿಗೆ ಏಕೆ ಮರಳು ಸಿಗುತ್ತಿಲ್ಲ ;

(ಇ) ಮೇಲಾಗಿ ಜಿಲ್ಲೆಯ ಲೋಕೋಪಯೋಗಿ ಇಲಾಖೆಯಲ್ಲಿಯೇ ಅಧಿಕಾರಿಗಳು ತಮಗೆ ಬೇಕಾದವರಿಗೆ ಮತ್ತು ಹೊರ ಜಿಲ್ಲೆಗೆ ಮರಳು ಸಾಗಾಣಿಕೆಯಲ್ಲಿ ತೊಡಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು ; (ಮಾಹಿತಿ ನೀಡುವುದು) ಈ ಅಕ್ರಮ ಮರಳು ಸಾಗಾಣಿಕೆಯಲ್ಲಿ ಭಾಗಿಯಾಗಿರುವ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ?

## ರಾಜ್ಯದಲ್ಲಿರುವ ಒಟ್ಟು ಪ್ರಥಮ ದರ್ಜೆ ಕಾಲೇಜುಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೫೬ (೧೧೧೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರಗಳನ್ನು ಖಾಸಗಿ ಅನುದಾನಿತ ಸರ್ಕಾರಿ ಕಾಲೇಜುಗಳ ಸಂಖ್ಯೆಯನ್ನು ನೀಡುವುದು)

(ಆ) ಮೇಲಿನ ಕಾಲೇಜುಗಳಲ್ಲಿ ಸರ್ಕಾರಿ ಮತ್ತು ಅನುದಾನಿತ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ ಹಾಗೂ ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು ;

(ಇ) ಗ್ರಾಮೀಣ ಭಾಗದಲ್ಲಿರುವ ಸರ್ಕಾರಿ ಮತ್ತು ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು ; ಈ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ ಮತ್ತು ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಕಾಲೇಜುವಾರು ವಿವರ ನೀಡುವುದು)

(ಈ) ಗ್ರಾಮೀಣ ಪ್ರದೇಶದಲ್ಲಿರುವ ಕಾಲೇಜುಗಳಿಗೆ ಸರ್ಕಾರಿ ಹಾಗೂ ಅತಿಥಿ ಉಪನ್ಯಾಸಕರು ಕರ್ತವ್ಯ ನಿರ್ವಹಿಸಲು ಬರುತ್ತಿಲ್ಲವಾದ್ದರಿಂದ ಈ ಕಾಲೇಜುಗಳು ವಿದ್ಯಾರ್ಥಿಗಳಿದ್ದು ಮುಚ್ಚುವ ಸಂಭವವಿರುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ವಿದ್ಯಾರ್ಥಿಗಳಿದ್ದು, ಉಪನ್ಯಾಸಕರಿಲ್ಲದೇ ಮುಚ್ಚಿರುವ ಹಾಗೂ ಮುಚ್ಚುವ ಕಾಲೇಜುಗಳ ಸಂಖ್ಯೆ ಎಷ್ಟು ?

## ಕಳೆದ ೩ ವರ್ಷಗಳಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಕಾರ್ಯದರ್ಶಿ ಅಮಾನತ್ತುಗೊಂಡವರ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೫೭ (೧೧೧೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಅಮಾನತ್ತು, ಶಿಸ್ತುಕ್ರಮಕ್ಕೆ ಹಾಗೂ ಸೇವೆಯಿಂದ ವಜಾಗೊಂಡ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಕಾರ್ಯದರ್ಶಿ, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು, ಕಾರ್ಯನಿರ್ವಾಹಕ ಅಧಿಕಾರಿ, ಸಹಾಯಕ ನಿರ್ದೇಶಕರು, ಉಪ ಕಾರ್ಯದರ್ಶಿ, ಸಹಾಯಕ ಕಾರ್ಯದರ್ಶಿಗಳು ಯಾರ್‍ಯಾರು ; (ವರ್ಷವಾರು, ಜಿಲ್ಲಾವಾರು ವಿವರದೊಂದಿಗೆ ಕ್ರಮಕ್ಕೆ ಮುಖ್ಯ ಕಾರಣಗಳನ್ನು ಪ್ರಕರಣವಾರು ನೀಡುವುದು)

(ಆ) ಗ್ರಾಮ ಪಂಚಾಯತ್‌ಗಳಲ್ಲಿ ಸಿಬ್ಬಂದಿ ಕೊರತೆಯೂ ಸೇರಿದಂತೆ ಅಧಿಕ ಎನ್ನುವಷ್ಟು ಕಾರ್ಯದೊತ್ತಡ ಇರುವುದು ನಿಜವೇ ; ಈ ಬಗ್ಗೆ ಸಿಬ್ಬಂದಿ ಹೆಚ್ಚಳಕ್ಕಾಗಿ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ;

(ಇ) ಗ್ರಾಮ ಪಂಚಾಯಿತಿ ಮಟ್ಟದಲ್ಲಿ ವಸತಿ, MGNREGA ಪಡಿತರ ಚೀಟಿ, ಬಾಪೂಜಿ ಸೇವಾ ಕೇಂದ್ರ, ಪಂಚತಂತ್ರ, NRLM, SBM ಸೇರಿದಂತೆ ಅನೇಕ ಕಾರ್ಯಕ್ರಮಗಳ ಅನುಷ್ಠಾನದ ಜವಾಬ್ದಾರಿ ಹೊತ್ತ ಪಂಚಾಯತ್ ಅಭಿವೃದ್ದಿ ಅಧಿಕಾರಿ/ಕಾರ್ಯದರ್ಶಿಗಳಿಗೆ ಸಣ್ಣ ಗಂಭೀರವಲ್ಲದ ಕಾರಣಗಳಿಗೆ ನೋಟೀಸ್ ನೀಡುವುದು, ಇಲಾಖಾ ವಿಚಾರಣೆ, ಅಮಾನತ್ತಿನಂತಹ ಕ್ರಮ ಕೈಗೊಂಡು ಇನ್ನೂ ಹೆಚ್ಚಿನ ಒತ್ತಡಕ್ಕೆ ಗುರಿಪಡಿಸುತ್ತಿರುವುದು ನಿಜವೇ ;

(ಈ) ಕಾರ್ಯದೊತ್ತಡದಿಂದ ಖಿನ್ನತೆಗೊಳಗಾಗಿ ರಾಜೀನಾಮೆ ನೀಡಿದ ಮಾತ್ರ ಇಲಾಖೆಗೆ ಹಿಂದಿರುಗಿದ ಹಾಗೂ ಆತ್ಮಹತ್ಯೆ ಪ್ರಕರಣಗಳು ನಡೆದಿದ್ದು, ಮೇಲಾಧಿಕಾರಿಗಳು ವಸ್ತುಸ್ಥಿತಿ ಪರಿಗಣಿಸದೇ, ಗುರಿ ಸಾಧನೆಗೆ ಇನ್ನೂ ಹೆಚ್ಚಿನ ಒತ್ತಡ ಹೇರುವುದು, ನೋಟೀಸ್ ನೀಡಿ ಇಲಾಖಾ ವಿಚಾರಣೆ, ಅಮಾನತ್ತು ಸೇರಿದಂತೆ ಶಿಸ್ತು ಕ್ರಮ ಕೈಗೊಳ್ಳುತ್ತಿರುವ ಕುರಿತು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ? (ಸಂಪೂರ್ಣ ವಿವರ ನೀಡುವುದು)

## ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಉಪನ್ಯಾಸಕರ ನೇಮಕಾತಿ ಕುರಿತು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೫೮ (೧೧೯೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಹಾಗೂ ಅನುದಾನಿತ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ದೈಹಿಕ ಉಪನ್ಯಾಸಕರ ಹುದ್ದೆಗಳ ಸಂಖ್ಯೆ ಎಷ್ಟು ; ಮರಣ, ನಿವೃತ್ತಿಯಿಂದ ಖಾಲಿಯಾದ ಹುದ್ದೆಗಳನ್ನು ಪ್ರತ್ಯೇಕವಾಗಿ ನೀಡುವುದು ; (ಪ್ರತಿ ಜಿಲ್ಲಾವಾರು, ಕಾಲೇಜುವಾರು ಮಾಹಿತಿ ನೀಡುವುದು)

(ಆ) ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗುವುದೇ ; ಭರ್ತಿ ಮಾಡಿಕೊಳ್ಳಲು ಇರುವ ನಿಯಮಾವಳಿಗಳೇನು ;

(ಇ) ಇಲ್ಲದಿದ್ದಲ್ಲಿ, ಯಾವ ಕಾರಣಕ್ಕಾಗಿ ಭರ್ತಿ ಮಾಡಿಕೊಳ್ಳುವುದನ್ನು ತಡೆಹಿಡಿಯಲಾಗಿದೆ ;

(ಈ) ಈ ಸಮಸ್ಯೆಗಳನ್ನು ಸರಿಪಡಿಸಿ ಹುದ್ದೆಗಳ ಭರ್ತಿಗೆ ಸರ್ಕಾರ ಮುಂದಾಗುವುದೇ ;

(ಉ) ಖಾಲಿ ಇರುವ ಕಾಲೇಜುಗಳ ಪೈಕಿ ಹುದ್ದೆಗಳ ಭರ್ತಿಗೆ ಅರ್ಹವಿರುವ ಕಾಲೇಜುಗಳೆಷ್ಟು ? (ಪಟ್ಟಿ ನೀಡುವುದು)

## ವಿಕಲಚೇತನರಿಗೆ ರಿಯಾಯಿತಿ ದರದ ಬಸ್ ಪಾಸ್ ಕುರಿತು

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೫೯ (೧೧೧೮) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಂಗವಿಕಲರಿಗೆ ನೀಡುವ ರಿಯಾಯಿತಿ ದರದ ಬಸ್ ಪ್ರಯಾಣದ ಪಾಸ್‌ಗೆ ಇರುವ ಮಾನದಂಡವೇನು ;

(ಆ) ದೈಹಿಕವಾಗಿ ಸದೃಢವಾಗಿರುವ ವಿಶೇಷಚೇತನ ಪಾಸ್ ಹೊಂದಿರುವುದು ಸರಿಯೇ ; ಅವರ ವಿರುದ್ಧ ತೆಗೆದುಕೊಂಡ ಕ್ರಮವೇನು ;

(ಇ) ಇಲ್ಲಿಯವರೆಗೆ ಅಕ್ರಮ ವಿಶೇಷಚೇತನ ಪಾಸ್ ಜಪ್ತಿ ಮಾಡಲಾಗಿದೆಯೇ ; ಅವರ ವಿರುದ್ಧ ತೆಗೆದುಕೊಂಡ ಕ್ರಮವೇನು ;

(ಈ) ಅಧಿಕಾರಿಗಳು, ವೈದ್ಯರ ನಕಲಿ ಸಹಿ, ಸೀಲ್ ಬಳಸಿ ಅಕ್ರಮವಾಗಿ ಅಂಗವಿಕಲರಿಗೆ ನೀಡುವ ರಿಯಾಯಿತಿ ದರದ ಬಸ್ ಪಾಸ್ ಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಸರ್ಕಾರದ ಗಮನಕ್ಕೆ ಬಂದಿದ್ದಲ್ಲಿ, ಈ ನಕಲಿ ಮಾಡುವವರ ವಿರುದ್ಧ ತೆಗೆದುಕೊಂಡ ಕಠಿಣ ಕ್ರಮವೇನು ?

## ದೈಹಿಕ ಶಿಕ್ಷಕರ ನೇಮಕಾತಿ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೬೦ (೧೧೧೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೭ರಲ್ಲಿ ದೈಹಿಕ ಶಿಕ್ಷಣವನ್ನು ಕಡ್ಡಾಯ ಬೋಧನಾ ವಿಷಯವಾಗಿ ಆದೇಶ ಹೊರಡಿಸಲಾಗಿದ್ದರೂ, ಶಿಕ್ಷಣ ಇಲಾಖೆಯೇ ಅದನ್ನು ಪಾಲಿಸದಿರುವುದಕ್ಕೆ ಕಾರಣಗಳೇನು ;

(ಆ) ರಾಜ್ಯದಲ್ಲಿರುವ ಒಟ್ಟು ದೈಹಿಕ ಶಿಕ್ಷಕರ ಕೊರತೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳೆದ ಎಷ್ಟು ವರ್ಷಗಳಿಂದ ದೈಹಿಕ ಶಿಕ್ಷಕರನ್ನು ನೇಮಕ ಮಾಡಿಲ್ಲ ; ಇದಕ್ಕೆ ಕಾರಣವೇನು ;

(ಈ) ಪಠ್ಯದ ಜೊತೆಗೆ ಆಟವು ಮುಖ್ಯ ಎಂದು ಹೇಳುವ ಸರ್ಕಾರಕ್ಕೆ ಹಲವು ಶಾಲೆಗಳಿಗೆ ದೈಹಿಕ ಶಿಕ್ಷಕರು ಇಲ್ಲದಿರುವುದು ಗಮನಕ್ಕೆ ಬಂದಿದೆಯೇ ;

(ಉ) ಗಮನಕ್ಕೆ ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮವೇನು ?

## ಶಾಲೆಯಿಂದ ಹೊರಗುಳಿದ ಮಕ್ಕಳ ಕುರಿತು

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೬೧ (೧೧೧೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಪುನಃ ಶಾಲೆಗೆ ಸೇರಿಸುವ "ಶಾಲೆ ಕಡೆ ನಮ್ಮ ನಡೆ" ಅಭಿಯಾನದಲ್ಲಿ ಒಟ್ಟು ಎಷ್ಟು ಮಕ್ಕಳನ್ನು ಶಾಲೆಗೆ ತರಲಾಗಿದೆ ;

(ಆ) ಈ ಅಭಿಯಾನದಲ್ಲಿ ತಿಳಿದಂತೆ ಇನ್ನು ಎಷ್ಟು ಮಕ್ಕಳನ್ನು ಶಾಲೆಯಿಂದ ಹೊರಗಿದ್ದಾರೆ ; (ಜಿಲ್ಲಾವಾರು ಹೆಣ್ಣು ಮತ್ತು ಗಂಡು ಮಕ್ಕಳ ವಿವರ ನೀಡುವುದು)

(ಇ) ಶಾಲೆಯಿಂದ ಹೊರಗುಳಿದ ಮಕ್ಕಳು ಭಿಕ್ಷಾಟನೆ, ಬಾಲ ಕಾರ್ಮಿಕ, ಬಾಲಾಪರಾಧಿ, ದೌರ್ಜನ್ಯ ಇತ್ಯಾದಿ ಸಮಸ್ಯೆಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮವೇನು ?

## ನಿವೃತ್ತಿಯಾಗುವ ಶಿಕ್ಷಕರ ಸೇವೆಯನ್ನು ವರ್ಷದ ಕೊನೆವರೆಗೆ ವಿಸ್ತರಿಸುವ ಬಗ್ಗೆ

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ ) –**

೧೦೬೨ (೧೨೪೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಖಾಸಗಿ ಅನುದಾನಿತ ಪ್ರೌಢ ಶಾಲೆಗಳಲ್ಲಿ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಶೈಕ್ಷಣಿಕ ವರ್ಷದ ಮಧ್ಯದಲ್ಲಿ ನಿವೃತ್ತಿಯಾಗುವ ವಿಷಯ. ಶಿಕ್ಷಕರ ಸೇವಾ ಅವಧಿಯನ್ನು ವರ್ಷದ ಅಂತ್ಯದವರೆಗೆ ವಿಸ್ತರಿಸುವ ಯೋಜನೆ ಇಲಾಖೆಯ ಮುಂದೆ ಇದೆಯೇ ;

(ಆ) ಯೋಜನೆ ಇದ್ದಲ್ಲಿ, ಮಕ್ಕಳ ಹಿತದೃಷ್ಟಿಯಿಂದ ಇದೇ ಶೈಕ್ಷಣಿಕ ವರ್ಷದಿಂದ ಜಾರಿಗೆ ತರಲು ಸಾಧ್ಯವೇ ?

## ಗದಗ ಜಿಲ್ಲೆಯಲ್ಲಿ ಸೃಷ್ಠಿಯಾಗಿರುವ ಮರಳಿನ ಸಮಸ್ಯೆ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ ) –**

೧೦೬೩ (೧೨೪೭) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗದಗ ಜಿಲ್ಲೆಯಲ್ಲಿ ಕಳೆದ ೨–೩ ತಿಂಗಳಿನಿಂದ ಮರಳಿನ ಕೊರತೆಯಾಗಿದ್ದು ಮತ್ತು ಕಟ್ಟಡ ಕಾಮಗಾರಿಗಳು ಸಂಪೂರ್ಣ ಸ್ಥಗಿತಗೊಂಡಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕೊಪ್ಪಳ ಜಿಲ್ಲೆಯ ಮರಳನ್ನು ಗದಗ ಜಿಲ್ಲೆಗೆ ಸಾಗಾಣಿಕೆ ಮಾಡುವಲ್ಲಿ ನಿರ್ಬಂಧ ಮಾಡಲಾಗಿದೆಯೇ ;

(ಇ) ಗದಗ ಜಿಲ್ಲೆಯ ಮುಂಡರಗಿ ತಾಲ್ಲೂಕಿನ ತುಂಗಭದ್ರಾ ನದಿಯ ಮರಳು ನಿರಂತರವಾಗಿ ಹುಬ್ಬಳ್ಳಿಗೆ ಸಾಗಾಣಿಕೆ ಆಗುತ್ತಿದ್ದು ಸುಮಾರು ೧ ಲಾರಿಗೆ

ರೂ ೨೫ ರಿಂದ ೩೦ ಸಾವಿರಕ್ಕೆ ಮಾರಾಟವಾಗುತ್ತಿರುವ ಸಂಗತಿ ಜಿಲ್ಲಾಧಿಕಾರಿಗಳಿಗೆ, ಪೊಲೀಸ್ ಇಲಾಖೆಗೆ ಹಾಗೂ ಭೂ ವಿಜ್ಞಾನ ಮತ್ತು ಗಣಿ ಇಲಾಖೆಯ ಗಮನಕ್ಕೆ ಬಂದಿದೆಯೇ ;

(ಈ) ಕಳೆದ ೬ ತಿಂಗಳಿನಿಂದ ಕೊಪ್ಪಳದಿಂದ ಗದಗ ಜಿಲ್ಲೆಗೆ ಮರಳು ಸಾಗಾಣಿಕೆ ಆಗುತ್ತಿರುವ ಎಷ್ಟು ಲಾರಿ ಮರಳಿನ ಮಾಲೀಕರ ಮೇಲೆ ಕೇಸ್ ದಾಖಲಿಸಲಾಗಿದೆ ; (ವಿವರ ನೀಡುವುದು)

(ಉ) ನೈಸರ್ಗಿಕ ಮರಳಿನ ಬದಲಾಗಿ ''ಎಮ್'' ಸ್ಯಾಂಡನ್ನು ಉಪಯೋಗಿಸಲು ಸಾರ್ವಜನಿಕರಿಗೆ ತಿಳುವಳಿಕೆ ನೀಡುವಲ್ಲಿ ಗಣಿ ಇಲಾಖೆಯವರು ಯಾವ ಯಾವ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ ? (ವಿವರ ನೀಡುವುದು)

## ಪದವಿ ಪೂರ್ವ ಮಹಾವಿದ್ಯಾಲಯಗಳ ವಿದ್ಯಾರ್ಥಿಗಳಿಂದ ಪಡೆಯುತ್ತಿರುವ ಬೋಧನಾ ಶುಲ್ಕದ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ ) –**

೧೦೬೪ (೧೨೪೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಂದ ಪಡೆಯುತ್ತಿರುವ ಬೋಧನಾ ಶುಲ್ಕದ (ರೂ. ೧೦೦೮)ರಲ್ಲಿ ಅರ್ಧದಷ್ಟು ಹಣವನ್ನು ಖಾಸಗಿ ಆಡಳಿತ ಮಂಡಳಿಯವರು ಉಳಿಸಿಕೊಳ್ಳಲು ಸರ್ಕಾರದ ಆದೇಶವಿದೆಯೇ ; ಈ ಮಾರ್ಪಾಡು ಮಾಡಲು ರಾಜ್ಯದ ಖಾಸಗಿ ಆಡಳಿತ ಮಂಡಳಿಯವರು ಹಾಗೂ ಪದವಿ ಪೂರ್ವ ನೌಕರರ ಸಂಘಟನೆಯವರು ಬೇಡಿಕೆ ಸಲ್ಲಿಸಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಆ) ಸದರಿ ಆದೇಶವನ್ನು ಪದವಿ ಪೂರ್ವ ಹಂತದ ಕಾಲೇಜುಗಳಲ್ಲಿ ಜಾರಿಗೆ ತರುವಲ್ಲಿ ಸರ್ಕಾರಕ್ಕೆ ಇರುವ ತೊಂದರೆ ಏನು ;

(ಇ) ಇದಕ್ಕೆ ಸಂಬಂಧಿಸಿದಂತೆ ಸಂಪೂರ್ಣವಾಗಿ ಬೋಧನಾ ಶುಲ್ಕವನ್ನು ಸರ್ಕಾರಕ್ಕೆ ಪಾವತಿ ಮಾಡಬೇಕೆಂಬ ಸರ್ಕಾರದ ಆದೇಶ ಸಂಖ್ಯೆ ED 17 TPU 2007, ದಿನಾಂಕ: ೦೮–೦೬–೨೦೦೭ರ ಆದೇಶವನ್ನು ಯಾವಾಗ ಮಾರ್ಪಾಡು ಮಾಡಲಾಗುವುದು ?

## ಸಿ ಹಾಗೂ ಡಿ ದರ್ಜೆಯ ನೌಕರರನ್ನು ಅನುದಾನಕ್ಕೆ ಒಳಪಡಿಸುವ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ ) –**

೧೦೬೫ (೧೨೪೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಖಾಸಗಿ ಅನುದಾನಿತ ಪ್ರೌಢ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ಕನಿಷ್ಠ ಒಂದು ಸಿ ಮತ್ತು ಡಿ ಬೋಧಕೇತರ ನೇಮಕಾತಿ ಮಾಡಬೇಕೆಂಬ ಸರ್ಕಾರದ ಆದೇಶ ಸಂಖ್ಯೆ ED 29 SEP 2011, ಬೆಂಗಳೂರು, ದಿನಾಂಕ: ೨೦.೧.೨೦೧೪ ಜಾರಿಯಲ್ಲಿ ಇದೆಯೇ ; ಅಥವಾ ರದ್ದುಪಡಿಸಲಾಗಿದೆಯೇ ; (ಈ ಕುರಿತು ಮಾಹಿತಿ ನೀಡುವುದು)

(ಆ) ಕಳೆದ ಸುಮಾರು ೬ ಮತ್ತು ೮ ತಿಂಗಳುಗಳಿಂದ ಖಾಸಗಿ ಅನುದಾನಿತ ಪ್ರೌಢ ಪದವಿಪೂರ್ವ ಕಾಲೇಜುಗಳಲ್ಲಿ ಒಂದು ಬೋಧಕೇತರ ಸಿ ಮತ್ತು ಡಿ ಹುದ್ದೆಗಳ ನೇಮಕಾತಿಗಳನ್ನು ಅನುದಾನಕ್ಕೆ ಒಳಪಡಿಸಿ ತಿರಸ್ಕರಿಸುತ್ತಿರುವುದು ನಿಜವೇ ?

## ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಿಕ್ಷಕರುಗಳ ವರ್ಗಾವಣೆ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೧೦೬೬ (೧೧೮೭+೧೧೮೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸಕ್ತ ವರ್ಷ ಶಿಕ್ಷಣ ಇಲಾಖೆಯಲ್ಲಿ ನಡೆದ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಿಕ್ಷಕರ ವರ್ಗಾವಣೆ ಪ್ರಕ್ರಿಯೆಯಲ್ಲಿ ವರ್ಗಾವಣೆಗೊಂಡ ಶಿಕ್ಷಕರ ಸಂಖ್ಯೆ ಎಷ್ಟು ; ಇದರಲ್ಲಿ ವರ್ಗಾವಣೆ ಆದೇಶ ಪಡೆದು ಕೂಡ ಇನ್ನೂ ರಿಲೀವ್ ಆಗದಿರುವ ಶಿಕ್ಷಕರುಗಳ ಸಂಖ್ಯೆ ಎಷ್ಟು ; ಇದಕ್ಕೆ ಕಾರಣ ಏನು ; (ಶಿಕ್ಷಕರ ಪಟ್ಟಿ ನೀಡುವುದು)

(ಆ) ಮಾರ್ಪಾಡು ಆದೇಶ ಮಾಡಿ ವರ್ಗಾವಣೆ ಮಾಡಿದ ಶಿಕ್ಷಕರುಗಳ ಸಂಖ್ಯೆ ಎಷ್ಟು ; ಯಾವ ಯಾವ ಕಾರಣಗಳಿಂದಾಗಿ ಮಾರ್ಪಾಟು ಮಾಡಲಾಗಿದೆ ; (ಪಟ್ಟಿ ನೀಡುವುದು)

(ಇ) ರಿಲೀವ್ ಮಾಡಲು ಹಣ ಪಡೆದುಕೊಳ್ಳುತ್ತಿದ್ದಾರೆ ಎಂಬ ಆರೋಪದ ಬಗ್ಗೆ ದೂರುಗಳು ಬಂದಿವೆಯೇ ;

(ಈ) ಕೌನ್ಸಿಲಿಂಗ್‌ನಲ್ಲಿ ವರ್ಗಾವಣೆ ಆದೇಶ ನೀಡುವ ಸರ್ಕಾರ ಏಕಗವಾಕ್ಷಿ ಬಿಡುಗಡೆಗೆ ಚಾಲನ ಆದೇಶ ನೀಡಿಕೆಗೆ ಯಾಕೆ ಚಿಂತಿಸಿಲ್ಲ ;

(ಉ) ಸರ್ಕಾರ ವರ್ಗಾವಣೆ ಆದೇಶ ನೀಡಿದರೂ ಎಸ್.ಡಿ.ಎಂ.ಸಿ. ಮುಖ್ಯ ಗುರುಗಳು, ಗ್ರಾಮ ಪಂಚಾಯತ್ ಸದಸ್ಯರು, ಶಿಕ್ಷಾಧಿಕಾರಿಗಳು, ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯತ್ ಸದಸ್ಯರು, ಜಿಲ್ಲಾ ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಇವರುಗಳಿಗೆ ಬಿಡುಗಡೆ ಮಾಡಬೇಡಿ ಎಂದು ಹೇಳಿರುವ ಕಾರಣಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ೫೦ ಸಾವಿರ ರೂಪಾಯಿಗಳವರೆಗೆ ಲಂಚ ನೀಡಿದವರಿಗೆ ಮಾತ್ರ ವರ್ಗಾವಣೆ/ರಿಲೀವ್ ಪತ್ರ ನೀಡುವ ಪರಿಸ್ಥಿತಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ತಡೆಗಟ್ಟಲು ಸರ್ಕಾರದ ಕ್ರಮ ಏನು?

## ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಿಕ್ಷಕರ ವರ್ಗಾವಣೆ ತಿದ್ದುಪಡಿ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೧೦೬೭ (೧೧೮೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಿಕ್ಷಕರ ವರ್ಗಾವಣೆ ಪ್ರಕ್ರಿಯೆಯ ವರ್ಗಾವಣೆ ನಿಯಮದಲ್ಲಿ ಕಳೆದ ೦೩ ವರ್ಷಗಳಲ್ಲಿ ಎಷ್ಟು ಬಾರಿ ತಿದ್ದುಪಡಿ ಮಾಡಲಾಗಿದೆ ; ಅಂಶಗಳ ಕುರಿತು ವಿವರ ನೀಡುವುದು ; ಯಾವ ಕಾರಣಕ್ಕಾಗಿ ತಿದ್ದುಪಡಿ ಮಾಡಲಾಗಿದೆ ;

(ಆ) ೨೦೧೫–೧೬, ೨೦೧೬–೧೭ರಲ್ಲಿನ ವರ್ಗಾವಣೆ ಪ್ರಕ್ರಿಯೆಯಲ್ಲಿ ತಿದ್ದುಪಡಿ ಮಾಡಿರುವ ಅಂಶಗಳ ಹಾಗೂ ಅಳವಡಿಸಿಕೊಂಡಿರುವ ತಿದ್ದುಪಡಿ ಹಾಗೂ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ವಲಯದ ಹೊರಗಡೆ ಶೇ.೦೩ ಪ್ರತಿಶತ ವರ್ಗಾವಣೆ ಮಾಡಿರುವ ತಿದ್ದುಪಡಿ ಕುರಿತು ಇರುವ ಗೊಂದಲಗಳೇನು ; (ವಿವರ ನೀಡುವುದು)

(ಈ) ಈ ೦೩% ಪ್ರತಿಶತ ವರ್ಗಾವಣೆ ನಿಯಮವನ್ನು ೨೦೧೫–೧೬ ಹಾಗೂ ೨೦೧೬–೧೭ರಲ್ಲಿ ಹೇಗೆ ಅರ್ಥೈಸಲಾಗಿದೆ ಎಂಬುದರ ವಿವರ ನೀಡುವುದು ?

## ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣಕ್ಕೆ ಸಂಬಂಧಿಸಿದಂತೆ ಪಠ್ಯ ಪುಸ್ತಕ ರಚನೆ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

**ಶ್ರೀ ಭಾನುಪ್ರಕಾಶ (ನಾಮನಿರ್ದೇಶನ ಹೊಂದಿದವರು) –**

೧೦೬೮ (೧೧೮೮+೧೯೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣಕ್ಕೆ ಸಂಬಂಧಿಸಿದಂತೆ ಪಠ್ಯ ಪುಸ್ತಕ ಪರಿಷ್ಕರಣೆ ಸಮಿತಿಯನ್ನು ರಚಿಸಲಾಗಿದೆಯೇ ; ಯಾವಾಗ ರಚಿಸಲಾಯಿತು ;

(ಆ) ಈ ಸಮಿತಿಯಲ್ಲಿರುವವರ ಹೆಸರು ಹಾಗೂ ಅವರ ಶೈಕ್ಷಣಿಕ ಹಿನ್ನೆಲೆ ವಿವರಗಳನ್ನು ಒದಗಿಸುವುದು ;

(ಇ) ಎಷ್ಟು ಅವಧಿಗೆ ಇವರ ನೇಮಕಾತಿ ಮಾಡಲಾಗಿದೆ ; ಹಾಗೂ ಈ ಸಮಿತಿಯ ಅವಧಿ ವಿಸ್ತರಿಸಲಾಗಿದ್ದಲ್ಲಿ, ಸಂಪೂರ್ಣ ವಿವರ ನೀಡುವುದು ;

(ಈ) ಈ ಸಮಿತಿಯಿಂದ ಇಲ್ಲಿಯವರೆಗೂ ಆಗಿರುವ ಕಾರ್ಯದ ಪ್ರಗತಿ ಏನು ; (ವಿವರ ನೀಡುವುದು)

(ಉ) ಈ ಸಮಿತಿಯಿಂದ ಸರ್ಕಾರಕ್ಕೆ ಸಲ್ಲಿಸಲಾಗಿರುವ ವರದಿಯಲ್ಲಿನ ಶಿಫಾರಸ್ಸುಗಳೇನು ; ಮಧ್ಯಂತರ ತೀರ್ಪುಗಳೇನು ; (ವರದಿಯ ಪ್ರತಿಯೊಂದಿಗೆ ವಿವರ ನೀಡುವುದು)

(ಊ) ಸದ್ಯ ರಾಜ್ಯದಲ್ಲಿರುವ ಪಠ್ಯ ಪುಸ್ತಕವನ್ನು ಎನ್.ಸಿ.ಎಫ್ ೨೦೦೫ರ ಅನುಗುಣವಾಗಿ ಮಾಡಲಾಗಿದೆಯೇ ; ಕೆ.ಸಿ.ಎಫ್ ಅನ್ನೂ ರಚಿಸಲಾಗಿದೆಯೇ ; ಅದಕ್ಕನುಗುಣವಾಗಿ ಪಠ್ಯಕ್ರಮವನ್ನು ತಯಾರಿಸಲಾಗಿದೆಯೇ ?

## ಸಾಬೂನು ಮಾರ್ಜಕ ನಿಯಮಿತದ ವಾರ್ಷಿಕ ವಹಿವಾಟು ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೧೦೬೯ (೧೧೮೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಸಾಬೂನು ಮಾರ್ಜಕ ನಿಯಮಿತದ ವಾರ್ಷಿಕ ವಹಿವಾಟು ಎಷ್ಟು ; ಆಗುವ ಲಾಭ ಎಷ್ಟು ; (ಕಳೆದ ೩ ವರ್ಷದ ಮಾಹಿತಿ ನೀಡುವುದು)

(ಆ) ಕಳೆದ ೦೩ ವರ್ಷಗಳಲ್ಲಿ ಈ ಕಾರ್ಖಾನೆಯಲ್ಲಿ ಖರೀದಿಸಿದ ಪ್ರತಿಯೊಂದು ಖರೀದಿಯ ವಿವರ, ಮೊತ್ತ, ಸಾಮಗ್ರಿಗಳು/ಮೆಷಿನರಿಗಳು ಹಾಗೂ ಖರೀದಿಸಿದ ಸಂಸ್ಥೆಗಳು ಯಾವುವು ; (ವಿವರ ನೀಡುವುದು)

(ಇ) ಇವುಗಳಲ್ಲಿ ಹಗರಣ, ಅವ್ಯವಹಾರದ ಆರೋಪಗಳು ಕೇಳಿ ಬಂದಿರುವುದರ ಬಗ್ಗೆ ವಿವರ ನೀಡುವುದು, ತನಿಖೆಗಳ ಸಂಪೂರ್ಣ ವಿವರ ನೀಡುವುದು ;

(ಈ) ಕೋರ್ಟ್ ಮೆಟ್ಟಿಲೇರಿ ಹಣ ಪಾವತಿಸಿರುವ ಪ್ರತಿಯೊಂದು ಖರೀದಿಯ ವಿವರಗಳನ್ನು ನೀಡುವುದು ;

(ಉ) ಈ ಅವ್ಯವಹಾರ ಹಾಗೂ ಹಗರಣಗಳ ಮೇಲೆ ಕೈಗೊಂಡ ಕ್ರಮದ ಪ್ರತಿ ಹಂತದ ವಿವರ ನೀಡುವುದು ?

## ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್‌ಟಾಪ್ ವಿತರಣೆ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೭೦ (೧೧೩೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ಉನ್ನತ ಶಿಕ್ಷಣ ಇಲಾಖೆಯಿಂದ ಉಚಿತವಾಗಿ ಲ್ಯಾಪ್‌ಟ್ಯಾಪ್ ವಿತರಿಸುವ ಕಾರ್ಯಕ್ರಮ ತಾಂತ್ರಿಕ ಇಲಾಖೆಯಲ್ಲಿ ಜಾರಿಯಲ್ಲಿದೆಯೇ ;

(ಆ) ಈ ಯೋಜನೆಗೆ ನಿಗಧಿಪಡಿಸಿರುವ ಅನುದಾನ ಎಷ್ಟು ; ಖರ್ಚು ಮಾಡಲಾದ ಅನುದಾನ ಎಷ್ಟು ;

(ಇ) ಹಾಗಿದ್ದಲ್ಲಿ, ಯಾವ ಯಾವ ವಿದ್ಯಾರ್ಥಿಗಳಿಗೆ ಎಲ್ಲೆಲ್ಲಿ ನೀಡಲಾಗಿದೆ ? (ಜಿಲ್ಲಾವಾರು ಹಾಗೂ ವಿದ್ಯಾರ್ಥಿವಾರು ವಿವರ ನೀಡುವುದು)

## ಗ್ರಾಮ ಪಂಚಾಯಿತಿ ಹಾಗೂ ಅವುಗಳ ಕಟ್ಟಡದ ಕುರಿತು

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೭೧ (೧೨೦೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಿಂದ ಹೊಸದಾಗಿ ರಚನೆಯಾದ ಗ್ರಾಮ ಪಂಚಾಯಿತಿಗಳೆಷ್ಟು ಹಾಗೂ ಹಾಲಿ ಇರುವ ಗ್ರಾಮ ಪಂಚಾಯಿತಿಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ತಾಲ್ಲೂಕುಗಳಲ್ಲಿ ಎಲ್ಲಾ ಗ್ರಾಮ ಪಂಚಾಯಿತಿಗಳಿಗೆ ಸ್ವಂತ ಕಟ್ಟಡಗಳ ವ್ಯವಸ್ಥೆ ಇದೆಯೇ ; ಇಲ್ಲವಾದಲ್ಲಿ, ಬಾಡಿಗೆ ಕಟ್ಟಡಗಳಲ್ಲಿ ಯಾವ ಯಾವ ಗ್ರಾಮ ಪಂಚಾಯಿತಿಗಳು ಕಾರ್ಯನಿರ್ವಹಿಸುತ್ತವೆ ; ಸ್ವಂತ ಕಟ್ಟಡ ನಿರ್ಮಾಣಕ್ಕಾಗಿ ಸೂಕ್ತ ಸ್ಥಳ ನಿಗಧಿಪಡಿಸಲಾಗಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ೨೦೧೬–೧೭ನೇ ಸಾಲಿನಲ್ಲಿ ಇಂತಹ ಗ್ರಾಮ ಪಂಚಾಯಿತಿಗಳ ಸ್ವಂತ ಕಟ್ಟಡ ನಿರ್ಮಾಣಕ್ಕಾಗಿ ಎಷ್ಟು ಅನುದಾನ ಮೀಸಲಿಟ್ಟಿದೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಬೀದರ್ ಹಾಗೂ ಕಲಬುರಗಿ ಜಿಲ್ಲೆಯಲ್ಲಿ ಗಡಿಭಾಗದ ಕನ್ನಡ ಶಾಲೆಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೭೨ (೧೨೦೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಹಾಗೂ ಕಲಬುರಗಿ ಗಡಿ ಭಾಗದಲ್ಲಿ ಬರುವ ಕನ್ನಡ ಶಾಲೆಗಳ ಅಭಿವೃದ್ಧಿಗಾಗಿ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಆ) ಗಡಿ ಭಾಗದ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ರಸ್ತೆ ಹಾಗೂ ಸಾರಿಗೆ ವ್ಯವಸ್ಥೆ ಇಲ್ಲದೇ ಇರುವುದರಿಂದ ವಿದ್ಯಾರ್ಥಿಗಳಿಗೆ ಹಾಗೂ ಶಿಕ್ಷಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಉದ್ಯೋಗ ಖಾತ್ರಿ ಯೋಜನೆ ಅಡಿ ಅನುದಾನ ಬಿಡುಗಡೆ ಮಾಡುವ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೭೩ (೧೯೯೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ವರ್ಷ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಬೀದರ್ ಜಿಲ್ಲೆಗೆ ಮಂಜೂರಾದ ಮತ್ತು ಬಿಡುಗಡೆಯಾದ ಹಣದ ಮೊತ್ತವೆಷ್ಟು ; (ತಾಲ್ಲೂಕುವಾರು ಮತ್ತು ಪಂಚಾಯತ್‌ವಾರು ವಿವರ ನೀಡುವುದು)

(ಆ) ಈ ಯೋಜನೆಯಡಿ ಬಿಡುಗಡೆಯಾದ ಹಣವನ್ನು ಸಮರ್ಪಕವಾಗಿ ಖರ್ಚು ಮಾಡಲಾಗಿದೆಯೇ ; (ವಿವರ ನೀಡುವುದು)

(ಇ) ಹಣ ಮಂಜೂರಾಗಿ ಬಿಡುಗಡೆಯಾಗದಿರಲು ಕಾರಣಗಳೇನು ? (ವಿವರ ನೀಡುವುದು)

## ಗ್ರಾಮ ಪಂಚಾಯತ್ ಕಾರ್ಯದರ್ಶಿಗಳ ಹುದ್ದೆಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೭೪ (೧೨೦೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿರುವ ಗ್ರಾಮ ಪಂಚಾಯಿತಿಗಳಲ್ಲಿ ಹೆಚ್ಚಿನ ಪ್ರಮಾಣದ ಕಾರ್ಯದರ್ಶಿಗಳ ಹುದ್ದೆ ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಜಿಲ್ಲೆಯಲ್ಲಿ ಗ್ರಾಮ ಪಂಚಾಯಿತಿಗಳಿಗೆ ಮಂಜೂರಾದ ಹುದ್ದೆಗಳೆಷ್ಟು ; ಖಾಲಿ ಇರುವು ಹುದ್ದೆಗಳು ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಕಾರ್ಯದರ್ಶಿಗಳ ಹುದ್ದೆ ಖಾಲಿ ಉಳಿದಿರುವುದರಿಂದ ಪಂಚಾಯತ್ ಕೆಲಸ ಕಾರ್ಯಗಳಿಗೆ ಅಡ್ಡಿ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಖಾಲಿ ಇರುವ ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಶುದ್ಧ ಕುಡಿಯುವ ನೀರಿನ ಘಟಕ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೭೫ (೧೨೦೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಯೋಜನೆಯಲ್ಲಿ ಎಷ್ಟು ಘಟಕಗಳನ್ನು ಮಂಜೂರು ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇದುವರೆಗೂ ಎಷ್ಟು ಘಟಕಗಳನ್ನು ಸ್ಥಾಪಿಸಲಾಗಿದೆ ; ಈ ಘಟಕಗಳಿಗೆ ಬಿಡುಗಡೆಯಾದ ಹಣ ಎಷ್ಟು ;

(ಇ) ಇನ್ನುಳಿದ ಘಟಕಗಳ ಸ್ಥಾಪನೆಗೆ ಹಣ ಬಿಡುಗಡೆ ಮಾಡಲಾಗಿದೆಯೇ ; ಈ ಘಟಕಗಳನ್ನು ಸ್ಥಾಪಿಸಲು ಬೇಕಾಗುವ ಕಾಲಾವಧಿ ಏನು ?

## ಕಲಬುರಗಿ–ಬೀದರ್ ರೈಲು ಮಾರ್ಗವು ರಾಜ್ಯ ಸರ್ಕಾರದ ಸಹಭಾಗಿತ್ವದ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೭೬ (೧೦೭೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ–ಬೀದರ್ ರೈಲು ಮಾರ್ಗ ರಾಜ್ಯ ಸರ್ಕಾರದ ಸಹಭಾಗಿತ್ವದಲ್ಲಿ ಕೈಗೆತ್ತಿಕೊಳ್ಳಲಾಗಿದೆಯೇ ;

(ಆ) ಈ ಯೋಜನೆಯ ಅಂದಾಜು ವೆಚ್ಚ ಎಷ್ಟು ; ಇದರಲ್ಲಿ ಕರ್ನಾಟಕದ ಪಾಲು ಹಾಗೂ ರೈಲ್ವೇ ಪಾಲು ಎಷ್ಟು ;

(ಇ) ಇದುವರೆಗೂ ಖರ್ಚಾಗಿರುವ ಹಣ ಎಷ್ಟು ;

(ಈ) ರಾಜ್ಯ ಸರ್ಕಾರದಿಂದ ಬಿಡುಗಡೆಯಾಗಬೇಕಾಗಿರುವ ಅನುದಾನ ಎಷ್ಟು ; ರಾಜ್ಯ ಸರ್ಕಾರದಿಂದ ಹಣ ಬಾಕಿ ಉಳಿದಿದ್ದಲ್ಲಿ, ಅದನ್ನು ಬಿಡುಗಡೆ ಮಾಡುವುದು ಯಾವಾಗ ?

## ಕಲಬುರಗಿ ಕಂದಾಯ ವಿಭಾಗದಲ್ಲಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲೆಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೭೭ (೧೦೭೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಕಂದಾಯ ವಿಭಾಗದಲ್ಲಿರುವ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಶಾಲೆಗಳ ಪೈಕಿ ಎಷ್ಟು ಶಾಲೆಗಳು ಸ್ವಂತ ಕಟ್ಟಡ ಹೊಂದಿವೆ ; ಎಷ್ಟು ಕಟ್ಟಡಗಳು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿವೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಆ ಪೈಕಿ ದುಸ್ಥಿತಿಯಲ್ಲಿರುವ ಕಟ್ಟಡಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಕಲಬುರಗಿ ಕಂದಾಯ ವಿಭಾಗದ ಜಿಲ್ಲೆಗಳಿಗೆ ಮಂಜೂರಾಗಿರುವ ಶಿಕ್ಷಕರ ಹುದ್ದೆಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೭೮ (೧೦೭೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಕಂದಾಯ ವಿಭಾಗದ ವ್ಯಾಪ್ತಿಯಲ್ಲಿ ಬರುವ ಆರು ಜಿಲ್ಲೆಗಳಿಗೆ ಮಂಜೂರಾಗಿರುವ ಶಿಕ್ಷಕರ ಹುದ್ದೆಗಳೆಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸದ್ಯ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಖಾಲಿ ಉಳಿದಿರುವ ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಮಾಹಿತಿ ನೀಡುವುದು)

(ಈ) ಖಾಲಿ ಹುದ್ದೆಗಳ ಭರ್ತಿ ಪ್ರಕ್ರಿಯೆ ಪೂರ್ಣಗೊಳಿಸುವವರೆಗೂ, ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಲು ಸರ್ಕಾರ ಮುಂದಾಗಿದೆಯೇ ; ಈ ವಿಭಾಗಕ್ಕೆ ಎಷ್ಟು ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಲು ಅನುಮತಿ ನೀಡಲಾಗಿದೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಗುಂಡ್ಲುಪೇಟೆ ತಾಲ್ಲೂಕು ಚೆಂಡುಹೂವು ಸಂಸ್ಕರಣ ಘಟಕ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೭೯ (೧೦೮೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರ ಜಿಲ್ಲೆ, ಗುಂಡ್ಲುಪೇಟೆ ತಾಲ್ಲೂಕು, ಕಗ್ಗಳದಹುಂಡಿ–ತ್ರಿಯಂಬಕಪುರದ ಬಳಿ ಚೀನಾ ಮೂಲದ ಕಂಪನಿಯು ಚೆಂಡುಹೂವಿನ ಸಂಸ್ಕರಣಾ ಘಟಕವನ್ನು ಸ್ಥಾಪಿಸುತ್ತಿದೆಯೇ ; ಈ ಘಟಕ ಸ್ಥಾಪನೆಗೆ ಅಗತ್ಯವಾದ ಕೈಗಾರಿಕಾ ಇಲಾಖೆ, ಪರಿಸರ ಇಲಾಖೆ, ಕಾರ್ಮಿಕ ಇಲಾಖೆ, ಅರಣ್ಯ ಇಲಾಖೆ ಮೊದಲಾದ ಇಲಾಖೆಗಳ ಅನುಮತಿಯನ್ನು ಪಡೆದುಕೊಳ್ಳಲಾಗಿದೆಯೇ ;

(ಆ) ಈ ಕಾರ್ಖಾನೆ ಸ್ಥಾಪನೆಯಿಂದ ಪರಿಸರದ ಮೇಲೆ ಹಾನಿ ಉಂಟಾಗುತ್ತಿದೆಂದು ಸ್ಥಳೀಯ ರೈತರು ವಿರೋಧಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಪ್ರತಿಭಟನಾಕಾರರನ್ನು ಬಂಧಿಸಲಾಗಿತ್ತೇ ; ಅವರ ಮೇಲೆ ಮೊಕದ್ದಮೆಗಳನ್ನು ಹೂಡಲಾಗಿದೆಯೇ ; ಸ್ಥಳೀಯ ಜನತೆ ಮತ್ತು ರೈತರ ಜೊತೆ ಚರ್ಚೆ ನಡೆಸಿ, ಅವರ ಅಭಿಪ್ರಾಯ ಸಂಗ್ರಹಣೆ ಮಾಡಿ, ಅವರಿಗೆ ಕನ್‌ವಿನ್ಸ್ ಮಾಡಿ, ಪರಿಸರಕ್ಕೆ ಹಾನಿ ಆಗದಂತೆ ಘಟಕವನ್ನು ಸ್ಥಾಪಿಸುವ ವಿಚಾರದಲ್ಲಿ ಸೂಕ್ತ ಕ್ರಮ ಜರುಗಿಸಲಾಗುವುದೇ ?

## ಅಲ್ಪಸಂಖ್ಯಾತರ ಕಲ್ಯಾಣ ಯೋಜನೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೮೦ (೧೦೮೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮತ್ತು ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಮುಸ್ಲಿಂ ಮತ್ತು ಇತರ ಅಲ್ಪಸಂಖ್ಯಾತ ಜನಾಂಗದ ಅಭಿವೃದ್ಧಿಗಾಗಿ ಸರ್ಕಾರ ರೂಪಿಸಿ ಜಾರಿಗೊಳಿಸಿರುವ ವೈಯಕ್ತಿಕ ಮತ್ತು ಸಾಮಾಜಿಕ ಅಭಿವೃದ್ಧಿ ಯೋಜನೆಗಳು ಯಾವುವು ;

(ಆ) ಪ್ರತಿಯೊಂದು ಯೋಜನೆಗೆ ೨೦೧೪–೧೫ ರಿಂದ ೨೦೧೫–೧೬ ಮತ್ತು ೨೦೧೬–೧೭ನೇ ಸಾಲಿನಲ್ಲಿ ಆಯವ್ಯಯದಲ್ಲಿ ಒದಗಿಸಿದ ಅನುದಾನ, ಇಲಾಖೆ ಮತ್ತು ನಿಗಮದಿಂದ ಮಂಜೂರು ಮಾಡಿ ಬಿಡುಗಡೆ ಮಾಡಿದ ಅನುದಾನ ಮತ್ತು ಖರ್ಚಾಗಿರುವ ಅನುದಾನದ ವಿವರ ಒದಗಿಸುವುದು ;

(ಇ) ಸಾಮೂಹಿಕವಾಗಿ ಅಲ್ಪಸಂಖ್ಯಾತ ವರ್ಗದ ಸಾಮಾಜಿಕ ಅಭಿವೃದ್ಧಿ ಯೋಜನೆಯಲ್ಲಿ ಪೂರ್ಣಗೊಂಡಿರುವ ಮತ್ತು ಚಾಲ್ತಿಯಲ್ಲಿರುವ ಯೋಜನೆಗಳು ಮತ್ತು ಕಾಮಗಾರಿಗಳು (ಶಾದಿಮಹಲ್‌ಗಳು, ಪ್ರಾರ್ಥನಾ ಮಂದಿರಗಳು, ಶಾಲೆಗಳ ಕಟ್ಟಡಗಳು, ಇತ್ಯಾದಿ) ಹಾಗೂ ವೈಯಕ್ತಿಕ ಯೋಜನೆ ಅಡಿಯಲ್ಲಿ (ಆಟೋ ಖರೀದಿ, ಸ್ವಯಂ ಉದ್ಯೋಗ, ಇತ್ಯಾದಿ) ಪ್ರಯೋಜನ ಪಡೆದ ಫಲಾನುಭವಿಗಳ ಸಂಖ್ಯೆಯೆಷ್ಟು ? (ವಿವರ ಒದಗಿಸುವುದು)

## ಚಾಮರಾಜನಗರ ಜಿಲ್ಲೆಯಲ್ಲಿ ಬಸ್ ನಿಲ್ದಾಣ ಕಾಮಗಾರಿ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೮೧ (೧೦೮೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗುಂಡ್ಲುಪೇಟೆಯ ರಾಜ್ಯ ರಸ್ತೆ ಸಾರಿಗೆ ನಿಗಮದ ಘಟಕದ ಅಭಿವೃದ್ಧಿಗೆ ಕೈಗೊಂಡಿರುವ ಕ್ರಮಗಳೇನು ; ಇದಕ್ಕಾಗಿ ಒದಗಿಸಿರುವ ಅನುದಾನ ಎಷ್ಟು ; (ವಿವರ ನೀಡುವುದು)

(ಆ) ಹಂಗಳದಲ್ಲಿ ನೂತನ ಬಸ್ ನಿಲ್ದಾಣ ಸ್ಥಾಪನೆಗೆ ಕ್ರಮ ತೆಗೆದುಕೊಳ್ಳಲಾಗಿದೆಯೇ ; ಇದಕ್ಕೆ ಒದಗಿಸಿರುವ ಅನುದಾನ ಎಷ್ಟು ; ಕಾಮಗಾರಿಯು ಯಾವ ಹಂತದಲ್ಲಿದೆ ;

(ಇ) ಕೊಳ್ಳೇಗಾಲ ಬಸ್ ನಿಲ್ದಾಣದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; ಕಾಮಗಾರಿಗಳ ಹೆಸರು, ಒದಗಿಸಿರುವ ಅನುದಾನ, ಕಾಮಗಾರಿಯ ಹಂತ ಇವುಗಳ ವಿವರ ಒದಗಿಸುವುದು ; ಕೊಳ್ಳೇಗಾಲ, ಹನೂರು ಗ್ರಾಮೀಣ ಪ್ರದೇಶಗಳಿಗೆ ಜನರ ಬೇಡಿಕೆಯಂತೆ ಬಸ್ ಸೌಲಭ್ಯ ಕಲ್ಪಿಸಲು ಕೈಗೊಂಡಿರುವ ಕ್ರಮಗಳೇನು ;

(ಈ) ಮೈಸೂರು, ಚಾಮರಾಜನಗರ ಹೆದ್ದಾರಿಯಲ್ಲಿರುವ ದೊಡ್ಡ ಕವಲಂದೆಯಲ್ಲಿ ನೂತನ ಸುಸಜ್ಜಿತ ಬಸ್ ನಿಲ್ದಾಣವನ್ನು ನಿರ್ಮಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ವಸತಿ ಯೋಜನೆಯ ಫಲಾನುಭವಿಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೮೨ (೧೧೨೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಕೆಲವು ಗ್ರಾಮ ಪಂಚಾಯಿತಿಗಳಲ್ಲಿ ವಸತಿ ಯೋಜನೆಗೆ ಫಲಾನುಭವಿಗಳ ಆಯ್ಕೆ ಮಾಡುವ ಮೀಸಲಾತಿ ಗುರಿಯಲ್ಲಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಗಳ ವರ್ಗದವರು ಇಲ್ಲದಿರುವ ಅಥವಾ ಕಡಿಮೆ ಫಲಾನುಭವಿಗಳು ಇರುವ ಪಂಚಾಯಿತಿಗಳಲ್ಲಿ ಮೀಸಲಾತಿ ಗುರಿ ಹೆಚ್ಚಿಗೆ ನೀಡಲಾಗುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ವರ್ಗದವರು ಇಲ್ಲದಿರುವ ಅಥವಾ ಕಡಿಮೆ ಇರುವ ಗುರಿಯುನ್ನು ಸಾಮಾನ್ಯ ವರ್ಗದವರಿಗೆ ವರ್ಗಾಯಿಸಬಹುದೇ ;

(ಇ) ಕಳೆದ ಮೂರು ವರ್ಷಗಳಲ್ಲಿ ಈ ರೀತಿಯಲ್ಲಿ ಕ್ರಮ ಕೈಗೊಂಡಿರುವ ಪಂಚಾಯಿತಿಗಳೆಷ್ಟು ; ಇದರ ಫಲಾನುಭವಿಗಳ್ಯಾರು ? (ಪಂಚಾಯಿತಿವಾರು ಸಂಪೂರ್ಣ ವಿವರ ನೀಡುವುದು)

## ಯೋಜನೆಗಳ ಅನುಷ್ಠಾನದ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೮೩ (೧೧೨೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ ಅನುಷ್ಠಾನಗೊಳ್ಳುತ್ತಿರುವ ಯೋಜನೆಗಳಾವುವು ;

(ಆ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಇರುವ ಗ್ರಾಮಗಳು ಹಾಗೂ ಗ್ರಾಮ ಪಂಚಾಯಿತಿಗಳು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ೩ ಜಿಲ್ಲೆಗಳಲ್ಲಿನ ಯಾವ ಯಾವ ಗ್ರಾಮ ಪಂಚಾಯಿತಿಗಳನ್ನು ಉನ್ನತ ದರ್ಜೆಗೇರಿಸಲು ಸರ್ಕಾರವು ಪ್ರಸ್ತಾಪಿಸಿರುತ್ತದೆ ; (ವಿವರ ನೀಡುವುದು)

(ಈ) ಈ ೩ ಜಿಲ್ಲೆಗಳ ವ್ಯಾಪ್ತಿಯಲ್ಲಿನ ಗ್ರಾಮ ಪಂಚಾಯಿತಿಗಳಲ್ಲಿ ಸಿಬ್ಬಂದಿಗಳ ಕೊರತೆ ಇದೆಯೇ ; ಇದ್ದಲ್ಲಿ, ಇವುಗಳಲ್ಲಿ ಮಂಜೂರಾದ, ಹಾಲಿ ಇರುವ, ಬಾಕಿ ಇರುವ ಸಿಬ್ಬಂದಿಗಳು ಎಷ್ಟು ? (ಹುದ್ದೆವಾರು ವಿವರ ನೀಡುವುದು)

## ಕೈಗಾರಿಕಾ ವಸಾಹತು ಯೋಜನೆಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೮೪ (೧೧೨೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ, ಹಾವೇರಿ ಜಿಲ್ಲೆಗಳಲ್ಲಿ ಸಾವಿರಾರು ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸಬಹುದಾದಂತಹ ಮಹತ್ವದ ಯೋಜನೆಯಾದ ಸಣ್ಣ ಕೈಗಾರಿಕಾ ವಸಾಹತು ಯೋಜನೆಗೆ ಚಾಲನೆ ನೀಡಲಾಗಿದೆಯೇ ;

(ಆ) ನೀಡಿದ್ದಲ್ಲಿ, ಯಾವ ಭಾಗದಲ್ಲಿ ಎಷ್ಟು ಎಕರೆ ಭೂ ಪ್ರದೇಶವನ್ನು ಈ ಉದ್ದೇಶಕ್ಕಾಗಿ ಕಾಯ್ದಿರಿಸಲಾಗಿದೆ ;

(ಇ) ಆಸಕ್ತರಿಂದ ನಿವೇಶನಕ್ಕಾಗಿ ಅರ್ಜಿ ಸಲ್ಲಿಕೆಯಾಗಿವೆಯೇ ; ಎಷ್ಟು ಅರ್ಜಿಗಳು ಸಲ್ಲಿಕೆಯಾಗಿವೆ ; (ಪೂರ್ಣ ಜಿಲ್ಲಾವಾರು ವಿವರ ನೀಡುವುದು)

(ಈ) ಈ ಯೋಜನೆ ವಿಳಂಬವೇನಾದರೂ ಆಗಿದೆಯೇ ; ಇದಕ್ಕೆ ಕಾರಣಗಳೇನು ;

(ಉ) ಈ ನಿವೇಶನಗಳಿಗೆ ಯಾವಾಗ ದರ ನಿಗಧಿ ಮಾಡಿ ನಿವೇಶನಗಳನ್ನು ಹಂಚಿಕೆ ಮಾಡಲಾಗುವುದು ?

## ಹುದ್ದೆಗಳ ಉನ್ನತೀಕರಣ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೮೫ (೧೧೨೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಸ್ವರಾಜ್ ಕಾಯಿದೆ ಬಲಪಡಿಸಲು ಪಂಚಾಯತ್ ಅಭಿವೃದ್ಧಿ ಹುದ್ದೆಗಳನ್ನು "ಬಿ" ದರ್ಜೆಗೆ ಉನ್ನತೀಕರಿಸುವ ಪ್ರಕ್ರಿಯೆ ಯಾವ ಹಂತದಲ್ಲಿದೆ ;

(ಆ) ಇದನ್ನು ಉನ್ನತೀಕರಿಸುವುದರಿಂದ ಇಲಾಖೆಯಲ್ಲಿ ಉಂಟಾಗುವ ಸಾಧಕ–ಬಾಧಕಗಳೇನು ; (ಪೂರ್ಣ ವಿವರ ನೀಡುವುದು)

(ಇ) ಈ ಉನ್ನತೀಕರಣದಿಂದ ಹಾಲಿ ಇರುವ ಸಿಬ್ಬಂದಿಗಳಿಗೆ ತೊಂದರೆಯುಂಟಾಗುತ್ತದೆಯೇ ?

## ವಿವಿಧ ಯೋಜನೆಗಳ ಅನುಧಾನದ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೧೮೬ (೧೧೨೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ, ಹಾವೇರಿ ಜಿಲ್ಲೆಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ವಸತಿ ಇಲಾಖೆಯ ವಿವಿಧ ಯೋಜನೆಗಳಡಿಯಲ್ಲಿ ಮಂಜೂರಾದ ಮನೆಗಳೆಷ್ಟು ; (ಜಿಲ್ಲಾವಾರು, ಯೋಜನೆವಾರು, ವರ್ಷಾವಾರು ಹಾಗೂ ಫಲಾನುಭವಿವಾರು ಸಂಪೂರ್ಣ ವಿವರ ನೀಡುವುದು)

(ಆ) ಬಸವ ವಸತಿ ಯೋಜನೆಯ ಫಲಾನುಭವಿಗಳನ್ನು ಆಯ್ಕೆ ಮಾಡುವ ಅಧಿಕಾರ ಗ್ರಾಮ ಪಂಚಾಯಿತಿಗಳಿಗೆ ಇದೆಯೇ ; ಅಥವಾ ಆಯಾ ತಾಲ್ಲೂಕು ಶಾಸಕರಿಗೆ ಇದೆಯೇ ;

(ಇ) ಧಾರವಾಡ, ಗದಗ, ಹಾವೇರಿ ಜಿಲ್ಲೆಗಳಲ್ಲಿ ಕಳೆದ ಮೂರು ವರ್ಷದಲ್ಲಿ ಬಸವ ವಸತಿಗೆ ಆಯ್ಕೆಯಾದ ಫಲಾನುಭವಿಗಳ ಪಂಚಾಯಿತಿವಾರು ಸಂಪೂರ್ಣ ವಿವರ ನೀಡುವುದು ;

(ಈ) ಈ ಯೋಜನೆಗಳಲ್ಲಿ ಎಷ್ಟು ಮನೆಗಳ ನಿರ್ಮಾಣ ಪೂರ್ಣಗೊಂಡಿದೆ ; (ವರ್ಷಾವಾರು, ಯೋಜನೆವಾರು, ಜಿಲ್ಲಾವಾರು ವಿವರ ನೀಡುವುದು)

(ಉ) ಯಾವ ಯಾವ ಗ್ರಾಮ ಪಂಚಾಯಿತಿಗಳಲ್ಲಿ ಎಷ್ಟು ಮನೆಗಳು ಅನರ್ಹವೆಂದು ಪರಿಗಣಿಸಲಾಗಿದೆ ; ಇದಕ್ಕೆ ಕಾರಣಗಳೇನು ? (ಯೋಜನೆವಾರು, ವರ್ಷವಾರು ಸಂಪೂರ್ಣ ವಿವರ ನೀಡುವುದು)

## ಪ್ರತಿಭಾ ಕಾರಂಜಿ ನಡೆಸಲು ಬಂದಿರುವ ಅನುದಾನದಲ್ಲಿ ಅವ್ಯವಹಾರ ಕುರಿತು

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೮೭ (೧೧೨೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಕಾರವಾರ ಹಾಗೂ ಶಿರಸಿ ಶೈಕ್ಷಣಿಕ ಜಿಲ್ಲೆಗೆ ಸಂಬಂಧಿಸಿದಂತೆ ದಿನಾಂಕ: ೦೧/೦೧/೨೦೧೧ ರಿಂದ ೦೨/೦೨/೨೦೧೬ರವರೆಗೆ ವಲಯವಾರು, ಕ್ಲಸ್ಟರ್‌ವಾರು ಶಾಲೆಗಳಿಗೆ ಪ್ರತಿಭಾ ಕಾರಂಜಿ ನಡೆಸಲು ಅನುದಾನ ನೀಡಿರುವುದರಲ್ಲಿ ಸಾಕಷ್ಟು ಅವ್ಯವಹಾರ ಆಗಿರುತ್ತದೆಂದು ತಿಳಿದು ಬಂದಿರುವುದು ನಿಜವೇ ; ಹಾಗಾದರೆ, ವಲಯವಾರು, ಕ್ಲಷ್ಟರ್‌ವಾರು ಶಾಲೆಗಳಿಗೆ ಪ್ರತಿಭಾ ಕಾರಂಜಿ ಕುರಿತು ನೀಡಿದ ಅನುದಾನ, ಮಾಡಿದ ಕಾರ್ಯಕ್ರಮವೆಷ್ಟು ? (ತಾಲ್ಲೂಕುವಾರು/ಜಿಲ್ಲಾವಾರು ಆದೇಶದ ನಕಲಿನೊಂದಿಗೆ ವಿವರ ನೀಡುವುದು)

## ಉತ್ತಮ ಶಿಕ್ಷಕ ಪ್ರಶಸ್ತಿ ನೀಡುವಲ್ಲಿ ತಾರತಮ್ಯ ಕುರಿತು

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೮೮ (೧೧೩೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯ (ಶಿರಸಿ/ಕಾರವಾರ ಶೈಕ್ಷಣಿಕ) ಶಿಕ್ಷಣ ಇಲಾಖೆಯಲ್ಲಿ ೨೦೧೨–೧೩ನೇ ಸಾಲಿನಿಂದ ೨೦೧೫–೧೬ನೇ ಸಾಲಿನವರೆಗೆ ಶಿಕ್ಷಕರಿಗೆ ಉತ್ತಮ ಶಿಕ್ಷಕ ಪ್ರಶಸ್ತಿ ನೀಡಿರುವುದರ ವಿವರ, ಅವರ ಹೆಸರು, ಅರ್ಹತೆ ಮುಂತಾದವುಗಳೊಂದಿಗೆ ವಿವರ ನೀಡುವುದು ;

(ಆ) ಜಿಲ್ಲೆಯಲ್ಲಿ ಸದರಿ ಪ್ರಶಸ್ತಿ ನೀಡುವಲ್ಲಿ ಅನೇಕ ಶಿಕ್ಷಕರಿಗೆ ಅನ್ಯಾಯವಾಗಿರುತ್ತದೆಂದು ತಿಳಿದು ಬಂದಿದ್ದು, ಇದು ನಿಜವೇ ; (ವಿವರ ನೀಡುವುದು)

(ಇ) ಸದರಿ ಪ್ರಶಸ್ತಿ ನೀಡುವಲ್ಲಿ ಇರುವ ಮಾನದಂಡವೇನು ? (ವಿವರ ನೀಡುವುದು)

## ಅತಿಥಿ ಶಿಕ್ಷಕರ ನೇಮಕಾತಿಯಲ್ಲಿ ಬಂದಿರುವ ಅನುದಾನದ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೮೯ (೧೧೨೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯಲ್ಲಿ ೨೦೧೪–೧೫, ೨೦೧೫–೧೬ನೇ ಸಾಲಿನಲ್ಲಿ (ಶಿರಸಿ/ ಕಾರವಾರ ಶೈಕ್ಷಣಿಕ) ಶಿಕ್ಷಣ ಇಲಾಖೆಯಲ್ಲಿ ಅತಿಥಿ ಶಿಕ್ಷಕರ ನೇಮಕಾತಿ ಮಾಡಿಕೊಳ್ಳುವಲ್ಲಿ ಬಂದಿರುವ ಅನುದಾನ ಎಷ್ಟು ; (ವಿವರ ನೀಡುವುದು)

(ಆ) ವರ್ಷದ ಕೊನೆಯಲ್ಲಿ ಉಳಿದಿರುವ ಅನುದಾನದ ವಿವರ ಹಾಗೂ ಈ ಉಳಿಕೆ ಅನುದಾನದಲ್ಲಿ ಸರ್ಕಾರಕ್ಕೆ ಹಿಂತಿರುಗಿಸಿದ ಅನುದಾನವೆಷ್ಟು ? (ತಾಲ್ಲೂಕುವಾರು/ಜಿಲ್ಲಾವಾರು ಚಲನ್ ಪ್ರತಿಯ ಸಮೇತ ವಿವರ ನೀಡುವುದು)

## ದಾಂಡೇಲಿ ಬಸ್ ನಿಲ್ದಾಣದಲ್ಲಿ ಅವ್ಯವಸ್ಥೆಯಾಗಿರುವುದನ್ನು ಸರಿಪಡಿಸುವ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦೯೦ (೧೧೩೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕನ್ನಡ ಜಿಲ್ಲೆಯ ದಾಂಡೇಲಿ ಬಸ್ ನಿಲ್ದಾಣವು ತಗ್ಗು–ಗುಂಡಿಗಳಿಂದ ತುಂಬಿದ ರಸ್ತೆಗಳು, ದುರ್ವಾಸನೆ ಬೀರುವ ಶೌಚಾಲಯ, ಎಲ್ಲೆಡೆ ಕಸದ ರಾಶಿ, ಸ್ವಚ್ಛತೆ ಕೊರತೆ ಮುಂತಾದ ಸಮಸ್ಯೆಗಳಿಂದ ಪ್ರಯಾಣಿಕರಿಗೆ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಸದರಿ ಬಸ್ ನಿಲ್ದಾಣಕ್ಕೆ ಬೇಕಾಗಿರುವ ಮೂಲಭೂತ ಸೌಕರ್ಯಗಳನ್ನು ಸಾರ್ವಜನಿಕ ಹಿತ ದೃಷ್ಟಿಯಿಂದ ಕೂಡಲೇ ಮಾಡಿಕೊಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಶಾದಿ ಮಹಲ್, ದರ್ಗಾಗಳಿಗೆ ನೀಡಿದ ಅನುದಾನ ಕುರಿತು

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) –**

೧೯೧ (೧೧೩೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಶಾದಿ ಮಹಲ್, ಸ್ಮಶಾನದ ಕಾಂಪೌಂಡು, ದರ್ಗಾ ಇವುಗಳಿಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಯಾವ ಯಾವ ತಾಲ್ಲೂಕುಗಳಲ್ಲಿ ಇವುಗಳ ನಿರ್ಮಾಣಕ್ಕೆ ಎಷ್ಟು ಮೊತ್ತದ ಪ್ರಸ್ತಾವನೆ ಬಂದಿದೆ ; ಪ್ರಸ್ತಾವನೆಗೆ ಅನುಮೋದನೆ ನೀಡಲಾಗಿದೆಯೇ ;

(ಇ) ಅನುಮೋದನೆ ನೀಡಲಾಗದಿದ್ದಲ್ಲಿ, ಕಾರಣವೇನು ;

(ಈ) ಕೂಡಲೇ ಅನುಮೋದನೆ ನೀಡಲು ಸರ್ಕಾರದ ಕ್ರಮವೇನು ?

## ಕಲಬುರಗಿ ಜಿಲ್ಲೆಯಲ್ಲಿ ವಸತಿ ಯೋಜನೆಯಡಿ ಮಂಜೂರಾಗಿರುವ ಮನೆಗಳು

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) –**

೧೯೨ (೧೯೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಗೆ ಕಳೆದ ಮೂರು ವರ್ಷಗಳಲ್ಲಿ ವಾಜಪೇಯಿ ವಸತಿ ಯೋಜನೆಯಡಿಯಲ್ಲಿ ಮಂಜೂರಾಗಿರುವ ಮನೆಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇಂತಹ ಫಲಾನುಭವಿಗಳನ್ನು ಗುರುತಿಸಲು ಅನುಸರಿಸುತ್ತಿರುವ ಮಾನದಂಡಗಳೇನು ;

(ಇ) ಪ್ರಸ್ತುತ ಸಾಲಿನಲ್ಲಿ ಇಂತಹ ಮನೆಗಳಿಗಾಗಿ ಜಿಲ್ಲೆಯಲ್ಲಿ ಎಷ್ಟು ಅರ್ಜಿಗಳು ಬಂದಿವೆ ; ಮಂಜೂರಾಗಿರುವ ಮನೆಗಳೆಷ್ಟು ?

## 'ಮಹಿಳಾ ಉದ್ಯಮ ಪಾರ್ಕ್'ಗಳ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೧೯೩ (೨೧೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮಹಿಳೆಯಲ್ಲಿರುವ ಉದ್ಯಮಶೀಲತೆಯನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಪ್ರತಿ ಜಿಲ್ಲೆಯಲ್ಲೂ 'ಮಹಿಳಾ ಉದ್ಯಮ ಪಾರ್ಕ್' ನಿರ್ಮಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ;

(ಆ) ಇದ್ದಲ್ಲಿ, ಇದಕ್ಕೆ ನಿಗಧಿಪಡಿಸಿರುವ ಕಾಲಮಿತಿ ಏನು ;

(ಇ) ಸದರಿ "ಮಹಿಳಾ ಉದ್ಯಮ ಪಾರ್ಕ್‌ಗಳಲ್ಲಿ" ಮಹಿಳಾ ಉದ್ಯಮಿಗಳಿಗೆ ನೀಡಲಿರುವ ವಿಶೇಷ ವಿನಾಯಿತಿ ಮತ್ತು ಸೌಲಭ್ಯಗಳಾವುವು ? (ಸಂಪೂರ್ಣ ವಿವರ ನೀಡುವುದು)

## ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಯ ವೃಂದವನ್ನು ಮೇಲ್ದರ್ಜೆಗೇರಿಸುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೧೯೪೪ (೧೨೧೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಯ ವೃಂದವನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ;

(ಆ) ಇದ್ದಲ್ಲಿ, ಸದರಿ ಪ್ರಸ್ತಾವನೆಯನ್ನು ಕಾರ್ಯರೂಪಕ್ಕೆ ತರಲು ಇರುವ ಕಾಲಮಿತಿಯೇನು ;

(ಇ) ಸದರಿ ವೃಂದವನ್ನು ಮೇಲ್ದರ್ಜೆಗೇರಿಸಿದಲ್ಲಿ, ನಂತರ ಈ ವೃಂದಕ್ಕೆ ನೀಡಲಿರುವ ಹೆಚ್ಚುವರಿ ಜವಾಬ್ದಾರಿ ಮತ್ತು ಹೊಣೆಗಾರಿಕೆಗಳೇನು ? (ಸಂಪೂರ್ಣ ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿನ ಸರ್ಕಾರಿ ಶಾಲೆಗಳ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೧೯೪೫ (೧೨೧೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಸರ್ಕಾರಿ (ಪ್ರಾಥಮಿಕ, ಮಾಧ್ಯಮಿಕ ಮತ್ತು ಪ್ರೌಢ ಶಾಲೆಗಳು) ಶಾಲೆಗಳ ಸಂಖ್ಯೆ ಎಷ್ಟು ;

(ಆ) ಸದರಿ ಶಾಲೆಗಳಲ್ಲಿ ಸ್ವಂತ ಕಟ್ಟಡ ಹೊಂದಿರುವ ಶಾಲೆಗಳ ಸಂಖ್ಯೆ ಎಷ್ಟು ; ಹಾಗೂ ಶಿಥಿಲಾವಸ್ಥೆಯಲ್ಲಿರುವ ಕಟ್ಟಡಗಳ ಸಂಖ್ಯೆ ಎಷ್ಟು ;

(ಇ) ಸ್ವಂತ ಕಟ್ಟಡ ಹೊಂದಿರದ ಸರ್ಕಾರಿ ಶಾಲೆಗಳಿಗೆ ಹೊಸದಾಗಿ ಕಟ್ಟಡ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಕಾಲಮಿತಿ ಏನು ?

## ರೂರಲ್ ಡೆವಲಪ್‌ಮೆಂಟ್ ಆಫೀಸರ್ಸ್ (R.D.O) ಹುದ್ದೆಯ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೧೯೯೬ (೧೨೯೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೂರಲ್ ಡೆವಲಪ್‌ಮೆಂಟ್ ಆಫೀಸರ್ಸ್ (R.D.O) ಹುದ್ದೆಯನ್ನು ಸೃಜಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ;

(ಆ) ಇದ್ದಲ್ಲಿ, ಸದರಿ ಹುದ್ದೆಗೆ ಪಂಚಾಯತ್ ಅಭಿವೃದ್ಧಿ ಅಧಿಕಾರಿ ವೃಂದದಿಂದ ಪದೋನ್ನತಿ ನೀಡಿ, ತುಂಬಲಾಗುತ್ತಿದೆಯೇ ;

(ಇ) ಸದರಿ ಹುದ್ದೆಯನ್ನು ಸೃಜಿಸಿದಲ್ಲಿ, ಈ ವೃಂದದ ಜವಾಬ್ದಾರಿ, ಹೊಣೆಗಾರಿಕೆಗಳೇನು ? (ಸಂಪೂರ್ಣ ವಿವರ ನೀಡುವುದು)

## ನೆರೆ ಹಾವಳಿಗೆ ನೊಂದವರಿಗೆ ಮನೆ ನೀಡುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ ) (ನಾಮನಿರ್ದೇಶನ ಹೊಂದಿದವರು) –**

೧೯೯೭ (೧೨೬೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಉತ್ತರ ಭಾಗದಲ್ಲಿ ೨೦೦೯ರ ನೆರೆ ಹಾವಳಿಯಿಂದಾಗಿ ಸಂತ್ರಸ್ತರಾದ ಕುಟುಂಬಗಳಿಗೆ 'ಆಸರೆ ಮನೆ'ಗಳ ವಿತರಣೆ ಸಮರ್ಪಕವಾಗಿಲ್ಲ ಎಂಬ ದೂರುಗಳು ಸರ್ಕಾರದ ಗಮನದಲ್ಲಿವೆಯೇ ;

(ಆ) ಈ ನೆರೆ ಹಾವಳಿಯಿಂದಾಗಿ ವಿವಿಧ ಜಿಲ್ಲೆಗಳಲ್ಲಿ ಸಂತ್ರಸ್ತರಾದ ಕುಟುಂಬಗಳ ತಾಲ್ಲೂಕುವಾರು, ಸ್ಥಳೀಯ ಸಂಸ್ಥೆವಾರು, ಗ್ರಾಮವಾರು ವಿವರ, ವಿವಿಧ ಸಂಸ್ಥೆಗಳು ತಾಲ್ಲೂಕುವಾರು, ನಿರ್ಮಿಸಿದ ಆಸರೆ ಮನೆಗಳ ಗ್ರಾಮವಾರು ಸಂಖ್ಯಾ ವಿವರ, ಈ ಗುತ್ತಿಗೆದಾರರಿಗೆ ಪಾವತಿಸಿದ ಮೊತ್ತದ ವಿವರ ನೀಡುವುದು ;

(ಇ) ವಿವಿಧ ಜಿಲ್ಲೆಗಳಲ್ಲಿ ಈ ಆಸರೆ ಮನೆಗಳನ್ನು ಹಂಚಲಾಗಿದೆಯೇ ? (ಹಂಚಿದ್ದರೆ ಈ ಮನೆಗಳನ್ನು ಪಡೆದ ಫಲಾನುಭವಿಗಳ ತಾಲ್ಲೂಕುವಾರು, ಗ್ರಾಮವಾರು ಯಾದಿಯನ್ನು ನೀಡುವುದು)

## ಕಾಮಗಾರಿಗಳಿಗೆ ಅನುದಾನ ಬಿಡುಗಡೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) –**

೧೯೮ (೮೩೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆ, ತುರುವೇಕೆರೆ ತಾಲ್ಲೂಕು, ಗೋಣಿ ತುಮಕೂರು ಮಂಡಲ ಪಂಚಾಯಿತಿ ವ್ಯಾಪ್ತಿಯಲ್ಲಿ ಯಾವ ಯಾವ ಗ್ರಾಮಗಳು ಬರುತ್ತವೆ ;

(ಆ) ಕಳೆದ ೫ ವರ್ಷಗಳಿಂದ ಯಾವ ಯಾವ ಗ್ರಾಮಗಳಿಗೆ ಯಾವ ಯಾವ ಕಾಮಗಾರಿಗಳಿಗಾಗಿ ಹಣ ನೀಡಲಾಗಿರುತ್ತದೆ ; ಅವುಗಳಲ್ಲಿ ಯಾವ ಯಾವ ಕಾಮಗಾರಿಗಳನ್ನು ಮಾಡಲಾಗಿರುತ್ತದೆ ; ಹಾಗೂ ಮಾಡದೇ ಇರುವ ಕಾಮಗಾರಿಗಳು ಯಾವುವು ; (ಕಾಮಗಾರಿವಾರು ಪೂರ್ಣ ವಿವರ ಒದಗಿಸುವುದು)

(ಇ) ಸದರಿ ಯಾವ ಯಾವ ಗ್ರಾಮಗಳಿಗೆ ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ವತಿಯಿಂದ ಕಳೆದ ೫ ವರ್ಷಗಳಲ್ಲಿ ಯಾವ ಯಾವ ಕಾಮಗಾರಿಗಳಿಗಾಗಿ ಎಷ್ಟೆಷ್ಟು ಹಣ ಬಿಡುಗಡೆಯಾಗಿರುತ್ತದೆ ; (ಪ್ರತಿ ಗ್ರಾಮವಾರು ಹಾಗೂ ವರ್ಷವಾರು ಕಾಮಗಾರಿಗಳ ಪೂರ್ಣ ವಿವರ ಒದಗಿಸುವುದು)

(ಈ) ಮೇಲ್ಕಂಡ ಮಂಡಲ ಪಂಚಾಯಿತಿಗೆ ಯಾವ ಯಾವ ಗ್ರಾಮಗಳಿಗೆ ಸಮುದಾಯ ಭವನ/ಸಾಂಸ್ಕೃತಿಕ ಭವನಕ್ಕೆ ಸೂಕ್ತ ಮಾಹಿತಿ ಒದಗಿಸಬೇಕೆಂದು ಸರ್ಕಾರದಿಂದ ಪ್ರಸ್ತಾಪ ಬಂದಿರುತ್ತದೆ ; ಹಾಗೂ ಸರ್ಕಾರಕ್ಕೆ ಯಾವ ಯಾವ ಅಧಿಕಾರಿಗಳ ಹಂತಗಳಲ್ಲಿ ಎಷ್ಟೆಷ್ಟು ದಿನಾಂಕಗಳಲ್ಲಿ ಯಾವ ಯಾವ ಮಾಹಿತಿ ಒದಗಿಸಲಾಗಿರುತ್ತದೆ ; ಒದಗಿಸಿದ್ದಲ್ಲಿ, ವಿಳಂಬಕ್ಕೆ ಕಾರಣರ್ಯಾರು ?

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು.

ಸರ್ಕಾರಿ ಮುದ್ರಣಾಲಯ, ಬೆಳಗಾವಿ